

ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 187, ಪುಟಗಳು: 8, ಮಂಗಳವಾರ, 16 ಏಪ್ರಿಲ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಮಂಗಳವಾರ 16, ಏಪ್ರಿಲ್ -2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು
- ಚೈತ್ರ ಮಾಸ, ಶುಕ್ಲ ಪಕ್ಷ
- ವಾರ:ಮಂಗಳವಾರ, ತಿಥಿ: ಅಷ್ಟಮಿ
- ನಕ್ಷತ್ರ: ಪುನರ್ವಸು
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

## ಸಂಕ್ಷಿಪ್ತ ಸುದ್ದಿ

### ರಾಮ ನವಮಿ, ನಾಳೆ ಬೆಂಗಳೂರಿನಲ್ಲಿ ಮಾಂಸ ಮಾರಾಟಕ್ಕೆ ನಿಷೇಧ



**ಬೆಂಗಳೂರು:** ರಾಮನವಮಿ ಆಚರಣೆಯ ಕಾರಣ ಬುಧವಾರ ಬೆಂಗಳೂರಿನಲ್ಲಿ ಮಾಂಸ ಮಾರಾಟ ನಿಷೇಧಿಸಿ ಬಿಬಿಎಂಪಿ ಆದೇಶ ಹೊರಡಿಸಿದೆ. ರಾಮ ನವಮಿಯ ಕಾರಣ ನಗರದಲ್ಲಿ ಮಾಂಸ ಮಾರಾಟ ಮತ್ತು ಪ್ರಾಣಿ ಹತ್ಯೆಯನ್ನು ನಿಷೇಧಿಸಲಾಗಿದೆ ಎಂದು ಬಿಬಿಎಂಪಿಯ ಪಶುಸಂಗೋಪನಾ ಇಲಾಖೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಸಾಮಾನ್ಯವಾಗಿ ಹಿಂದೂ ಹಬ್ಬಗಳ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ಪ್ರತಿ ಬಾರಯೂ ಬಿಬಿಎಂಪಿ ಈ ಕ್ರಮ ಕೈಗೊಳ್ಳುತ್ತದೆ. ಪುಟ 2

### ಬೆಂಗಳೂರಿನ ಸಾರ್ವಜನಿಕ ಶೌಚಾಲಯಗಳ ದರ ದುಪ್ಪಟ್ಟು



**ಬೆಂಗಳೂರು:** ಬೆಂಗಳೂರಿನ ಸಾರ್ವಜನಿಕ ಶೌಚಾಲಯಗಳ ಮೇಲೂ ನೀರಿನ ಕೊರತೆ ಪರಿಣಾಮ ಬೀರಿದೆ. ಪರಿಣಾಮವಾಗಿ ಮುಂದಿನ ಬಾರಿ ನೀವು ಸಾರ್ವಜನಿಕ ಶೌಚಾಲಯಕ್ಕೆ ಹೋದಾಗ ಹೆಚ್ಚು ಹಣ ತೆರಬೇಕಾಗಲಿದೆ. ಹೌದು, ಬೆಂಗಳೂರಿನ ಸಾರ್ವಜನಿಕ ಶೌಚಾಲಯಗಳ ದರ ಹೆಚ್ಚಳ ಮಾಡಲಾಗಿದ್ದು, ಇದೀಗ ದುಪ್ಪಟ್ಟಾಗಿದೆ. ಈವರೆಗೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಿರ್ವಹಿಸುವ ಸಾರ್ವಜನಿಕ ಶೌಚಾಲಯಗಳು ಜನರಿಂದ ಮೂತ್ರ ವಿಸರ್ಜನೆಗೆ 2 ರೂ. ಮತ್ತು ಮಲವಿಸರ್ಜನೆಗೆ 5 ರೂ. ವಿಧಿಸುತ್ತಿದ್ದವು. ಆದರೆ ನಗರದಲ್ಲಿ ನೀರಿನ ಕೊರತೆ ಕಾಣಿಸಿಕೊಂಡ ಕಾರಣ ಕಳೆದ ಕೆಲವು ದಿನಗಳಿಂದ ದರವನ್ನು ಕ್ರಮವಾಗಿ 5 ಮತ್ತು 10 ರೂ.ಗೆ ಹೆಚ್ಚಿಸಲಾಗಿದೆ. ಪುಟ 2

ಎಟಿಎಂಗೆ ಹಣ ತುಂಬುವ ವಾಹನ ಜಪ್ತಿ

## 2.93 ಕೋಟಿ ರೂ. ಪತ್ತೆ

**ಆನೇಕಲ್:** ಸೂಕ್ತ ದಾಖಲೆ ಇಲ್ಲದೆ ವಾಹನದಲ್ಲಿದ್ದ ಸಾಗಿಸುತ್ತಿದ್ದ 2.93 ಕೋಟಿ ರೂ. ಅನ್ನು ಹೆಬ್ಬಗೋಡಿ ಪೊಲೀಸರು ಸೀಜ್ ಮಾಡಿದ್ದಾರೆ. ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲೂಕಿನ ಹೆಬ್ಬಗೋಡಿಯಲ್ಲಿ ಸಿಎಂಎಸ್ ಏಜೆನ್ಸಿಗೆ ಸೇರಿದ ವಾಹನದಲ್ಲಿ ಎಟಿಎಂಗೆ ಹಣ ಸಾಗಿಸುವಾಗ ವಶಕ್ಕೆ ಪಡೆಯಲಾಗಿದೆ. ಹೆಬ್ಬಗೋಡಿ ಪೊಲೀಸರು ಗಸ್ತು ತಿರುಗುತ್ತಿದ್ದ ವೇಳೆ ವಾಹನ ಪರಿಶೀಲನೆ ಮಾಡಿದ್ದು, ಬಂದೂಕು ಸಹಿತ ಸೆಕ್ಯೂರಿಟಿ ಗಾರ್ಡ್ ಇಲ್ಲದೆ ಹಣ ಸಾಗಿಸುತ್ತಿರುವುದು ಪತ್ತೆ ಆಗಿದೆ. ಅನುಮಾನಗೊಂಡು ಪರಿಶೀಲಿಸಿದಾಗ ದಾಖಲೆ ಇಲ್ಲದ ಹಣ ಪತ್ತೆ ಆಗಿದ್ದು, ಹಣದ ಬಗ್ಗೆ ಚುನಾವಣಾ ಆಯೋಗ ಮತ್ತು ಐಟಿ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ.





ಒಡಿಶಾದಲ್ಲಿ ಸೇತುವೆಯಿಂದ ಕೆಳಗುರುಳಿದ ಬಸ್

## ಐವರು ಸಾವು

**ಒಡಿಶಾ:** ಒಡಿಶಾದಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಪುರಿಯಿಂದ ಪಶ್ಚಿಮ ಬಂಗಾಳಕ್ಕೆ ತೆರಳುತ್ತಿದ್ದ ಬಸ್ ವೊಂದು ಚಾಲಕನ ನಿಯಂತ್ರಣ ತಪ್ಪಿ ಸೇತುವೆಯಿಂದ ಕೆಳಗುರುಳಿರುವ ಘಟನೆ ನಡೆದಿದೆ. ಐವರು ಸಾವನ್ನಪ್ಪಿದ್ದು 40ಕ್ಕೂ ಅಧಿಕ ಮಂದಿಗೆ ಗಾಯಗಳಾಗಿವೆ. ಮೃತರನ್ನು ಗುರುತಿಸುವ ಪ್ರಯತ್ನ ಮುಂದುವರಿದಿದೆ ಎಂದು ಎಸ್ಪಿ ವಿನೀತ್ ಅಗರ್ವಾಲ್ ತಿಳಿಸಿದ್ದಾರೆ. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಹೆಚ್ಚಿನ ಪ್ರಯಾಣಿಕರು ಪಶ್ಚಿಮ ಬಂಗಾಳದ ನಿವಾಸಿಗಳಾಗಿದ್ದಾರೆ. ರಾಷ್ಟ್ರೀಯ ಹೆದ್ದಾರಿ-16ರ ಬಾರಾಬತಿ ಸೇತುವೆ ಮೇಲೆ ರಾತ್ರಿ 9 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪುಟ 2



# ಅಕ್ರಮಗಳ ಸರಮಾಲೆ

## ಬಿಜೆಪಿ ನಿಯೋಗದಿಂದ ಆಯೋಗಕ್ಕೆ ಮೂರು ದೂರು ಸಲ್ಲಿಕೆ

**ಬೆಂಗಳೂರು:** ರಾಜ್ಯದಲ್ಲಿ ಏಪ್ರಿಲ್ 26ರಂದು ಮೊದಲ ಹಂತದ ಮತದಾನ ನಡೆಯಲಿದೆ. ಇತ್ತ ನಾಯಕರು ಆಲಿ, ಸಮಾವೇಶ, ರೋಡ್ ಶೋ ಅಂತಾ ಮತಯಾಚನೆ ಮಾಡುತ್ತಿದ್ದಾರೆ. ಮಾತಿನ ಭರದಲ್ಲಿ ಕೆಲ ನಾಯಕರು ಯಡವಟ್ಟು ಮಾಡಿಕೊಳ್ಳುತ್ತಿದ್ದಾರೆ. ಅವರ ವಿರುದ್ಧ ಚುನಾವಣಾ ಆಯೋಗಕ್ಕೆ ಕಾಂಗ್ರೆಸ್, ಬಿಜೆಪಿ ಮುಖಂಡರು ದೂರು ಸಲ್ಲಿಸಿದ್ದಾರೆ. ಬಿಜೆಪಿ ಕಾನೂನು ವಿಭಾಗದ ಮುಖ್ಯಸ್ಥ ವಿವೇಕ್ ರೆಡ್ಡಿ ನೇತೃತ್ವದ ನಿಯೋಗ ಚುನಾವಣಾ ಆಯೋಗಕ್ಕೆ ಸೋಮವಾರ ಮೂರು ದೂರು ಸಲ್ಲಿಸಿದೆ.

**ನೀತಿ ಸಂಹಿತೆ ಉಲ್ಲಂಘಿಸಿ ಸ್ವಾಗತ:** ಭಾನುವಾರ ಬಳ್ಳಾರಿಯಲ್ಲಿ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಗೆ ಅದ್ದೂರಿಯಾಗಿ ಸ್ವಾಗತ ಕೋರಲಾಗಿತ್ತು. ಈ ವೇಳೆ ಚುನಾವಣಾ ಆಯೋಗದ ಅನುಮತಿ ಪಡೆಯದೆ ನೀತಿಸಂಹಿತೆ ಉಲ್ಲಂಘಿಸಲಾಗಿದೆ ಎಂದು ಬಿಜೆಪಿ ನಿಯೋಗ ದೂರು ನೀಡಿದೆ. ಅದರಲ್ಲಿ ಸಿಎಂ ಸಿದ್ದರಾಮಯ್ಯ, ಸಚಿವ ಡಿ.ಸುಧಾಕರ್ ಉಲ್ಲೇಖಿಸಿ ಕ್ರಮಕೈಗೊಳ್ಳುವಂತೆ ಮನವಿ ಮಾಡಿದೆ

**5 ಕೆಜಿ ಅಕ್ಕಿ ಕೊಡ್ತಿದ್ದೆ ಎಂದ ಸಿಎಂ:** ಕಳೆದ ಬಾರಿ 5 ಕೆಜಿ ಅಕ್ಕಿ ಕೊಡ್ತಿದ್ದೆ ಎಂದು ಟ್ವೀಟ್ ಮಾಡಿದ್ದ ಸಿಎಂ ಸಿದ್ದರಾಮಯ್ಯ ವಿರುದ್ಧವೂ ಬಿಜೆಪಿ ದೂರು ನೀಡಿದೆ. ಇದು ಸುಳ್ಳು ಎಂದು ಚುನಾವಣಾ ಆಯೋಗಕ್ಕೆ ಬಿಜೆಪಿ ನಿಯೋಗ ದೂರು ಸಲ್ಲಿಸಿದೆ





**ಡಿ ಸುಧಾಕರ್ ವಿರುದ್ಧವೂ ದೂರು:** ಸಚಿವ ಡಿ.ಸುಧಾಕರ್ ವಿರುದ್ಧವೂ ಬಿಜೆಪಿ ನಿಯೋಗ ದೂರು ನೀಡಿದೆ. ಚಿತ್ರದುರ್ಗದಲ್ಲಿ 70 ಸಾವಿರ ಲೀಡ್ ಕೊಟ್ರೆ, 25 ಕೋಟಿ ಅನುದಾನ ನೀಡುತ್ತೇನೆ ಎಂದು ಡಿ.ಸುಧಾಕರ್ ಹೇಳಿದ್ದರು. ಈ ಹೇಳಿಕೆ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಬಿಜೆಪಿ ದೂರು ಸಲ್ಲಿಸಿದೆ.

**ತೇಜಸ್ವಿ ಸೂರ್ಯ ವಿರುದ್ಧ ಹಲ್ಲೆ ಆರೋಪ: ಆಯೋಗಕ್ಕೆ ದೂರು:** ಸಂಸದ ತೇಜಸ್ವಿ ಸೂರ್ಯ ಹಲ್ಲೆ ಮಾಡಿ ದರ್ಪ ತೋರಿದ್ದಾರೆಂದು ಕಾಂಗ್ರೆಸ್ ಚುನಾವಣಾ ಆಯೋಗಕ್ಕೆ ದೂರು ನೀಡಿದೆ. ಮೊನ್ನೆ ಬೆಂಗಳೂರಿನಲ್ಲಿ ನಡೆದಿದ್ದ ರಾಘವೇಂದ್ರ ಕೋಪರೇಟೀವ್ ಬ್ಯಾಂಕ್ ಸಂತ್ರಸ್ತರ ಸಭೆಯಲ್ಲಿ ತೇಜಸ್ವಿ ಸೂರ್ಯ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಿ ಎಂಎಲ್‌ಸಿ ಯುಬಿ ವೆಂಕಟೇಶ್ ನೇತೃತ್ವದ ನಿಯೋಗ ದೂರು ನೀಡಿದೆ. ಪುಟ 2

ಐಟಿ ಮತ್ತು ಪೊಲೀಸರ ಜಂಟಿ ಕಾರ್ಯಾಚರಣೆ

ಮನೆಯಲ್ಲಿದ್ದ 2 ಕೋಟಿಗೂ ಹೆಚ್ಚು

## ನಗದು ಜಪ್ತಿ

**ಹುಬ್ಬಳ್ಳಿ:** ಐಟಿ ಅಧಿಕಾರಿಗಳು ಮತ್ತು ಪೊಲೀಸರ ಜಂಟಿ ಕಾರ್ಯಾಚರಣೆ ಹಿನ್ನೆಲೆ ಧಾರವಾಡ ಜಿಲ್ಲೆಯ ಕುಂದಗೋಳ ತಾಲೂಕಿನ ರಾಮನಕೊಪ್ಪ ಗ್ರಾಮದ ಮನೆಯಲ್ಲಿ ಬರೋಬ್ಬರಿ 2 ಕೋಟಿ ರೂ. ಗೂ ಹೆಚ್ಚು ನಗದು ಜಪ್ತಿ ಮಾಡಲಾಗಿದೆ. ನಿಂಗಪ್ಪ ಜಟಾದ್ ಎಂಬುವವರ ಮನೆಯಲ್ಲಿ ಮತದಾರರಿಗೆ ಹಂಚಲು 2 ಕೋಟಿ ರೂ. ಹೆಚ್ಚು ನಗದು ಸಂಗ್ರಹಿಸಲಾಗಿತ್ತು. ಮತ್ತೊಂದು ಪ್ರಕರಣದಲ್ಲಿ ಚುನಾವಣಾ ನೀತಿ ಸಂಹಿತೆ ಹಾಗೂ ಅಬಕಾರಿ ನಿಯಮ ಉಲ್ಲಂಘಿಸಿದ ಹಿನ್ನೆಲೆ ಲಾರಿಯಲ್ಲಿದ್ದ 16 ಲಕ್ಷ ರೂ ಮೌಲ್ಯದ 9420 ಲೀಟರ ಬಿಯರ್ ಜಪ್ತಿ ಮಾಡಲಾಗಿದೆ. ಪುಟ 2



ಮಹಿಳೆಯರಿಗೆ ಅಪಮಾನ ಆರೋಪ

## ಎಚ್‌ಡಿಕೆಗೆ ಸಂಕಷ್ಟ



**ಬೆಂಗಳೂರು:** 'ಈ ಸರ್ಕಾರ ಐದು ಗ್ಯಾರಂಟಿ ಘೋಷಣೆ ಮಾಡಿ, ನನ್ನ ಹಳ್ಳಿಯ ತಾಯಂದಿರು ಸ್ವಲ್ಪ ದಾರಿ ತಪ್ಪಿದ್ದಾರೆ' ಎನ್ನುವ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರ ಹೇಳಿಕೆ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಇದನ್ನೇ ಲೋಕಸಭಾ ಚುನಾವಣೆಗೆ ಅಸ್ತ್ರವನ್ನಾಗಿರು ಮಾಡಿಕೊಂಡಿರುವ ಕಾಂಗ್ರೆಸ್, ಎಚ್ ಡಿಕೆ ವಿರುದ್ಧ ಪ್ರತಿಭಟನೆಗಿಳಿದಿದೆ. ಈಗಾಗಲೇ ಈ ಸಂಬಂಧ ರಾಜ್ಯ ಮಹಿಳಾ ಆಯೋಗ ಕುಮಾರಸ್ವಾಮಿ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದ್ದು, ಈ ಬಗ್ಗೆ ಉತ್ತರಿಸುವಂತೆ ನೋಟಿಸ್ ಸಹ ಜಾರಿ ಮಾಡಿದೆ. ಇದೀಗ ಕಾಂಗ್ರೆಸ್ ಮತ್ತೊಂದೆ ಹೆಜ್ಜೆ ಮುಂದೆ ಹೋಗಿ ಕುಮಾರಸ್ವಾಮಿ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

ಮಾಜಿ ಸಂಸದ ಉಗ್ರಪ್ಪ, ಮಾಜಿ ಮೇಯರ್ ರಾಮಚಂದ್ರಪ್ಪ ಅವರು ಏಪ್ರಿಲ್ 15 ಚುನಾವಣಾ ಆಯೋಗಕ್ಕೆ ದೂರು ನೀಡಿದರು. ಗ್ಯಾರಂಟಿಗಳಿಂದ ಮಹಿಳೆಯರು ದಾರಿ ತಪ್ಪಿದ್ದಾರೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಹೇಳಿಕೆಗೆ ಸಮಜಾಯಿಷಿ ನೀಡಿ ಕಾಂಗ್ರೆಸ್ ಮೇಲೆ ಹರಿಹಾಯ್ದಿದ್ದಾರೆ. ಅಲ್ಲದೇ ಕ್ಷಮೆ ಯಾಚಿಸುವ ಮೂಲಕ ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಹೀಗಾಗಿ ಕುಮಾರಸ್ವಾಮಿ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ದೂರಿನಲ್ಲಿ ಮನವಿ ಮಾಡಿದೆ. ಪುಟ 2

ಅಭಿವೃದ್ಧಿಗೆ ಮಾರಕವಾಯ್ತಾ ನಕ್ಸಲ್ ಹಣೆಪಟ್ಟಿ

ಮೂಲಭೂತ ಸೌಕರ್ಯದಿಂದ ವಂಚಿತವಾದ

## ಉಡುಪಿ ಜಿಲ್ಲೆಯ ಗ್ರಾಮಗಳು

**ಉಡುಪಿ:** ಉಡುಪಿ ಬುದ್ಧಿವಂತರ ಮತ್ತು ಮುಂದುವರಿದ ಜಿಲ್ಲೆ ಎನ್ನುವ ಮಾತಿದೆ. ಆದರೆ ಗ್ರಾಮೀಣ ಭಾಗದ ನೈಜ ಸತ್ಯವೇ ಬೇರೆ. ಜಿಲ್ಲೆಯ ಹಲವು ಗ್ರಾಮೀಣ ಪ್ರದೇಶಗಳು ಮೂಲಭೂತ ಅಭಿವೃದ್ಧಿಯನ್ನೇ ಕಂಡಿಲ್ಲ. ಅದರಲ್ಲೂ ನಕ್ಸಲ್ ಪೀಡಿತ ಗ್ರಾಮಗಳೆಂಬ ಹಣೆಪಟ್ಟಿ ಅಭಿವೃದ್ಧಿಗೆ ಮಾರಕವಾಗಿರುವುದರಿಂದ ಚುನಾವಣೆ ಸಮಯದಲ್ಲಿ ಸಾಕಷ್ಟು ಆಕ್ರೋಶ ಕೇಳಿಬರುತ್ತಿವೆ. ಜಿಲ್ಲೆಯ ಕಾರ್ಕಳ, ಕುಂದಾಪುರ, ಬೈಂದೂರು ತಾಲೂಕಿನ ಹಲವು ಗ್ರಾಮಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದೆ. ಪುಟ 2





## ಏ.18ರಿಂದ ಜಿಲ್ಲೆಗಳಲ್ಲಿ 5 ದಿನ ಮಳೆ

**ಬೆಂಗಳೂರು:** ಬಿಸಿಲ ಝಳದಿಂದ ಬಸವಳಿದಿದ್ದ ಕರ್ನಾಟಕದ ಜನತೆಗೆ ತಂಪೆರೆಯಲು ವರುಣದೇವ ಬರಲಿದ್ದಾನೆ. ಈ ಬಾರಿ ಮುಂಗಾರು ಕೂಡ ವಾಡಿಕೆಗಿಂತ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಾಗೆಯೇ ಉತ್ತರ ಒಳನಾಡು, ದಕ್ಷಿಣ ಒಳನಾಡು, ಕರಾವಳಿ ಭಾಗಗಳಲ್ಲಿ ಏಪ್ರಿಲ್ 18ರಿಂದ ಮಳೆಯಾಗಲಿದೆ. ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಏಪ್ರಿಲ್ 18ರಿಂದ ಐದು ದಿನಗಳ ಕಾಲ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ,ಹಾವೇರಿ, ಕಲಬುರಗಿ,ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿಯಲ್ಲಿ ಮಳೆಯಾಗಲಿದೆ.

ಹಾಗೆಯೇ ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು, ದಾವಣಗೆರೆ, ಹಾಸನ, ಕೊಡಗು, ಮೈಸೂರು, ರಾಮನಗರ, ಶಿವಮೊಗ್ಗ, ವಿಜಯನಗರದಲ್ಲೂ ಮಳೆಯಾಗಲಿದೆ.



ಕಲಬುರಗಿ ಹಾಗೂ ರಾಯಚೂರಿನಲ್ಲಿ 39.2 ಡಿಗ್ರಿ ಸೆಲ್ಸಿಯಸ್ ಅತ್ಯಂತ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಬೆಂಗಳೂರಿನಲ್ಲಿ ಶುಭ್ರ ಆಕಾಶವಿರಲಿದ್ದು, ಎಚ್ ಎಎಲ್ ನಲ್ಲಿ 34.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 35.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್ ನಲ್ಲಿ 34.7 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 35.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ. ಪುಟ 2

ಲಕ್ಷ್ಮಣ ತೀರ್ಥ ನದಿ ಬತ್ತಲು ಕಾರಣ

## ಹವಾಮಾನ ವೈಪರೀತ್ಯ

**ಕೊಡಗು:** ಕೊಡಗು ಜಿಲ್ಲೆ ಅಂದರೆ ಬೆಟ್ಟ, ಗುಡ್ಡ, ಕಾಡು, ಮೇಡು, ನದಿ ಜಲ ತೊರೆಗಳಿಗೆ ಪ್ರಸಿದ್ಧಿ. ಆದರೆ ಈ ಬಾರಿಯ ಭೀಕರ ಬರ ಮತ್ತು ಬಿಸಿಲತಾಪಕ್ಕೆ ಈ ಪ್ರಕೃತಿಯ ಖನಿಜ ತತ್ತರಿಸಿ ಹೋಗಿದೆ. ಕಾವೇರಿ ನದಿ ಹರಿಯುವಿಕೆ ನಿಲ್ಲಿಸಿದ ಬೆನ್ನಲ್ಲೇ ಇದೀಗ ಜಿಲ್ಲೆಯ ಮತ್ತೊಂದು ಪ್ರಮುಖ ನದಿ ಲಕ್ಷ್ಮಣ ತೀರ್ಥ ನದಿ ಕೂಡ ಸಂಪೂರ್ಣ ಬತ್ತಿಹೋಗಿದೆ. ಪೊನ್ನಂಪೇಟೆ ತಾಲ್ಲೂಕಿನ ಕುಟ್ಟ ಭಾಗದ ದಟ್ಟಾರಣ್ಯದಲ್ಲಿ ಜನ್ಮತಳೆದು ಮೈಸೂರಿನ ಪಿರಿಯಾಪಟ್ಟಣ, ಹುಣಸೂರು ಮೂಲಕ ಕಾವೇರಿ ಸೇರಿ ಅಲ್ಲಿಂದ ಕೆಆರ್ ಜಲಾಶಯದಲ್ಲಿ ಒಂದಾಗುತ್ತದೆ.

ಸುಮಾರು 180 ಕಿಮಿ ಹರಿಯುವ ಈ ನದಿ ದಕ್ಷಿಣ ಕೊಡಗು ಜನರ ಜೀವನಾಡಿ. ಬಹುತೇಕ ವರ್ಷ ಎಲ್ಲಾ ದಿನಗಳೂ ಈ ನದಿ ಹರಿಯುತ್ತದೆ. ಆದರೆ ಈ ವರ್ಷ ಮಾತ್ರ ಏಪ್ರಿಲ್ ಆರಂಭದಲ್ಲೇ ಸಂಪೂರ್ಣ ಭತ್ತಿ ಹೋಗಿದೆ. ನದಿಯಲ್ಲಿ ಎಲ್ಲೆಲ್ಲೂ ನೀರಿನ ಸುಳಿವೇ ಕಾಣಿಸುತ್ತಿಲ್ಲ.



ಲಕ್ಷ್ಮಣ ತೀರ್ಥ ನದಿ ಬತ್ತಲು ಹವಾಮಾನ ವೈಪರೀತ್ಯವೇ ಕಾರಣವಾಗಿದೆ. ಕಳೆದ ವರ್ಷ ಕೊಡಗಿನಲ್ಲಿ ಶೇಕಡಾ 60ರಷ್ಟು ಮಳೆ ಕೊರತೆಯಾಗಿತ್ತು. ಪುಟ 2

# ಕಾಂಗ್ರೆಸ್ ಗೆಲ್ಲಲ್ಲ, ಆಕಸ್ಮಾತ್ ಗೆದ್ದರೆ ಪಾಕ್ ಪರ ಘೋಷಣೆ ಕೇಳಬೇಕಾಗುತ್ತೆ



**ಹಾಸನ:** ಹಾಸನದಲ್ಲಿ ಕಾಂಗ್ರೆಸ್ ಅವರಪ್ಪನಾಣೆ ಗೆಲ್ಲುವುದಿಲ್ಲ. ಕಾಂಗ್ರೆಸ್ ಪಕ್ಷ ನೂರಕ್ಕೆ ನೂರು ಗೆಲ್ಲಲ್ಲ. ಅಕಸ್ಮಾತ್ ಗೆದ್ದರು ಎಂದಾದರೆ ಗ್ರಾಮ ಪಂಚಾಯಿತಿಯಿಂದ ತೊಡಗಿ ದೆಹಲಿ ವರೆಗೆ ಪಾಕಿಸ್ತಾನ ಪರ ಘೋಷಣೆ ಕೇಳಬೇಕಾಗುತ್ತದೆ ಎಂದು ಸಂಸದ ಪ್ರಜ್ವಲ್ ರೇವಣ್ಣ ಹೇಳಿದರು. ಹಾಸನ ಮೈತ್ರಿ ಅಭ್ಯರ್ಥಿ ಪ್ರಜ್ವಲ್ ಪರ ಬಿಜೆಪಿ ಜೆಡಿಎಸ್ ನಾಯಕರ ಜಂಟಿ ಸಭೆ ನಡೆಯಿತು. ಬಳಿಕ ಮಾತನಾಡಿದ ಪ್ರಜ್ವಲ್, ಅಕಸ್ಮಾತ್ ಕಾಂಗ್ರೆಸ್ ಚುನಾವಣೆಯಲ್ಲಿ ಗೆದ್ದರೆ ಪಾಕ್ ಪರ ಘೋಷಣೆ ಕೇಳಬೇಕಾಗುತ್ತದೆ ಎಂದರು.

ಈಗ ನಡೆಯುತ್ತಿರುವುದು ಲೋಕಸಭೆ ಚುನಾವಣೆ. ಇದು ದೇಶದ ಚುನಾವಣೆ. ದೇಶ ಉಳಿಯಬೇಕೋ ಹಾಳಾಗಬೇಕೋ ಎಂಬುದು ಇನ್ನು 12 ದಿನಗಳಲ್ಲಿ ತೀರ್ಮಾನ ಆಗಲಿದೆ ಎಂದು ಪ್ರಜ್ವಲ್ ರೇವಣ್ಣ ಹೇಳಿದರು. '2000 ರೂ. ಕೊಟ್ಟು 'ಎಣ್ಣೆ'ಯಲ್ಲಿ ಪೀಕಿಸಿದರು!' ರಾಜ್ಯ ಕಾಂಗ್ರೆಸ್ ಸರ್ಕಾರ ಮಹಿಳೆಯರಿಗೆ ಗೃಹ ಲಕ್ಷ್ಮಿ ಯೋಜನೆಯಡಿ ಪ್ರತಿ ತಿಂಗಳು 2,000 ರೂ. ನೀಡುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಮಹಿಳೆಯರಿಗೆ ಎರಡು ಸಾವಿರ ಕೊಟ್ಟು ಒಲಿಸಿಕೊಳ್ಳಬೇಕು ಎಂಬ ಲೆಕ್ಕಾಚಾರ ದಲ್ಲಿ ಕಾಂಗ್ರೆಸ್ ಇದೆ ಎಂದರು. ಮಹಿಳೆಯರನ್ನು ಉದ್ದೇಶಿಸಿ, 'ನಿಮಗೆ ಎರಡು ಸಾವಿರ ಕೊಟ್ಟು ನಿಮ್ಮ ಗಂಡಂದಿರಿಂದ ಸಾವಿರಾರು ರೂ. ವಸೂಲಿ ಮಾಡ್ತಾರೆ. ಒಂದೇ ವರ್ಷದಲ್ಲಿ 'ಎಣ್ಣೆ' (ಮದ್ಯ) ಬೆಲೆಯನ್ನು ನಾಲ್ಕು ಬಾರಿ ಜಾಸ್ತಿ ಮಾಡಿದ್ದಾರೆ' ಎಂದರು.

ಈ ವೇಳೆ ಮಧ್ಯೆ ಪ್ರವೇಶಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, 'ಮಾತು ನಿಲ್ಲಿಸಿ ಪ್ರಜ್ವಲ್, ಅದು ಕೊಬ್ಬರಿ ಎಣ್ಣೆ ಅಂದುಕೊಂಡುಬಿಟ್ಟಾರು ಜನ' ಎಂದರು. ಬಳಿಕ ಮಾತು ಮುಂದುವರಿಸಿದ ಪ್ರಜ್ವಲ್, 'ಇಲ್ಲಾ ಅದು ರಾತ್ರಿ ತೆಗೆದುಕೊಳ್ಳುವ 'ಎಣ್ಣೆ'. ಅದರ ಬೆಲೆ ನಾಲ್ಕು ಬಾರಿ ಜಾಸ್ತಿ ಆಗಿದೆ' ಎಂದರು. ರಾಜ್ಯಸಭಾ ಚುನಾವಣೆಯ ಗೆಲುವಿನ ಬಳಿಕ ವಿಧಾನಸೌಧದ ಆವರಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ನಾಸೀರ್ ಹುಸೇನ್ ಬೆಂಬಲಿಗರು 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ್ದು ರಾಜ್ಯದಲ್ಲಿ ರಾಜಕೀಯ ಕೋಲಾಹಲಕ್ಕೆ ಕಾರಣವಾಗಿತ್ತು. ಆರಂಭದಲ್ಲಿ ಪಾಕ್ ಪರ ಘೋಷಣೆ ಕೂಗಿದ್ದನ್ನು ಕಾಂಗ್ರೆಸ್ ನಾಯಕರು ಅಲ್ಲಗಳೆದಿದ್ದರು. ಆದರೆ, ನಂತರ ಘೋಷಣೆ ಕೂಗಿದ್ದು ಎಫ್‌ಎಸ್‌ಎಲ್ ವರದಿಯಲ್ಲಿ ದೃಢಪಟ್ಟಿತ್ತು.

## ಸಚಿವ ಜಮೀರ್ ಅಹ್ಮದ್ ಆಸ್ಪತ್ರೆಗೆ ದಾಖಲು

**ಚಿತ್ರದುರ್ಗ:** ಸಚಿವ ಜಮೀರ್ ಅಹಮ್ಮದ್ ಅವರು ಆಸ್ಪತ್ರೆಗೆ ದಾಖಲಾಗಿದ್ದು, ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಚಿತ್ರದುರ್ಗ ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಪರ ಪ್ರಚಾರಕ್ಕೆ ಸಚಿವರು ಇಂದು ಜಿಲ್ಲೆಗೆ ಆಗಮಿಸಿದ್ದರು. ಅಂತೆಯೇ ಪ್ರಚಾರ ನಡೆಸುತ್ತಿದ್ದ ಸಂದರ್ಭದಲ್ಲಿ ಅವರಿಗೆ ಏಕಾಏಕಿ ಎದೆನೋವು ಕಾಣಿಸಿಕೊಂಡಿದೆ. ಕೂಡಲೇ ಅವರನ್ನು ಚಿತ್ರದುರ್ಗದ ಬಸವೇಶ್ವರ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.



ಆಸ್ಪತ್ರೆಯಲ್ಲಿ ಹೃದಯ ತಜ್ಞರಾದ ಡಾ.ಕಾರ್ತಿಕ್, ಡಾ.ಸುಜಯ್ ರಿಂದ ತಪಾಸಣೆ ನಡೆಸಲಾಯಿತು. ಬಳಿಕ ತುರ್ತುಚಿಕಿತ್ಸಾ ಘಟಕದಲ್ಲಿ ತಪಾಸಣೆ ಮುಂದುವರಿದಿದೆ. ಇಸಿಜಿ ನಾರ್ಮಲ್ ಇರುವ ಮಾಹಿತಿ ಲಭ್ಯವಾಗಿದೆ.

# ಶಿವಮೊಗ್ಗದಲ್ಲಿ ಗೀತಾ ಶಿವರಾಜ್‌ಕುಮಾರ್ ನಾಮಪತ್ರ ಸಲ್ಲಿಕೆ

**ಶಿವಮೊಗ್ಗ:** ರಾಜ್ಯದಲ್ಲಿ ಲೋಕಸಭೆ ಚುನಾವಣೆಯಲ್ಲಿ ಕಾವು ರಂಗೇರಿದೆ. ಶಿವಮೊಗ್ಗದಲ್ಲಿ ಗೀತಾ ಶಿವರಾಜ್‌ಕುಮಾರ್ ಕಾಂಗ್ರೆಸ್ ಅಭ್ಯರ್ಥಿಯಾಗಿ ಅಖಾಡಕ್ಕೆ ಇಳಿದಿದ್ದಾರೆ. ಅವರು ಇಂದು, ಏಪ್ರಿಲ್ 15 ಸೋಮವಾರ ಡಿಸಿ ಕಚೇರಿಯಲ್ಲಿ ಗೀತಾ ಶಿವರಾಜ್‌ಕುಮಾರ್ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಗೀತಾಗೆ ಪತಿ ಶಿವರಾಜ್ ಕುಮಾರ್, ಸಚಿವ ಮಧು ಬಂಗಾರಪ್ಪ, ಶಾಸಕರಾದ ಬೇಳೂರು ಗೋಪಾಲಕೃಷ್ಣ, ಮಂಜುನಾಥ್ ಭಂಡಾರಿ ಸಾಥ್ ಸಾಥ್ ಕೊಟ್ಟಿದ್ದಾರೆ. ನಿರ್ಮಾಪಕರಾದ ಆರ್ ಚಂದ್ರು ಹಾಗೂ ಕೆಪಿ ಶ್ರೀಕಾಂತ್ ಕೂಡ ನಾಮಪತ್ರ ಸಲ್ಲಿಕೆ ವೇಳೆ ಉಪಸ್ಥಿತರಿದ್ದರು.

ಗೀತಾ ಶಿವರಾಜ್‌ಕುಮಾರ್ ಅವರು ಮಾಜಿ ಸಿಎಂ, ಬಿಜೆಪಿ ಹಿರಿಯ ನಾಯಕ ಯಡಿಯೂರಪ್ಪ ಪುತ್ರ ಬಿವೈ ರಾಘವೇಂದ್ರ ವಿರುದ್ಧ ಕಣಕ್ಕೆ ಇಳಿದಿದ್ದಾರೆ. ಪಕ್ಷೇತರವಾಗಿ ಈಶ್ವರಪ್ಪ ನಿಂತಿದ್ದಾರೆ. ಘಟಾನುಘಟಿಗಳ ಸ್ಪರ್ಧೆಯಿಂದಾಗಿ ಶಿವಮೊಗ್ಗ ಹೈವೋಲ್ಟೇಜ್ ಕ್ಷೇತ್ರವಾಗಿದೆ. ಗೀತಾ ಪರ ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಭರ್ಜರಿ ಪ್ರಚಾರ ಮಾಡುತ್ತಿದ್ದಾರೆ. ಈ ಮೊದಲು ಶಿವಮೊಗ್ಗದಿಂದ ಸ್ಪರ್ಧೆ ಮಾಡಿ ಗೀತಾ ಶಿವರಾಜ್ ಕುಮಾರ್ ಸೋತಿದ್ದರು. ಈ ಬಾರಿ ಗೆದ್ದೆ ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**ಗೀತಾ ಪರ ಶಿವಣ್ಣ ಭರ್ಜರಿ ಪ್ರಚಾರ:** ಭರ್ಜರಿ ಪ್ರಚಾರ ಮಾಡ್ತಿರುವ ಗೀತಾ ಶಿವರಾಜ್ ಕುಮಾರ್, ಈ ಬಾರಿ ಗೆದ್ದೆ ಗೆಲ್ಲುವುದಾಗಿ ಹೇಳ್ತಿದ್ದಾರೆ. ದೊಡ್ಮನೆ ಸೊಸೆ , ನಿರ್ಮಾಪಕಿ ಹಾಗೂ ಶಿವಮೊಗ್ಗ ಅಭ್ಯರ್ಥಿ ಗೀತಾ ಶಿವರಾಜ್ ಕುಮಾರ್ ಶಿವಮೊಗ್ಗದ ಬೀದಿ ಬೀದಿಗಳು ಮತಯಾಚನೆ ಮಾಡ್ತಿದ್ದಾರೆ. ಪತ್ನಿ ಪರ



ಸ್ಯಾಂಡಲ್‌ವುಡ್ ಹ್ಯಾಟ್ರಿಕ್ ಹೀರೋ ಶಿವಣ್ಣ ಅಬ್ಬರದ ಪ್ರಚಾರ ಮಾಡ್ತಿದ್ದಾರೆ. ಇತ್ತೀಚಿಗಷ್ಟೇ ಶಿವಮೊಗ್ಗದಲ್ಲಿ ಮಾತಾಡಿದ ಶಿವಣ್ಣ ಹೆಣ್ಮಕ್ಕಳೇ ಸ್ಟ್ರಾಂಗು ಗುರೂ ಎಂದಿದ್ದರು.

**ನನ್ನ ಹೆಂಡತಿಗೆ ನಾನೇ ಗ್ಯಾರಂಟಿ:** ಶಿವಮೊಗ್ಗದಲ್ಲಿ ಪತ್ನಿ ಗೀತಾ ಪರ ಮತಯಾಚಿಸಿದ ಶಿವರಾಜ್ ಕುಮಾರ್, ಹೆಣ್ಣು ಮಕ್ಕಳೇ ಸ್ಟ್ರಾಂಗ್ ಗುರು ಎನ್ನುತ್ತಾ ನನ್ನ ಹೆಂಡತಿಯನ್ನು ಗೆಲ್ಲಿಸಿ ಎಂದಿದ್ದಾರೆ. ಗೀತಾ ಗೆದ್ರೆ ನಾನೂ ಕೆಲಸ ಮಾಡ್ಸೆ ಮಾಡಿಸುತ್ತೇನೆ. ನನ್ನ ಹೆಂಡತಿಗೆ ನಾನೇ ಗ್ಯಾರಂಟಿ, ನನ್ನ ಹೆಂಡತಿ ಕೆಲಸ ಮಾಡೇ ಮಾಡುತ್ತಾಳೆ ಎಂದು ನಾನು ಗ್ಯಾರಂಟಿ ಕೊಡುತ್ತೇನೆ ಎಂದು ಶಿವಣ್ಣ ಹೇಳಿದ್ರು.

**ವಿರೋಧಿಗಳಿಗೆ ಟಾಂಗ್ ಕೊಟ್ಟ ಶಿವಣ್ಣ:** ಹೆಣ್ಣುಮಕ್ಕಳು ಎಲ್ಲಾ ರಂಗದಲ್ಲೂ ಇದ್ದಾರೆ. ಕೂಲಿ ಕೆಲಸ ಮಾಡುವುದರಿಂದ ಹಿಡಿದು ಫ್ಲೈಟ್ ಓಡಿಸುವವರೆಗೂ ಎಲ್ಲಾ ಕ್ಷೇತ್ರಗಳಲ್ಲೂ ಹೆಣ್ಣು ಮಕ್ಕಳು ಕೆಲಸ ಮಾಡ್ತಿದ್ದಾರೆ. ಇನ್ನು ಶಿವಮೊಗ್ಗದಲ್ಲಿ ಸ್ಪರ್ಧಿಸಿರುವ ಗೀತಾಗೆ ಇಲ್ಲಿ ಎಲ್ಲಿದೆ ನಿಮ್ಮ ಮನೆ ಅಂತ ಕೇಳ್ತಿದ್ದಾರೆ. ಗೀತಾ ಹುಟ್ಟಿ ಬೆಳೆದಿದ್ದು ಇಲ್ಲೇ, ಇಲ್ಲೇ ಹುಟ್ಟಿ ಬೆಳದ ಮೇಲೆ ಅವರ ಮನೆಯೂ ಇಲ್ಲೇ ಇರುತ್ತೆ ಎನ್ನುವ ಮೂಲಕ ವಿರೋಧಿಗಳಿಗೆ ಶಿವರಾಜ್ ಕುಮಾರ್ ಖಡಕ್ ವಾರ್ನಿಂಗ್ ಕೊಟ್ಟಿದ್ದರು.

ಶಿವಣ್ಣ ದಂಪತಿ ಶಿವಮೊಗ್ಗದಲ್ಲೇ ಭರ್ಜರಿ ಮತಬೇಟೆ ನಡೆಸಿದ್ರು. ಯುಗಾದಿ ಹಬ್ಬದಂದು ಲಂಬಾಣಿ ತಾಂಡ ಸಂಸ್ಕೃತಿಯ ಸಾಂಪ್ರದಾಯಿಕ ಉಡುಗೆ ತೊಟ್ಟು ರೋಡ್ ಶೋ ನಡೆಸಿದ್ರು. ತೆರೆದ ವಾಹನದಲ್ಲಿ ಪತಿ ಶಿವರಾಜ್‌ಕುಮಾರ್ ಜೊತೆ ರೋಡ್ ಶೋ ನಡೆಸಿ ಮತಯಾಚಿಸಿದರು.

## ಪ್ರಹ್ಲಾದ್ ಜೋಶಿ 2 ಲಕ್ಷಕ್ಕೂ ಹೆಚ್ಚು ಲೀಡ್ ಪಡೆದು ಗೆಲ್ತಾರೆ

**ಹುಬ್ಬಳ್ಳಿ:** ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಪ್ರಹ್ಲಾದ್ ಜೋಶಿ 2 ಲಕ್ಷಕ್ಕೂ ಅಧಿಕ ಮತಗಳ ಅಂತರದಲ್ಲಿ ಗೆಲುವು ಸಾಧಿಸುತ್ತಾರೆ ಎಂದು ಮಾಜಿ ಸಿಎಂ ಯಡಿಯೂರಪ್ಪ ಭವಿಷ್ಯ ನುಡಿದಿದ್ದಾರೆ.

ಹುಬ್ಬಳ್ಳಿ-ಧಾರವಾಡದಲ್ಲಿ ಇಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನಾಮಪತ್ರ ಸಲ್ಲಿಕೆ ವೇಳೆ ರೋಡ್ ಶೋದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಧಾರವಾಡ ಕ್ಷೇತ್ರದಲ್ಲಿ ಸತತ 5ನೇ ಬಾರಿ ಕಣಕ್ಕಿಳಿದ ಪ್ರಹ್ಲಾದ್ ಜೋಶಿ ಅವರು 2 ಲಕ್ಷಕ್ಕೂ ಅಧಿಕ ಮತಗಳ ಅಂತರದಲ್ಲಿ ಗೆಲುವು ಸಾಧಿಸುವುದು ಶತಸಿದ್ಧ. ಇದರಲ್ಲಿ ಅನುಮಾನವೇ ಇಲ್ಲವೆಂದು ಬಿಎಸ್‌ವೈ ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ಅಭ್ಯರ್ಥಿಯಾಗಿ 5ನೇ ಬಾರಿ ಸ್ಪರ್ಧಿಸಿರುವ ಜೋಶಿ ಅವರು ಕಳೆದ ನಾಲ್ಕು ಅವಧಿಗಳಲ್ಲಿಯೂ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಅತ್ಯಂತ ಪರಿಶ್ರಮಿ ನಾಯಕ ಎಂದು ಬಿಎಸ್‌ವೈ ಬಣ್ಣಿಸಿದರು.

ಹುಬ್ಬಳ್ಳಿ-ಧಾರವಾಡ ಅವಳಿ ನಗರ ಸೇರಿದಂತೆ ಕ್ಷೇತ್ರದಾದ್ಯಂತ ಅದ್ಭುತ ಅಭಿವೃದ್ಧಿ ಕಾರ್ಯಗಳನ್ನು ಪ್ರಹ್ಲಾದ ಜೋಶಿ ಮಾಡಿದ್ದಾರೆ. ರೈಲ್ವೆ ಮಾರ್ಗ, ನಿಲ್ದಾಣ ಹೀಗೆ ಅನೇಕ ಮಾದರಿ ಕಾರ್ಯಗಳನ್ನು ಮಾಡಿದ್ದಾರೆ ಎಂದರು.

ಈಗ 5ನೇ ಬಾರಿಯೂ ಕ್ಷೇತ್ರದ ಅಭಿವೃದ್ಧಿಗಾಗಿ ಜನ ಹಿಂದಿನ ಚುನಾವಣೆಗಳಿಗಿಂತ ಹೆಚ್ಚು ಲೀಡ್ ಕೊಟ್ಟು ಜೋಶಿ ಅವರನ್ನು ಗೆಲ್ಲಿಸಿಕೊಳ್ಳುತ್ತಾರೆ ಎಂದು ಬಿಎಸ್ ವೈ ವಿಶ್ವಾಸ ವ್ಯಕ್ತಪಡಿಸಿದರು.




### ನನ್ನ ಹತ್ಯೆಗೆ ಲಕ್ಷ್ಮೀ ಹೆಬ್ಬಾಳ್ಕರ್ ಯತ್ನ

## ದೂರು ದಾಖಲಿಸಿದ ಸಂಜಯ್ ಪಾಟೀಲ್

**ಬೆಳಗಾವಿ:** ನೂರಕ್ಕೂ ಹೆಚ್ಚು ಗೂಂಡಾಗಳ ಮೂಲಕ ನನ್ನ ಹತ್ಯೆಗೆ ಯತ್ನಿಸಿದ್ದಾರೆ ಎಂದು ಆರೋಪಿಸುವ ಮೂಲಕ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತು ಬೆಂಬಲಿಗರ ವಿರುದ್ಧ ಮಾಜಿ ಶಾಸಕ ಸಂಜಯ್ ಪಾಟೀಲ್ ಬೆಳಗಾವಿ ಶಹಾಪೂರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಅವಾಚ್ಯ ಶಬ್ಧಗಳಿಂದ ನಿಂದಿಸಿದ್ದು, ನನಗೆ ಜೀವ ಬೆದರಿಕೆ ಹಾಕಿದ್ದಾರೆ. ಗಾಜಿನ ಬಾಟಲ್, ಕಲ್ಲುಗಳನ್ನು ಹಿಡಿದು ಮನೆಯೊಳಗೆ ನುಗ್ಗಲು ಯತ್ನಿಸಿದ್ದು, ಬೆಲೆಬಾಳುವ ವಸ್ತುಗಳನ್ನು ನಾಶ ಮಾಡಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಮ್ಮ ಅಧಿಕಾರ ದುರುಪಯೋಗ ಪಡಿಸಿಕೊಂಡಿದ್ದು, ಇದಕ್ಕೆಲ್ಲ ನೇರವಾಗಿ ಅವರೇ ಪ್ರಚೋದನೆ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.

ನಮ್ಮ ಸಿಬ್ಬಂದಿ ಮೇಲೂ ಹಲ್ಲೆ ಮಾಡಿದ್ದಾರೆ. ಹೀಗಾಗಿ ಪ್ರಚೋದನೆ ನೀಡಿದವರು ಮತ್ತು ನನ್ನ ಕೊಲೆಗೆ ಯತ್ನಿಸಿದವರು ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಆಯಿಷಾ ಸನದಿ, ಸುಜಯ್ ಜಾಧವ್, ಜಯಶ್ರೀ



ಸೂರ್ಯವಂಶಿ, ಪ್ರಭಾವತಿ ಮಾಸ್ತಮರಡಿ, ರೋಹಿಣಿಬಾಬ್ಟೆ, ಮುಷ್ತಾಕ್ ಮುಲ್ಲಾ, ಸದ್ದಾಂ, ಶಂಕರಗೌಡ ಪಾಟೀಲ, ಸಂಗನಗೌಡ ಪಾಟೀಲ್, ಭಾರತಿ ಸೇರಿ ನೂರಕ್ಕೂ ಅಧಿಕ ಜನರ ಮೇಲೆ ಕ್ರಮ ಕೈಗೊಳ್ಳುವಂತೆ ಸಂಜಯ್ ಪಾಟೀಲ್ ದೂರು ನೀಡಿದ್ದಾರೆ.

ಈ ವಿಚಾರವಾಗಿ ಇತ್ತೀಚೆಗೆ ಕಾಂಗ್ರೆಸ್ ಕಾರ್ಯಕರ್ತೆಯರು ಬೆಳಗಾವಿಯ ಆದರ್ಶ ನಗರದಲ್ಲಿರುವ ಸಂಜಯ್ ಪಾಟೀಲ್ ಮನೆ ಎದುರು ಪ್ರತಿಭಟನೆ ಮಾಡಿದ್ದರು. ಬಳಿಕ ನಿನ್ನೆ ಸಂಜಯ್ ಪಾಟೀಲ್ ವಿರುದ್ಧ ರಾಜ್ಯ ಮಹಿಳಾ ಆಯೋಗ ಸ್ವಯಂಪ್ರೇರಿತ ಕೇಸ್ ದಾಖಲಿಸಿಕೊಂಡಿತ್ತು.

ಸಂಜಯ್ ಪಾಟೀಲ್ ಹೇಳಿಕೆ ಕಾಂಗ್ರೆಸ್‌ಗೆ ಅಸ್ತ್ರವಾಗಿ ಪರಿಣಮಿಸಿದೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕೂಡ ಈ ಕುರಿತಾಗಿ ಈಗಾಗಲೇ ಮಾತನಾಡಿದ್ದು, ನಾಲಿಗೆ ಮೇಲೆ ಹಿಡಿತ ಇರಬೇಕು. ಇದು ನನಗೆ ಅಲ್ಲ ಇಡೀ ಸ್ತ್ರೀ ಕುಲಕ್ಕೆ ಮಾಡಿದ ಅವಮಾನ ಎಂದು ವಾಗ್ದಾಳಿ ಮಾಡಿದ್ದಾರೆ.

ಉಲ್ಟಾ ಹೊಡೆದ ಸಂಜಯ್ ಪಾಟೀಲ್

ಸಂಜಯ್ ಪಾಟೀಲ್ ತಮ್ಮ ಹೇಳಿಕೆಯನ್ನ ಮತ್ತೊಮ್ಮೆ ಸಮರ್ಥಿಸಿಕೊಂಡಿದ್ದು, ನಾನು ಅಕ್ಕಾಬಾಯಿ ಎಂದಿರುವೇ ಹೊರತು ಅವರ ಹೆಸರು ತೆಗೆದುಕೊಂಡಿಲ್ಲ. ಎಕ್ಸ್ಟ್ರಾ ಪೆಗ್ ಅಂದರೆ ಎನರ್ಜಿ ಡ್ರಿಂಕ್ ಅಂತಾ ಉಲ್ಟಾ ಹೊಡೆದಿದ್ದಾರೆ. ಚುನಾವಣೆಯಲ್ಲಿ ಆರೋಪ, ಪ್ರತ್ಯಾರೋಪಗಳನ್ನ ಧನಾತ್ಮಕವಾಗಿ ತೆಗೆದುಕೊಳ್ಳಬೇಕು. ನಿನ್ನೆ ನಮ್ಮ ಮನೆ ಮುಂದೆ ಪ್ರತಿಭಟನೆ ಮಾಡಿದ್ದವರ ವಿರುದ್ಧ ಕೋರ್ಟಿನಲ್ಲಿ ಕ್ರಿಮಿನಲ್ ಕೇಸ್ ಹಾಕುತ್ತೇನೆ ಎಂದು ಹೇಳಿದ್ದಾರೆ.

## ಮಿಸ್ಟರ್ ಕುಮಾರಸ್ವಾಮಿ ನೀನು ಚುನಾವಣೆಯಲ್ಲಿ ಗೆಲ್ಲಲ್ಲ

**ಬೆಳಗಾವಿ:** ಮಿಸ್ಟರ್ ಕುಮಾರಸ್ವಾಮಿ ನೀನು ಈ ಚುನಾವಣೆಯಲ್ಲಿ ಯಾವುದೇ ಕಾರಣಕ್ಕೂ ಗೆಲ್ಲಲ್ಲ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಮಾಜಿ ಸಿಎಂ ಕುಮಾರಸ್ವಾಮಿ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.



ಬೆಳಗಾವಿ ಕಾಂಗ್ರೆಸ್ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಾಜಿ ಸಿಎಂ ಕುಮಾರಸ್ವಾಮಿ ವಿರುದ್ಧ ಹರಿಹಾಯ್ದಿದ್ದಾರೆ. ಮಿಸ್ಟರ್ ಕುಮಾರಸ್ವಾಮಿ ನೀನು ಚುನಾವಣೆಯಲ್ಲಿ ಗೆಲ್ಲಲ್ಲ, ಹೆದರಿ ಪಕ್ಕದ ಕ್ಷೇತ್ರಕ್ಕೆ ಹೋಗಿದ್ರಿ ಎಂದು ಕೆಂಡಾಮಂಡಲ ಆಗಿದ್ದಾರೆ.

'ಹೆಣ್ಣು ಕುಟುಂಬದ ಕಣ್ಣು' ಕುಟುಂಬಕ್ಕೆ ಒಳ್ಳೆಯದಾಗಿಲಿ ಎಂದು ಕಾಂಗ್ರೆಸ್ ಸರ್ಕಾರ 2,000 ಹಣ ಕೊಡ್ತಿದೆ. ಹೆಣ್ಣುಮಕ್ಕಳು ಏನ್ ದಡ್ಡರಾ? ಮಹಿಳೆಯರಿಗೆ ಸ್ವಾಭಿಮಾನದ ಪ್ರಶ್ನೆ ಇದು, ಬದುಕಿನಲ್ಲಿ ಶಕ್ತಿ ಕೊಡಲು ಕೊಟ್ಟ ಕಾರ್ಯಕ್ರಮ ಇದು. ಕುಮಾರಸ್ವಾಮಿ ಹೇಳಿಕೆ ಖಂಡಿಸಿ ಹೋರಾಟ ಮಾಡಲೇಬೇಕು. ನಾನು ಈಗಲೇ ಕರೆ ಕೊಡುತ್ತೇನೆ. ಪ್ರತಿಯೊಂದು ಮಹಿಳಾ ಸಂಘಟನೆಗಳು, ರಾಜ್ಯಾದ್ಯಂತ ಮಹಿಳೆಯರು ಕುಮಾರಸ್ವಾಮಿ ಹೇಳಿಕೆ ಖಂಡಿಸಿ ಹೋರಾಟ ಮಾಡಬೇಕು, ತಮ್ಮ ಪ್ರತಿಭಟನೆಯನ್ನು ವ್ಯಕ್ತಪಡಿಸಬೇಕು ಎಂದು ಕರೆ ಕೊಟ್ಟಿದ್ದಾರೆ.

ರಾಜ್ಯಾದ್ಯಂತ ಒಂದು ಕೋಟಿಗೂ ಅಧಿಕ ಮಹಿಳೆಯರು ಗೃಹಲಕ್ಷ್ಮಿ ಯೋಜನೆ ಪಡೆಯುತ್ತಿದ್ದಾರೆ. ಅವರೆಲ್ಲರೂ ಪ್ರತಿಭಟನೆ ಮಾಡಿ, ತಕ್ಕ ಪಾಠ ಕಲಿಸುತ್ತಾರೆ. ಅವನ (ಕುಮಾರಸ್ವಾಮಿ) ಕ್ಷಮೆ ಬೇಕಿಲ್ಲ, ವಿಷಾದ ಅನ್ನೋ ಡ್ರಾಮಾ ಬೇಡ, ಕುಮಾರಸ್ವಾಮಿ ಮಾತು ಕೇಳಿ ಜನರು ಗ್ಯಾರಂಟಿ ಬಿಡಲ್ಲ. ಅವನಿಗೆ ಪಿಕ್ ಪಾಕೆಟ್ ಮಾಡಿ ರೂಢಿ ಅಲ್ವಾ? ಅದಕ್ಕೆ ಏಕವಚನದಲ್ಲಿ ಹೆಚ್‌ಡಿಕೆ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಇದೇ ವೇಳೆ ಮಂಡ್ಯದಲ್ಲಿ ಹೆಚ್‌ಡಿಕೆ ಸ್ಪರ್ಧೆ ಬಗ್ಗೆ ಮಾತನಾಡಿ, ನೀನು ಮೋಸಗಾರ, ಸುಳ್ಳುಗಾರ, ಎಲ್ಲದರ ಬಗ್ಗೆಯೂ ವಿಧಾನಸಭೆಯಲ್ಲಿ ಚರ್ಚೆ ಮಾಡೋಣ, ನಿಮ್ಮ ಜಮೀನು 48 ಎಕರೆ ಇದೆಯೋ, 1,000 ಎಕರೆ ಇದೆಯೋ ಚರ್ಚೆ ಮಾಡೋಣ ಎಂದು ಸವಾಲ್ ಹಾಕಿದ್ದರೆ.

## ಅಕ್ರಮಗಳ ಸರಮಾಲೆ

**ಸೌಮ್ಯಾ ರೆಡ್ಡಿ ವಿರುದ್ಧ ಎಫ್ ಐಆರ್:** ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯಾ ರೆಡ್ಡಿ ವಿರುದ್ಧ ಎಫ್ ಐಆರ್ ದಾಖಲಾಗಿದೆ. ಅವರು ನುಡಿದಂತೆ ನಡೆದಿದ್ದೀವೆ, 5 ಗ್ಯಾರಂಟಿ ಕೊಟ್ಟಿದ್ದೇವೆ ಎಂಬ ಕರಪತ್ರ ಹಂಚಿದ್ದರು. ಈ ಮೂಲಕ ನೀತಿ ಸಂಹಿತೆ ಉಲ್ಲಂಘಿಸಿದ್ದಾರೆಂದು ಸೌಮ್ಯಾ ರೆಡ್ಡಿ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜಶೇಖರ್ ವಿರುದ್ಧ ಕಲಾಸಿಪಾಳ್ಯ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ.

ಮತದಾರರಿಗೆ ಹಂಚಲು ಸಂಗ್ರಹಿಸಿದ್ದ 2 ಕೋಟಿ ನಗದು ಜಪ್ತಿ: ಚುನಾವಣಾ ಅಖಾಡದಲ್ಲಿ ಕುರುಡು ಕಾಂಚಾಣ ಭಾರಿ ಸದ್ದು ಮಾಡ್ತಿದೆ. ಇದಕ್ಕೆ ಚುನಾವಣಾ ಆಯೋಗ ಹದ್ದಿನ ಕಣ್ಣಿಟ್ಟಿದೆ. ಸೋಮವಾರ ಧಾರವಾಡ ಜಿಲ್ಲೆಯ ರಾಮನಕೊಪ್ಪ ಗ್ರಾಮದ ಮನೆಯಲ್ಲಿ 2 ಕೋಟಿಗೂ ಹೆಚ್ಚು ನಗದು ಸಿಕ್ಕಿದೆ. ನಿಂಗಪ್ಪ ಜಟಾದ್ ಎಂಬುವವರ ಮನೆಯಲ್ಲಿ ಮತದಾರರಿಗೆ ಹಂಚಲು ಸಂಗ್ರಹಿಸಿದ್ದ 2 ಕೋಟಿಯನ್ನ ಸೀಜ್ ಮಾಡಲಾಗಿದೆ.

ಬೆಳಗಾವಿ ಜಿಲ್ಲೆಯ ಕಾಗವಾಡ ಚೆಕ್ ಪೋಸ್ಟ್‌ನಲ್ಲಿ 16 ಲಕ್ಷದ 5 ಸಾವಿರ ಹಣ ಸೀಜ್ ಮಾಡಲಾಗಿದೆ. ಮಹಾರಾಷ್ಟ್ರದ ಸಾಂಗ್ಲಿಯಿಂದ ಕುಡಚಿಗೆ ಹೊರಟಿದ್ದ ಕಾರಿನಲ್ಲಿ ಹಣ ಸಿಕ್ಕಿದ್ದು, ಸೂಕ್ತ ದಾಖಲೆ ಇಲ್ಲದ್ದಿಕ್ಕೆ ಜಪ್ತಿ ಮಾಡಿದ್ದಾರೆ. ಬಾಗಲಕೋಟೆಯ ನಾಯನೇಗಲಿ ಚೆಕ್ ಪೋಸ್ಟ್ ನಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 10 ಲಕ್ಷಕ್ಕೂ ಹೆಚ್ಚು ಹಣ ಜಪ್ತಿ ಮಾಡಲಾಗಿದೆ. ಬಾಗಲಕೋಟೆಯಲ್ಲಿ 16 ಲಕ್ಷ ಮೌಲ್ಯದ ಮದ್ಯವನ್ನೂ ವಶಪಡಿಸಿಕೊಳ್ಳಲಾಗಿದೆ.

## ನಗದು ಜಪ್ತಿ

ಕೆಎಸ್ ಬಿಸಿಎಲ್ ಡೀಪೋದಲ್ಲಿ ಲಾರಿಯೊಂದರಲ್ಲಿ ಇದ್ದ 650/500 ಎಂಎಲ್ ನ 1100 ಬಿಯರ್ ಬಾಕ್ಸ ವಶಕ್ಕೆ ಪಡೆಯಲಾಗಿದೆ. ಬಾಗಲಕೋಟೆ ಮತಕ್ಷೇತ್ರ ವ್ಯಾಪ್ತಿಯಲ್ಲಿ ಖಚಿತ ಮಾಹಿತಿ ಮೇರೆಗೆ ಅಬಕಾರಿ ಇಲಾಖೆ ದಾಳಿ ಮಾಡಿದ್ದು, ಮದ್ಯ ಮತ್ತು ಮದ್ಯಸಾರ ಸಾಗಿಸುವ ವಾಹನಗಳಿಗೆ ಜಿ.ಪಿ.ಎಸ್ ಉಪಕರಣ ಅಳವಡಿಸದೇ ಸುತ್ತೋಲೆ ಉಲ್ಲಂಘಿಸಿರುವ ಕಾರಣ ವಾಹನ ಸಮೇತ ಮದ್ಯ ವಶಕ್ಕೆ ಪಡೆಯಲಾಗಿದೆ.

**34 ಲಕ್ಷ ರೂ. ಹಣ ಜಪ್ತಿ:** ದಾಖಲೆ ಇಲ್ಲದೇ ಸಾಗಾಟ ಮಾಡುತ್ತಿದ್ದ 34 ಲಕ್ಷ ರೂ. ಹಣವನ್ನು ಪೊಲೀಸರು ಮತ್ತು ತಹಶಿಲ್ದಾರ್ ಜಪ್ತಿ ಮಾಡಿದ್ದಾರೆ. ಜಿಲ್ಲೆಯ ಗಂಗಾವತಿ ತಾಲೂಕಿನ ಕೆಡೆಬಾಗಿಲು ಬಳಿ ಚೆಕ್ ಪೋಸ್ಟ್ ನಲ್ಲಿ ವಾಹನಗಳನ್ನು ತಪಾಸಣೆ ಮಾಡುತ್ತಿದ್ದಾಗ, ಕಾರ್ ನಲ್ಲಿದ್ದ ಹಣವನ್ನು ಜಪ್ತಿ ಮಾಡಿದ್ದಾರೆ.

ಬಳ್ಳಾರಿ ಜಿಲ್ಲೆಯ ಶಿರಗುಪ್ಪಾ ತಾಲೂಕಿನ ನಡವಿಯಿಂದ ಹೊಸಪೇಟ್ ಗೆ ಪೀರಸಾಭ್ ಅನ್ನೋರು ಹಣ ಸಾಗಿಸುತ್ತಿದ್ದರು. ಹಣಕ್ಕೆ ಯಾವುದೇ ದಾಖಲಾತಿಗಳು ಇಲ್ಲದೇ ಇರೋದರಿಂದ ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದೆ.

**5 ಕೋಟಿ 60 ಲಕ್ಷ ರೂ. ನಗದು, 3 ಕೆಜಿ ಚಿನ್ನ, 68 ಕೆಜಿ ಬೆಳ್ಳಿ ಗಟ್ಟಿ, 103 ಕೆಜಿ ಬೆಳ್ಳಿ ಆಭರಣವನ್ನ ವಶಕ್ಕೆ:** ಬಳ್ಳಾರಿ ನಗರದ ಬ್ರೂಸ್ ಪೇಟೆ ಠಾಣೆ ಪೊಲೀಸರು ನಿನ್ನೆ ಭರ್ಜರಿ ಬೇಟೆ ಆಡಿದ್ದರು. ಚಿನ್ನದ ವ್ಯಾಪಾರಿ ನರೇಶ್ ಸೋನಿ ಮನೆಯಲ್ಲಿ, ದಾಖಲೆ ಇಲ್ಲದೆ ಇಟ್ಟಿದ್ದ 5 ಕೋಟಿ 60 ಲಕ್ಷ ರೂ. ನಗದು, 3 ಕೆಜಿ ಚಿನ್ನ, 68 ಕೆಜಿ ಬೆಳ್ಳಿ ಗಟ್ಟಿ, 103 ಕೆಜಿ ಬೆಳ್ಳಿ ಆಭರಣವನ್ನ ವಶಕ್ಕೆ ಪಡೆದಿದ್ದರು. ಹಣ ಚಿನ್ನಾಭರಣದ ಮೂಲ ಕೆದಕಿದ ಪೊಲೀಸರಿಗೆ, ಇದೆಲ್ಲ ಪ್ರಭಾವಿ ರಾಜಕಾರಣಿಗೆ ಸೇರಿದ್ದು ಸಂಶಯ ಕಾಡಿದೆ.

ಚುನಾವಣೆ ಬಳಕೆಗಾಗಿ ರಾಜಕಾರಣಿಯು ಹಣ ಕೊಟ್ಟಿರುವ ಶಂಕೆ ಎದ್ದಿದೆ. ಮತದಾರರಿಗೆ ಹಂಚಲು, ಹವಾಲಾ ದಂಧೆಯಲ್ಲಿ ಬಳಸಲು ಹಣವನ್ನ ಸಂಗ್ರಹಿಸಿದ್ದ ಸಂಶಯ ಮೂಡಿದ್ದು ತನಿಖೆ ಮುಂದುವರೆಸಿದ್ದಾರೆ.

## ಉಡುಪಿ ಜಿಲ್ಲೆಯ ಗ್ರಾಮಗಳು

ಜಡ್ಕಲ್, ಮೂದುರು, ಆಲೂರು, ನಾಡ ಅಮಾವಾಸ್ಯೆ ಬೈಲ್ ಹೀಗೆ ನಾನಾ ಗ್ರಾಮಗಳು ಇನ್ನೂ ಕೂಡ ಅಭಿವೃದ್ಧಿಯನ್ನೇ ಕಂಡಿಲ್ಲ. ಸರಿಯಾದ ರಸ್ತೆ ಸಂಪರ್ಕ ಇಲ್ಲದೆ ಸಂಚಾರಕ್ಕೂ ಪರದಾಡುವ ಸ್ಥಿತಿ ಎದುರಾಗಿದೆ. ಇದರಿಂದ ಗ್ರಾಮೀಣ ಭಾಗದ ಜನ ಶಿಕ್ಷಣ ಉದ್ಯೋಗಕ್ಕಾಗಿ ನಿತ್ಯ ಪರದಾಡುವಂತಾಗಿದೆ. ನಕ್ಸಲ್ ಪೀಡಿತ ಗ್ರಾಮಗಳೆಂಬ ಹಣೆಪಟ್ಟಿಯನ್ನು ಕಟ್ಟಿರುವುದರಿಂದ ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಯಾವುದೇ ಅಭಿವೃದ್ಧಿ ಕುರಿತ ಪ್ಯಾಕೇಜ್ ಘೋಷಣೆ ಆಗಿಲ್ಲ. ಕಳೆದ ಒಂದು ದಶಕಗಳಿಂದ ನಕ್ಸಲ್ ಚಟುವಟಿಕೆ ಇಲ್ಲವಾದರೂ ಕೂಡ ನಕ್ಸಲ್ ಪೀಡಿತ ಪ್ರದೇಶ ಎಂಬ ಹಣೆಪಟ್ಟಿಯಿಂದ ಪ್ರವಾಸೋದ್ಯಮವೂ ಕುಂಠಿತವಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಸುಂದರ ಪ್ರಕೃತಿಯ ತಾಣಗಳು ಇದ್ದರು ಕೂಡ ನಕ್ಸಲ್ ಭೀತಿಯಿಂದ ಯಾರೂ ಬರುತ್ತಿಲ್ಲ.

ಜಿಲ್ಲೆಯ ನಗರ ಪ್ರದೇಶ ಸಾಕಷ್ಟು ಅಭಿವೃದ್ಧಿ ಹಾದಿಯಲ್ಲಿ ಇದೆ. ಆದರೆ ಗ್ರಾಮೀಣ ಪ್ರದೇಶಗಳು ಅಭಿವೃದ್ಧಿ ಕಾಣದೆ ಸೋತು ಹೋಗಿದೆ. ಸೇತುವೆ ನಿರ್ಮಾಣ ಮಾಡುವ ಕಡೆಗೆ, ಗ್ರಾಮೀಣ ಪ್ರದೇಶ ದಾರಿ ದೀಪ, ಶಾಲಾ ಅಭಿವೃದ್ಧಿ ಕಡೆಗೆ ಗಮನ ಹರಿಸುತ್ತಿಲ್ಲ. ಹಾಗಾಗಿ ಗ್ರಾಮೀಣ ಪ್ರದೇಶದ ಜನ ನಿತ್ಯ ಸಂಕಷ್ಟ ಜೊತೆಗೆ ಜೀವನ ಸಾಗಿಸುವಂತಾಗಿದೆ. ಲೋಕಸಭಾ ಚುನಾವಣೆ ಕೂಡ ಬಂತು ಇನ್ನಾದರೂ ನಕ್ಸಲ್ ಹಣೆಪಟ್ಟಿ ತೊಡೆದು ಹಾಕುವ ಕಡೆಗೆ ಸರ್ಕಾರ, ಜಿಲ್ಲಾಡಳಿತ ಗಮನಹರಿಸಬೇಕು. ಗ್ರಾಮಗಳ ಅಭಿವೃದ್ಧಿ ಸೂಕ್ತ ಯೋಜನೆಯನ್ನು ಜಾರಿಗೆ ತಂದು ಹಳ್ಳಿಗಳ ಉದ್ಧಾರ ಮಾಡಬೇಕು ಎಂಬುದು ಗ್ರಾಮೀಣ ಭಾಗದ ಜನರ ಆಗ್ರಹವಾಗಿದೆ.

ಉಡುಪಿ ಜಿಲ್ಲೆಯ ಕುಂದಾಪುರ, ಬೈಂದೂರು, ಹೆಬ್ರಿ, ಕಾರ್ಕಳ ತಾಲೂಕಿನ ಹಲವು ಗ್ರಾಮಗಳು ಇನ್ನೂ ಕೂಡ ಕುಗ್ರಾಮಗಳಾಗಿ ಉಳಿದಿದೆ. ಚುನಾವಣೆ ಬಹಿಷ್ಕರ ಬಿಸಿ ತಾಗುವ ಮೊದಲೇ ಸರ್ಕಾರ ಇಂತಹ ಗ್ರಾಮಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ಅಭಿವೃದ್ಧಿ ಮಾಡಬೇಕಿದೆ. ಈ ಮೂಲಕ ಜನರ ಜೀವನ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಕಾಣ್ಬೋದು ಅನ್ನೋದು ಎಲ್ಲರ ಒತ್ತಾಸೆಯಾಗಿದೆ.

## ಎಚ್‌ಡಿಕೆಗೆ ಸಂಕಷ್ಟ

**ದಳಪತಿ ಮೇಲೆ ಮುಗಿಬಿದ್ದ ಕಾಂಗ್ರೆಸ್!:** ಕುಮಾರಸ್ವಾಮಿ ವಿರುದ್ಧ ಕಾಂಗ್ರೆಸ್ ಪಡೆ ನಿಗಿನಿಗಿ ಅಂತಿದೆ. ಮಹಿಳೆಯರು ದಾರಿ ತಪ್ಪಿದ್ದಾರೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಆದಿಯಾಗಿ ಸಚಿವರು, ಕಾಂಗ್ರೆಸ್ ನಾಯಕರು ತಿರುಗೇಟು ನೀಡುತ್ತಿದ್ದಾರೆ. ದಾರಿ ತಪ್ಪಿದ್ದಾರೆ ಅಂದ್ರೆ ಏನರ್ಥ ಎಂದು ಪ್ರಶ್ನಿಸಿದ್ದಾರೆ. ಇನ್ನು ಕುಮಾರಸ್ವಾಮಿ ಹೇಳಿಕೆಯನ್ನು ಮಹಿಳಾ ಆಯೋಗ ಖಂಡಿಸಿದೆ. ಅಲ್ಲದೇ ಈ ಸಂಬಂಧ ಕುಮಾರಸ್ವಾಮಿ ವಿರುದ್ಧ ರಾಜ್ಯ ಮಹಿಳಾ ಆಯೋಗ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿದ್ದು, ಇದೀಗ ನೋಟಿಸ್ ಸಹ ಜಾರಿ ಮಾಡಿದೆ.

ಕುಮಾರಸ್ವಾಮಿ ಏನೇ ಹೇಳಿದ್ರು, ಕಾಂಗ್ರೆಸ್ ಪಾಲಿಗಂತು ಬ್ರಹ್ಮಾಸ್ತ್ರ ಸಿಕ್ಕಂತಾಗಿದೆ. ಕುಮಾರಸ್ವಾಮಿ ಹೇಳಿಕೆ ಖಂಡಿಸಿ ಪ್ರತಿಭಟನೆಗೆ ಕರೆ ನೀಡಲು ಡಿಕೆ ಶಿವಕುಮಾರ್ ಪ್ಲ್ಯಾನ್ ಮಾಡುತ್ತಿದ್ದಾರೆ. ಹೀಗಾಗಿ ದಾರಿ ತಪ್ಪಿದ ದಂಗಲ್ ಇನ್ಯಾವ ಹಂತಕ್ಕೆ ಹೋಗುತ್ತೋ ಕಾದು ನೋಡಬೇಕಿದೆ.

**ಜೆಡಿಎಸ್ ನಿಂದ ಮಹಿಳಾ ಆಯೋಗಕ್ಕೆ ದೂರು:** ಮಹಿಳೆಯರಿಗೆ ಅಪಮಾನ ಮಾಡಿದ್ದಾರೆ ಎಂದು ಕಾಂಗ್ರೆಸ್ ಕುಮಾರಸ್ವಾಮಿ ವಿರುದ್ಧ ಮುಗಿಬಿದ್ದಿದೆ. ಇದರ ಬೆನ್ನಲ್ಲೇ ಇದೀಗ ಜೆಡಿಎಸ್ ಸಹ ಕಾಂಗ್ರೆಸ್ ನವರು ಮಹಿಳೆಯರಿಗೆ ಅಪಮಾನ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.ಹೇಮಮಾಲಿನಿ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದ ಆರೋಪದ ಮೇಲೆ ಜೆಡಿಎಸ್ , ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಂದೀಪ್ ಸಿಂಗ್ ಸುರ್ಜೆವಾಲ ವಿರುದ್ಧ ಮಹಿಳಾ ಆಯೋಗಕ್ಕೆ ದೂರು

### ಮೊದಲನೇ ಪುಟದಿಂದ...

ನೀಡಿದೆ.

## ಹವಾಮಾನ ವೈಪರೀತ್ಯ

ಇದರಿಂದ ಜಿಲ್ಲೆಯಲ್ಲಿ ಎಲ್ಲೂ ಅಂತರರ್ಜಲ ಹುಟ್ಟಲೇ ಇಲ್ಲ. ಪರಿಣಾಮ ಬೆಟ್ಟಗುಡ್ಡಗಳಲ್ಲಿ ಹರಿಯುವ ಸಣ್ಣಪುಟ್ಟ ಜರಿ ತೊರೆಗಳು ನೀರಿಲ್ಲದೆ ಫೆಬ್ರವರಿಯಲ್ಲೇ ಬತ್ತಿಹೋಗಿವೆ. ಪರಿಣಾಮ ನದಿಗಳಿಗೆ ಎಲ್ಲಿಂದಲೂ ನೀರು ಹರಿದು ಬರುತ್ತಿಲ್ಲ ಜೊತೆಗೆ ಅಂತರ್ಜದಿಂದಲೂ ನೀರು ಉಕ್ಕುತ್ತಿಲ್ಲ. ಹಾಗಾಗಿ ಕಾವೇರಿ ಜೊತೆ ಲಕ್ಷ್ಮಣ ತೀರ್ಥ ನದಿಗಳು ಬತ್ತಿಹೋಗಿದೆ.

ಇದರಿಂದಾಗಿ ದಕ್ಷಿಣ ಕೊಡಗಿನಲ್ಲಿ ಇದೇ ನದಿಯನ್ನ ಅವಲಂಬಿಸಿರುವ ಕಾಫಿ ತೋಟದ ಕೃಷಿಕರು ಇದೀಗ ನೀರಿಲ್ಲದೆ ಪರದಾಡುವಂತಾಗಿದೆ. ಜೊತೆಗೆ ಕುಡಿಯಲು, ಜನ ಜಾನುವಾರುಗಳಿಗೂ ನೀರಿಲ್ಲದೆ ಸಂಕಷ್ಟ ಎದುರಾಗಿದೆ.

ಏಪ್ರಿಲ್ ಎರಡನೇ ವಾರದಲ್ಲೇ ಜಿಲ್ಲೆಯಲ್ಲಿ ನದಿಗಳು ಒಂದೊಂದಾಗಿ ಬತ್ತಲಾರಂಭಿಸಿವೆ. ಜನವರಿಯಿಂದ ಇಲ್ಲಿಯವರೆಗೆ ಬರಬೇಕಾಗಿದ್ದ ವಾಡಿಕೆ ಮಳೆಯೂ ಬಾರದೇ ಇರುವುದು ನದಿ ಬತ್ತಲು ಮತ್ತೊಂದು ಕಾರಣವಾಗಿದೆ. ಈ ನದಿಗಳು ಮತ್ತೆ ಪುನಶ್ಚೇತನಗೊಳ್ಳಲು ಮಳೆಯೇ ಬರಬೇಕಾಗಿದೆ. ಆದರೆ ಸದ್ಯಕ್ಕಂತೂ ಮಳೆ ಬರುವ ಲಕ್ಷಣಗಳು ಕಾಣುತ್ತಿಲ್ಲ. ಹಾಗಾಗಿ ಕೊಡಗು-ಮೈಸೂರು ಭಾಗದ ಜನರು ತೀವ್ರ ಬವಣೆಪಡುವಂತಾಗಿದೆ.

## 5 ದಿನ ಮಳೆ

ಹೊನ್ನಾವರದಲ್ಲಿ 34.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಾರವಾರದಲ್ಲಿ 36.8ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ , 26.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಶಿರಾಲಿಯಲ್ಲಿ 37.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಬೀದರ್ ನಲ್ಲಿ 36.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 25.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ವಿಜಯಪುರದಲ್ಲಿ 37.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಧಾರವಾಡದಲ್ಲಿ 35.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.8 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಕಲಬುರಗಿಯಲ್ಲಿ 39.2ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 27.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹಾವೇರಿಯಲ್ಲಿ 37.4ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## ನಿಷೇಧ

ಹಿಂದೂ ಧರ್ಮದಲ್ಲಿ ರಾಮ ನವಮಿ ಹಬ್ಬಕ್ಕೆ ವಿಶೇಷ ಮಹತ್ವವಿದೆ. ಹಿಂದೂ ಕ್ಯಾಲೆಂಡರ್ ಪ್ರಕಾರ, ರಾಮ ನವಮಿ ಹಬ್ಬವನ್ನು ಪ್ರತಿ ವರ್ಷ ಚೈತ್ರ ಮಾಸದ ಶುಕ್ಲ ಪಕ್ಷದ ಒಂಬತ್ತನೇ ದಿನಾಂಕದಂದು ಆಚರಿಸಲಾಗುತ್ತದೆ. ಧಾರ್ಮಿಕ ನಂಬಿಕೆಗಳ ಪ್ರಕಾರ, ಮರ್ಯಾದಾ ಪುರುಷೋತ್ತಮ ಭಗವಾನ್ ರಾಮನು ಜನಿಸಿದ ದಿನ ಇದಾಗಿದೆ.

ರಾಮ ನವಮಿ ಹಬ್ಬವು ಚೈತ್ರ ನವರಾತ್ರಿಯ ಕೊನೆಯ ದಿನವಾಗಿದೆ. ಚೈತ್ರ ನವರಾತ್ರಿ ರಾಮ ನವಮಿಯೊಂದಿಗೆ ಕೊನೆಗೊಳ್ಳುತ್ತದೆ. ರಾಮನವಮಿಯಂದು ಶ್ರೀರಾಮನ ವಿಶೇಷ ಪೂಜೆಯನ್ನು ಮಾಡಲಾಗುತ್ತದೆ. ಈ ದಿನದಂದು, ಭಗವಾನ್ ರಾಮನ ಜೊತೆಗೆ ತಾಯಿ ಸೀತೆ, ಲಕ್ಷ್ಮಣ ಮತ್ತು ಹನುಮಾನ್ ಅನ್ನೂ ಪೂಜಿಸಲಾಗುತ್ತದೆ.

ಹಿಂದೂ ಕ್ಯಾಲೆಂಡರ್‌ನ ಲೆಕ್ಕಾಚಾರದ ಪ್ರಕಾರ, ಚೈತ್ರ ಮಾಸದ ಶುಕ್ಲ ಪಕ್ಷದ ನವಮಿ ತಿಥಿಯು ಏಪ್ರಿಲ್ 16 ರಂದು ಮಧ್ಯಾಹ್ನ 01:23 ರಿಂದ ಪ್ರಾರಂಭವಾಗುತ್ತದೆ. ನವಮಿ ತಿಥಿ ಏಪ್ರಿಲ್ 17 ರಂದು ಮಧ್ಯಾಹ್ನ 03:15 ಕ್ಕೆ ಕೊನೆಗೊಳ್ಳುತ್ತದೆ. ಬೆಳಗ್ಗಿನ ವೇಳೆ ತಿಥಿ ಆರಂಭವಾಗುವ ಆಧಾರದ ಮೇಲೆ, ಏಪ್ರಿಲ್ 17 ರಂದು ರಾಮ ನವಮಿ ಹಬ್ಬವನ್ನು ಆಚರಿಸಲಾಗುತ್ತದೆ.

ರಾಮನವಮಿ ಹಬ್ಬವನ್ನು ಪ್ರತಿ ವರ್ಷ ದೇಶದಾದ್ಯಂತ ಅತ್ಯಂತ ಭಕ್ತಿಯಿಂದ ಆಚರಿಸಲಾಗುತ್ತದೆ. ಧಾರ್ಮಿಕ ನಂಬಿಕೆಯ ಪ್ರಕಾರ, ಭಗವಾನ್ ರಾಮನು ವಿಷ್ಣುವಿನ ಏಳನೇ ಅವತಾರವಾಗಿ ಜನಿಸಿದನು. ಭಗವಾನ್ ರಾಮನು ಅಯೋಧ್ಯೆಯ ರಾಜ ದಶರಥನ ಹಿರಿಯ ಮಗನಾಗಿ ಚೈತ್ರ ಮಾಸದ ಶುಕ್ಲ ಪಕ್ಷದ ಒಂಬತ್ತನೇ ದಿನದಂದು ಜನಿಸಿದನು. ಈ ಕಾರಣಕ್ಕಾಗಿ, ಪ್ರತಿ ವರ್ಷ ರಾಮನವಮಿ ಹಬ್ಬವನ್ನು ಭಗವಾನ್ ರಾಮನ ಜನ್ಮದಿನವಾಗಿ ಆಚರಿಸಲಾಗುತ್ತದೆ.

## ದುಪ್ಪಟ್ಟು

ಸಾರ್ವಜನಿಕ ಶೌಚಾಲಯಗಳಲ್ಲಿ ಇದೀಗ ಸಣ್ಣ ಬಕೆಟ್‌ಗಳಲ್ಲಿ ನೀರು ಇಡಲಾಗುತ್ತಿದೆ. ಹೆಚ್ಚುವರಿ ನೀರು ಬಳಸಿದರೆ ಹೆಚ್ಚುವರಿ ಹಣವನ್ನೂ ನೀಡಬೇಕಾಗುತ್ತದೆ.

ಹೆಚ್ಚುವರಿ ಶುಲ್ಕ ವಿಧಿಸಲು ಬೋರ್‌ವೆಲ್‌ಗಳಲ್ಲಿ ನೀರಿಲ್ಲದಿರುವುದು ಮತ್ತು ನೀರಿನ ಕೊರತೆ ಕಾರಣ ಎಂದು ಶೌಚಾಲಯ ನಿರ್ವಾಹಕರು ಹೇಳಿದ್ದಾರೆ. ನೀರಿನ ಟ್ಯಾಂಕರ್‌ಗಳು ಬೆಲೆ ಹೆಚ್ಚಿಸಿವೆ. ಹೀಗಾಗಿ ಸಾರ್ವಜನಿಕ ಶೌಚಾಲಯಗಳ ನಿರ್ವಹಣೆ ವೆಚ್ಚ ಹೆಚ್ಚಿಸಲಾಗಿದೆ ಎಂದು ಅವರು ಹೇಳುದ್ದಾರೆ.

ಶುಲ್ಕ ಹೆಚ್ಚಿಸಿದ್ದರೂ ಸಾರ್ವಜನಿಕ ಶೌಚಾಲಯಗಳು ಕೊಳಕು, ದುರ್ವಾಸನೆ ಮತ್ತು ಅನೈರ್ಮಲ್ಯದಿಂದ ಕೂಡಿವೆ ಎಂದು ಬಿಎಂಟಿಸಿ ಬಸ್ ಚಾಲಕರೊಬ್ಬರು ತಿಳಿಸಿರುವುದಾಗಿ 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಮಾಡಿದೆ. ಕೆಲವು ಶೌಚಾಲಯಗಳು ಸ್ನಾನದ ಸೇವೆಗಳನ್ನು ನಿಲ್ಲಿಸಿದರೆ, ಕೆಲವು ನೀರಿನ ಕೊರತೆಯಿಂದಾಗಿ ತಾತ್ಕಾಲಿಕವಾಗಿ ಮುಚ್ಚಲ್ಪಟ್ಟಿವೆ ಎಂದು ಅವರು ಹೇಳಿದ್ದಾರೆ.

ನಮಗೆ ದಿನಕ್ಕೆ ಮೂರು ಟ್ಯಾಂಕರ್ ನೀರು ಬೇಕಾಗುತ್ತದೆ ಮತ್ತು ಪ್ರತಿ ಟ್ಯಾಂಕರ್ ನೀರಿನ ಬೆಲೆ 5,000 ರೂ. ಇದೆ. ಇದು ನಮ್ಮ ಗಳಿಕೆಯ ಮೇಲೆ ಪರಿಣಾಮ ಬೀರಿದೆ. ಗಳಿಕೆಯ ಮೊತ್ತದಲ್ಲಿ ಬಹುಪಾಲು ನೀರಿನ ವೆಚ್ಚವನ್ನು ಸರಿದೂಗಿಸಲು ಖರ್ಚಾಗುತ್ತದೆ ಎಂದು ಮೆಜೆಸ್ಟಿಕ್‌ನಲ್ಲಿ ಸಾರ್ವಜನಿಕ ಶೌಚಾಲಯ ನಡೆಸುತ್ತಿರುವ ವ್ಯಕ್ತಿಯೊಬ್ಬರು ತಿಳಿಸಿರುವುದಾಗಿ ವರದಿ ಉಲ್ಲೇಖಿಸಿದೆ.

ಸಾರ್ವಜನಿಕ ಶೌಚಾಲಯಗಳ ದರ ಹೆಚ್ಚಳ ವಿಚಾರವಾಗಿ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಈವರೆಗೆ ಪ್ರತಿಕ್ರಿಯೆ ನೀಡಿಲ್ಲ.

## ಐವರು ಸಾವು

38 ಗಾಯಾಳುಗಳನ್ನು ಚಿಕಿತ್ಸೆಗಾಗಿ ಕಟಕ್‌ನ ಎಸ್‌ಸಿಬಿ ವೈದ್ಯಕೀಯ ಕಾಲೇಜಿಗೆ ಕಳುಹಿಸಲಾಗಿದೆ. ಒಬ್ಬ ವ್ಯಕ್ತಿ ಗಂಭೀರವಾಗಿ ಗಾಯಗೊಂಡಿದ್ದಾನೆ. ಒಡಿಶಾ ಮುಖ್ಯಮಂತ್ರಿ ನವೀನ್ ಪಟ್ನಾಯಕ್, ಈ ಅಪಘಾತದ ಬಗ್ಗೆ ವಿಷಾದ ವ್ಯಕ್ತಪಡಿಸುವ ಜೊತೆಗೆ, ಮೃತರ ಕುಟುಂಬಗಳಿಗೆ ಆರ್ಥಿಕ ನೆರವು ನೀಡುವುದಾಗಿ ಘೋಷಿಸಿದರು. ಮೃತರ ಕುಟುಂಬಗಳಿಗೆ ಒಡಿಶಾ ಸರ್ಕಾರ ತಲಾ 3 ಲಕ್ಷ ರೂಪಾಯಿ ಪರಿಹಾರ ನೀಡಲಿದೆ.

ಅಪಘಾತಕ್ಕೀಡಾದ ಪ್ರಯಾಣಿಕರ ಬಸ್ ಪಶ್ಚಿಮ ಬಂಗಾಳದ ಹಲ್ದಿಯಾಕ್ಕೆ ಹೋಗುತ್ತಿತ್ತು ಎಂದು ಒಡಿಶಾ ಸಾರಿಗೆ ಆಯುಕ್ತ ಅಮಿತವ್ ಠಾಕೂರ್ ಹೇಳಿದ್ದಾರೆ. ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಗಾಯಾಳುಗಳ ಸಹಾಯಕ್ಕಾಗಿ 16 ಆಂಬ್ಯುಲೆನ್ಸ್‌ಗಳನ್ನು ಸ್ಥಳಕ್ಕೆ ಕಳುಹಿಸಲಾಗಿತ್ತು.

ಸೇತುವೆಯಿಂದ ಬಿದ್ದ ಬಸ್ಸನ್ನು ಕ್ರೇನ್ ಸಹಾಯದಿಂದ ಮೇಲೆತ್ತಲಾಯಿತು. ರಕ್ಷಣಾ ಕಾರ್ಯಾಚರಣೆ ತಡರಾತ್ರಿ ಅಂತ್ಯಗೊಂಡಿದೆ. ಬಸ್‌ನಿಂದ ಪ್ರಯಾಣಿಕರನ್ನು ಹೊರ ತೆಗೆಯಲು ಗ್ಯಾಸ್ ಕಟ್ಟರ್‌ಗಳನ್ನು ಬಳಸಲಾಗಿದೆ ಎಂದು ಜಾಜ್‌ಪುರ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್ ನಿಖಿಲ್ ಪವನ್ ಕಲ್ಯಾಣ್ ಹೇಳಿದ್ದಾರೆ.

## ಮತದಾನದ ದಿನ ಕಂಪನಿಗಳು ರಜೆ ನೀಡದೆ ಇದ್ದರೆ ಕಠಿಣ ಕ್ರಮ

**ಬೆಂಗಳೂರು:** ಕರ್ನಾಟಕದಲ್ಲಿ ಎರಡು ಹಂತದಲ್ಲಿ ಮತದಾನ ನಡೆಯುತ್ತದೆ. ಏಪ್ರಿಲ್ 26 ಮತ್ತು ಮೇ 7 ರಂದು ಮತದಾನ ನಡೆಯಲಿದ್ದು, ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಈ ಎರಡೂ ದಿನ ಸರ್ಕಾರ ರಜೆ ಘೋಷಣೆ ಮಾಡಿದೆ. ಈ ಎರಡು ದಿನದಂದು ರಜೆ ನೀಡದ ಕಂಪನಿಗಳ ವಿರುದ್ಧ ಕಾರ್ಮಿಕ ಕಾಯ್ದೆ ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ.



ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಾವು ಐಟಿ ವಲಯ ಸೇರಿದಂತೆ ಖಾಸಗಿ ಕಂಪನಿಗಳನ್ನು ಸಂಪರ್ಕ ಮಾಡಿದ್ದು, ಅಲ್ಲಿನ ಸಿಇಒ ಮತ್ತು ಮ್ಯಾನೇಜ್‌ಮೆಂಟ್ ಗಳನ್ನು ಭೇಟಿಯಾಗಿ ಮತ ಚಲಾಯಿಸಲು ಸಿಬ್ಬಂದಿಗೆ ಉತ್ತೇಜಿಸುವಂತೆ ಹೇಳಿದ್ದೇವೆ ಎಂದು ತಿಳಿಸಿದರು.

ಖಾಸಗಿ ಕಂಪನಿಗಳ ಮಾಲೀಕರನ್ನು ಭೇಟಿ ಮಾಡಿ ಮತದಾನ ಮಾಡುವಂತೆ ಸಿಬ್ಬಂದಿಗಳಿಗೆ ಉತ್ತೇಜಿಸುವುದಲ್ಲದೆ, ಸಾಧ್ಯವಾದರೆ ಅವರಿಗೆ ಮತಗಟ್ಟೆಗಳಿಗೆ ತೆರಳಲು ವಾಹನದ ವ್ಯವಸ್ಥೆ ಮಾಡಿ ಎಂದು ಮನವಿ ಮಾಡಿದ್ದೇವೆ. ವರ್ಕ್ ಫ್ರಾಮ್ ಹೋಮ್ ಮಾಡುವಂತೆ ಕಂಪನಿಗಳು ಸಿಬ್ಬಂದಿಗೆ ಹೇಳುವಂತಿಲ್ಲ. ಕಡ್ಡಾಯವಾಗಿ ರಜೆ ನೀಡಲೇಬೇಕು. ಒಂದು ವೇಳೆ ರಜೆ ನೀಡದಿದ್ದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಶೇ35 ಅಥವಾ ಇದಕ್ಕಿಂತ ಕಡಿಮೆ ಮತದಾನವಾಗಿರುವ ಬಿಬಿಎಂಪಿ ವ್ಯಾಪ್ತಿಯ 1800 ಮತ್ತು ರಾಜ್ಯದ 5000 ಮತಗಟ್ಟೆಗಳನ್ನು ಗುರುತಿಸಿದ್ದೇವೆ. ನಾವು ಮನೆ ಮನೆಗೆ ತೆರಳಿ ಮತದಾನದ ಬಗ್ಗೆ ಅರಿವು ಮೂಡಿಸುತ್ತಿದ್ದೇವೆ. ಹಾಗೆ ಅಪಾರ್ಟ್‌ಮೆಂಟ್ ಅಸೋಸಿಯೇಷನ್‌ಗಳು ಮತ್ತು ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ಗಳನ್ನು ಸಂಪರ್ಕಿಸಿ ಮತದಾನದ ಬಗ್ಗೆ ತಿಳಿಸಿದ್ದೇವೆ. ಆದರೆ ನಾವು ಯಾರನ್ನೂ ಒತ್ತಾಯಿಸಲು ಸಾಧ್ಯವಿಲ್ಲ. ಏಪ್ರಿಲ್ 26 ಶುಕ್ರವಾರ ಆಗಿದ್ದು, ಮೊದಲು ಮತದಾನ ಮಾಡಿ ನಂತರ ರಜೆ ತೆಗೆದುಕೊಳ್ಳಬೇಕು ಅಂತ ಜನರಲ್ಲಿ ಮನವಿ ಮಾಡುತ್ತಿದ್ದೇವೆ.

ಮುಂದಿನ ದಿನಗಳಲ್ಲಿ ಮಾಲ್‌ಗಳು, ಥಿಯೇಟರ್‌ಗಳು ಮತ್ತು ಜನಸಂದಣಿ ಇರುವ ಇತರ ಸ್ಥಳಗಳಿಗೆ ಭೇಟಿ ನೀಡಿ ಮತದಾನದ ಬಗ್ಗೆ ಜನರಿಗೆ ತಿಳಿಸುತ್ತೇವೆ. ಮತ್ತು ಬ್ಯಾನರ್‌ಗಳನ್ನು ಹಾಕುತ್ತೇವೆ. ವಿದ್ಯುತ್ ಸರಬರಾಜು ನಿಗಮಗಳು (ಇಖಅಔಒ) ಮತ್ತು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಃಘಖಖಃ) ನಂತಹ ನೀರು ಸರಬರಾಜು ಏಜೆನ್ಸಿಗಳ ಮುಖಾಂತರ ಮತದಾನದ ಮಾಡುವಂತೆ ಗ್ರಾಹಕರಿಗೆ ಸಂದೇಶಗಳನ್ನು ಕಳುಹಿಸಲು ಮತ್ತು ಗಾಹಕರಿಗೆ ಮತದಾನ ದಿನವನ್ನು ನೆನಪಿಸಲು ಹೇಳಿದ್ದೇವೆ.

ತಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಚುನಾವಣೆ ಬಹಿಷ್ಕರಿಸುವುದಾಗಿ ಜನರು ಹೇಳುತ್ತಿರುವ ವಿಚಾರದ ಕುರಿತು ಮಾತನಾಡಿದ ಅವರು, ಇಂತಹ ಸಮಸ್ಯೆಗಳು ಗಮನಕ್ಕೆ ಬಂದರೆ ತಕ್ಷಣವೇ ನಮ್ಮ ತಂಡವನ್ನು ಸ್ಥಳಕ್ಕೆ ಕಳುಹಿಸಲಾಗುತ್ತದೆ. ಅವರು ಜನರೊಂದಿಗೆ ಮಾತನಾಡುತ್ತಾರೆ ಮತ್ತು ಮತದಾನ ಬಹಿಷ್ಕರಿಸದಂತೆ ಮನವಿ ಮಾಡುತ್ತಾರೆ. ನಾಗರಿಕರಿಗೆ ಮತದಾನದ ಶಕ್ತಿಯ ಬಗ್ಗೆಯೂ ತಿಳಿಸಲಾಗಿದೆ. ಸಂಬಂಧಪಟ್ಟ ಇಲಾಖೆಯೊಂದಿಗೂ ಸಹ ಸಂವಹನವನ್ನು ಮಾಡಲಾಗುತ್ತದೆ. ಮತ್ತು ಅವರ ಸಮಸ್ಯೆಗಳನ್ನು ಪರಿಹರಿಸಲು ಎಲ್ಲ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ ಎಂದು ಹೇಳಿದರು.

ಮಾರ್ಚ್ 16 ರಂದು ಮಾದರಿ ನೀತಿ ಸಂಹಿತೆ ಘೋಷಿಸಿದಾಗಿನಿಂದ 355.78 ಕೋಟಿ ರೂಪಾಯಿ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಇದು 2019ರ ಸಂಸತ್ ಚುನಾವಣೆ ಮತ್ತು 2023ರ ವಿಧಾನಸಭೆ ಚುನಾವಣೆಗಿಂತ ಹೆಚ್ಚಾಗಿದೆ ಎಂದರು.

ಹೆಚ್ಚುತ್ತಿರುವ ಭದ್ರತಾ ಕ್ರಮಗಳಿಗೆ ಸಂಬಂಧಿಸಿದಂತೆ ತೆಲಂಗಾಣದಲ್ಲಿ ಚುನಾವಣೆ ನಡೆಯುತ್ತಿರುವಾಗ, ಭದ್ರತಾ ಕಾರಣಗಳಿಗಾಗಿ ಕರ್ನಾಟಕದ ಗಡಿ ಪ್ರದೇಶಗಳನ್ನು ಮುಚ್ಚಲಾಗುತ್ತಿದೆ. ಅದೇ ರೀತಿ ಕರ್ನಾಟಕದಲ್ಲಿ ಚುನಾವಣೆ ನಡೆದಾಗ ಕೇರಳ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಮತ್ತು ಇತರ ಪ್ರದೇಶಗಳ ಗಡಿ ಪ್ರದೇಶಗಳನ್ನು ಮುಚ್ಚಲಾಗುತ್ತದೆ ಎಂದು ತಿಳಿಸಿದರು.

# ಬಿಜೆಪಿ ವಿರುದ್ಧ ಮತ ಚಲಾಯಿಸಲು ಕಾರ್ಮಿಕ ಸಂಘಟನೆ ಕರೆ



**ಮೈಸೂರು:** ಕೇಂದ್ರದಲ್ಲಿನ ಬಿಜೆಪಿ ಸರ್ಕಾರವು ಕಳೆದ ಹತ್ತು ವರ್ಷಗಳಲ್ಲಿ ನಿರ್ಮಾಣ ವಲಯವನ್ನು ಅತ್ಯಂತ ದುಸ್ಥಿತಿಗೆ ತಳ್ಳಿದೆ. ಇದರಿಂದಾಗಿ ಕೋಟ್ಯಂತರ ಕಟ್ಟಡ ನಿರ್ಮಾಣ ಕಾರ್ಮಿಕರ ಬದುಕು ಚಿಂತಾಜನಕವಾಗಿದೆ. ಹೀಗಾಗಿ ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ಎಲ್ಲರೂ ಬಿಜೆಪಿ ಮತ್ತು ಅದರ ಮೈತ್ರಿಕೂಟದ ವಿರುದ್ಧ ಮತ ಚಲಾಯಿಸಬೇಕೆಂದು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ಮನವಿ ಮಾಡಿದೆ.

ಈ ಕುರಿತು ಜಿಲ್ಲಾ ಪತ್ರಕರ್ತರ ಭವನದಲ್ಲಿ ಜಿಲ್ಲಾ ಸಮಿತಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ. ಮಹಾಂತೇಶ್ ಮಾತನಾಡಿ, ಮೋದಿ ನೇತೃತ್ವದ ಸರ್ಕಾರ ಕಾರ್ಮಿಕ ಹಕ್ಕುಗಳನ್ನು ದಮನ ಮಾಡಿದೆ. ಈಗ ಇರುವ ಕಲ್ಯಾಣ ಸೌಲಭ್ಯಗಳನು ತೆಗೆದು ಹಾಕುವ ಯತ್ನ ನಡೆಸಿದ್ದುದು ಎಲ್ಲರಿಗೂ ತಿಳಿದ ವಿಷಯವೇ ಆಗಿದೆ ಎಂದು ವಾಗ್ದಾಳಿ ನಡೆಸಿದರು.

ಅಲ್ಲದೆ, ಮೋದಿ ಸರ್ಕಾರದ ಅವಧಿಯಲ್ಲಿ ಕಾರ್ಮಿಕರ ಜೀವನ, ಜೀವನೋಪಾಯದ ಮೇಲೆ ವ್ಯವಸ್ಥಿತ ದಾಳಿ ಮಾಡಿ, ದೇಶದ ದುಡಿಯುವ ಜನರಿಗೆ ದ್ರೋಹ ಎಸಗಲಾಗಿದೆ. ಈ ನೀತಿಗಳು ಬೃಹತ್ ಉದ್ಯೋಗ ನಷ್ಟಕ್ಕೆ ಕಾರಣವಾಗಿವೆ. ಬೆಲೆಯೇರಿಕೆ, ಬಡತನ, ಹಸಿವುಗಳನ್ನು ಕಟ್ಟಡ ಕಾರ್ಮಿಕರು ಈ ಅವಧಿಯಲ್ಲಿ ಎದುರಿಸಬೇಕಾಗಿ ಬಂದಿತು. ನೋಟು ಅಮಾನ್ಯೀಕರಣ, ಜಿಎಸ್‌ಟಿಗಳಿಂದಾಗಿ ನಿರ್ಮಾಣ ವಲಯದ ಎಲ್ಲ ಸಾಮಾಗ್ರಿ ಬೆಲೆಯೇರಿವೆ. ಇದಲ್ಲದೆ, ಬಿಜೆಪಿ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದಲ್ಲಿ ಕಲ್ಯಾಣ ಮಂಡಳಿ ಮತ್ತು ಸೌಲಭ್ಯಗಳು ರದ್ದಾಗುವ ಅಪಾಯವಿದೆ. ಇದರೊಡನೆ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯ ನಿಧಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದ ವೇಳೆ ದುರುಪಯೋಗವಾಗಿದೆ ಎಂದು ಆರೋಪಿಸಿದರು.

ಜೊತೆಗೆ, ನಿರ್ಮಾಣ ಕಂಪನಿಗಳಿಂದ ಬಿಜೆಪಿಗೆ ಸಾವಿರಾರು ಕೋಟಿ ಹಣ ಸಂದಾಯವಾಗಿದೆ. ಚುನಾವಣಾ ಬಾಂಡ್‌ಗಳ ಅತಿ ದೊಡ್ಡ ಫಲಾನುಭವಿ ಬಿಜೆಪಿಯೇ ಆಗಿದೆ ಎಂಬುದು ಬಹಿರಂಗವಾಗಿದೆ. ಇನ್ನು, ಈಚೆಗೆ ಇಸ್ರೇಲ್ ಬಿಕ್ಕಟ್ಟು ವೇಳೆ ಅಲ್ಲಿಗೆ ಭಾರತೀಯ ಕಾರ್ಮಿಕರನ್ನು ಕಳುಹಿಸುವ ಒಪ್ಪಂದ ಕೇಂದ್ರ ಮಾಡಿಕೊಂಡಿದ್ದು, ಇವರಿಗೆ ಯಾವುದೇ ಭದ್ರತೆ ಒದಗಿಸಿಲ್ಲ. ಇದೇ ವೇಳೆ ದೇಶದ ಸೌಹಾರ್ದತೆಗೆ ಅಪಾಯ ಎದುರಾಗಿದುದ, ಈ ಎಲ್ಲ ಅಂಶಗಳನ್ನು ಗಮನಿಸಿ ಈ ಬಾರಿಯ ಚುನಾವಣೆ ವೇಳೆ ಬಿಜೆಪಿ ಹಾಗು ಅದರ ಮೈತ್ರಿಕೂಟದ ವಿರುದ್ಧ ಮತ ಚಲಾಯಿಸಬೇಕೆಂದು ಮನವಿ ಮಾಡಿದರು. ಇದಲ್ಲದೆ, ರಾಜ್ಯದಲ್ಲಿ ಇಂಡಿಯಾ ಒಕ್ಕೂಟದ ಭಾಗವಾಗಿರುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಕಾರ್ಮಿಕರ ಹಿತದೃಷ್ಟಿಯಿಂದ ಚುನಾಯಿಸಬೇಕೆಂದು ಕೋರಿದರು.

ಜಿಲ್ಲಾಧ್ಯಕ್ಷ ಎಚ್.ಎಂ. ಬಸವಯ್ಯ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನವೀನ್‌ಕುಮಾರ ಚಿಕ್ಕಬಾಗಿಲು, ಖಜಾಂಚಿ ಸೋಮಶಂಕರ್, ಕೃಷ್ಣ ನರಸೀಪುರ, ಮಹದೇವಸ್ವಾಮಿ ಹಾಗೂ ಇನ್ನಿತರರು ಇದ್ದರು.

## ಸಂವಿಧಾನ ಉಳಿದರೆ ಪ್ರಜಾಪ್ರಭುತ್ವದ ಉಳಿವು

**ಅಂಬೇಡ್ಕರ್ ಸಮಿತಿ ಏರ್ಪಡಿಸಿದ ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್ 133 ನೇ ಜಯಂತಿಯ ಕಾರ್ಯಕ್ರಮದಲ್ಲಿ ಪಡವರಹಳ್ಳಿಯ ಅಂಬೇಡ್ಕರ್ ಪುತ್ಥಳಿಗೆ ಚಾಮರಾಜ ಕ್ಷೇತ್ರದ ಕೆ ಹರೀಶ್ ಗೌಡ ಹಾಗೂ ಮಾಜಿ ಮಹಾಪೌರರಾದ ರಾಜೇಶ್ವರಿ ಪುಟ್ಟಸ್ವಾಮಿ ಮಾಲಾರ್ಪಣೆ ಮಾಡಿ ಮಾತನಾಡಿದರು. ಸಂವಿಧಾನ ಉಳಿದರೆ ಮಾತ್ರ ಪ್ರಜಾಪ್ರಭುತ್ವದ ಉಳಿವು. ಕೆಲವು ಪಟ್ಟಭದ್ರ ಶಕ್ತಿಗಳು ಸಂವಿಧಾನ ಬದಲಾಯಿಸುವ ಮಾತನ್ನಾಡುತ್ತಿದ್ದು, ಅಂತಹ ಪ್ರಯತ್ನವನ್ನು ಕಾಂಗ್ರೆಸ್ ಪಕ್ಷ ಬಲವಾಗಿ ವಿರೋಧಿಸುತ್ತದೆ' ಎಂದು ಶಾಸಕರಾದ ಕೆ ಹರೀಶ್ ಗೌಡ ಹೇಳಿದರು. ಇದೇ ಸಂದರ್ಭದಲ್ಲಿ ಇಂದಿರಾ ಗಾಂಧಿ ಬ್ಲಾಕ್ ನ ಅಧ್ಯಕ್ಷರಾದ ರವಿ ಮಂಚೇಗೌಡನ ಕೊಪ್ಪಲು, ಮಾಜಿ ಮಹಾಪೌರರಾದ ರಾಜೇಶ್ವರಿ ಪುಟ್ಟಸ್ವಾಮಿ, ಗ್ರಾಮದ ಅಧ್ಯಕ್ಷರಾದ ಚಂದ್ರಶೇಖರ್, ಶಂಕರ್ ನಾರಾಯಣ್, ಸುರೇಶ್, ನಿತಿನ್ ಪುಟ್ಟಸ್ವಾಮಿ, ಪಡುವಾರಹಳ್ಳಿ ಕುಮಾರ್ , ಆರ್ ಚಂದ್ರು, ಹಾಗೂ ಸ್ಥಳಿಯ ಮುಖಂಡರುಗಳು ಹಾಜರಿದ್ದರು**



# ನವ ಭಾರತಕ್ಕೆ ಮತದಾನ ಸಂಜೀವಿನಿ

**ಚಾಮರಾಜನಗರ:** ಪ್ರಜಾ ಪ್ರಭುತ್ವ ಬಲಿಷ್ಟಗೊಳ್ಳಲು ಪ್ರತಿಯೊಬ್ಬರೂ ಮತದಾನದಲ್ಲಿ ಭಾಗವಹಿಸಬೇಕು. ಒಂದೊಂದು ಮತವು ಸಹ ಸದೃಢ ಭಾರತ ನಿರ್ಮಾಣಕ್ಕೆ ಸಂಜೀವಿನಿಯಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ತಿಳಿಸಿದರು.

ಕೊಳ್ಳೇಗಾಲ ತಾಲ್ಲೂಕು ಪಂಚಾಯತ್ ಸ್ವೀಪ್ ಸಮಿತಿ ವತಿಯಿಂದ ಇಂದು ತಾಲೂಕಿನ ಮುಳ್ಳೂರು ಗ್ರಾಮ ಪಂಚಾಯತಿಯಲ್ಲಿ ಲೋಕಸಭಾ ಚುನಾವಣಾ-2024ರ ಅಂಗವಾಗಿ ಸಾರ್ವಜನಿಕರಿಗೆ ಮತದಾನ ಜಾಗೃತಿ ಮೂಡಿಸಲು ಹಮ್ಮಿಕೊಳ್ಳಲಾಗಿದ್ದ ಅಲಂಕರಿಸಿದ ಎತ್ತಿನಗಾಡಿ ಜಾಥಾವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮತದಾನ ನಮ್ಮ ಹಕ್ಕು. ಯಾರು ಸಹ ಮತದಾನದಿಂದ ದೂರ ಉಳಿಯದೇ ತಪ್ಪದೇ ಮತ ಚಲಾಯಿಸಬೇಕು. ಪ್ರಜಾಪ್ರಭುತ್ವದ ಹಬ್ಬವನ್ನು ಎಲ್ಲರೂ ಮತ ಚಲಾಯಿಸುವ ಮೂಲಕ ಆಚರಿಸಬೇಕು. ಪ್ರತೀ ಐದು ವರ್ಷಕ್ಕೆ ಒಮ್ಮೆ ಮಾತ್ರ ಬರುವ ಚುನಾವಣೆಯಲ್ಲಿ ಅಭಿವೃದ್ಧಿ ಪರವಾಗಿ ಕೆಲಸಗಳನ್ನು ಮಾಡುವ ಉತ್ತಮ ವ್ಯಕ್ತಿಯನ್ನು ಆರಿಸಿಕೊಳ್ಳಿ ಎಂದರು.

ಎತ್ತಿನಗಾಡಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಚುನಾವಣಾ ಯುವ ರಾಯಭಾರಿಗಳಾದ ಬಿಗ್‌ಬಾಸ್ ಖ್ಯಾತಿಯ ಕಾರ್ತಿಕ್ ಮಹೇಶ್ ಅವರು ಚಾಲನೆ ನೀಡಿ ಮಾತನಾಡಿ ಯಾವುದೇ ಆಸೆ, ಆಮಿಷಗಳಿಗೆ ಒಳಗಾಗದೇ ಪ್ರಬುದ್ಧ ವ್ಯಕ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಕಡ್ಡಾಯವಾಗಿ ಮತದಾನ ಮಾಡುವುದನ್ನು ಮರಿಯಬೇಡಿ ಎಂದು ಹೇಳಿದರು.

ಮತೋರ್ವ ರಾಯಭಾರಿ ಸಮತಾ ಸಮಾಜದ ಅಧ್ಯಕ್ಷರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಾದ ದೀಪಾ ಬುದ್ದೇ ಅವರು ಮತದಾನ ಮಾಡುವುದು ಬಹಳ ಪವಿತ್ರವಾದ ಕೆಲಸ. ನಮ್ಮ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವ ಒಬ್ಬ ಸೂಕ್ತ ಅಭ್ಯರ್ಥಿ ಆಯ್ಕೆ ಮಾಡಲು ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದು ತಿಳಿಸಿದರು. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ, ಸಹಾಯಕ ನಿರ್ದೇಶಕ ಗೋಪಾಲ್ ಕೃಷ್ಣ, ಗ್ರಾಮ ಪಂಚಾಯತಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಂಜೀವಿನಿ ಯೋಜನೆಯ ಒಕ್ಕೂಟದ ಸದಸ್ಯರು ಇದ್ದರು.



# ಎಚ್‌ಡಿಕೆ ಹೇಳಿಕೆ ಮಹಿಳೆಯರ ಸ್ವಾಭಿಮಾನಕ್ಕೆ ದಕ್ಕೆ ; ಪುಷ್ಪಾ

**ಮೈಸೂರು:** ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ದಾರಿ ತಪ್ಪಿದ್ದಾರೆ ಎಂಬ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಯೂ ಮಹಿಳೆಯರ ಸ್ವಾಭಿಮಾನಕ್ಕೆ ಧಕ್ಕೆ ತಂದಿದೆ ಎಂದು ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಗುಡುಗಿದರು.

ಕಾಂಗ್ರೆಸ್ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ಮಹಿಳಾ ವಿರೋಧಿ ಪಕ್ಷಗಳು. ಮಹಿಳೆಯರ ಬಗ್ಗೆ ಹಗುರವಾಗಿ ಮಾತಾಡುವುದನ್ನು ಕಾಯಕ ಮಾಡಿದ್ದಾರೆ ಎಂದರು.



ಗ್ಯಾರಂಟಿ ಯೋಜನೆಗಳು ಮಹಿಳೆಯರನ್ನು ಸ್ವಾವಲಂಬಿಯಾಗಿಸಿವೆ. ಪ್ರತಿನಿತ್ಯ 3-4 ಲಕ್ಷ ಹೆಣ್ಣು ಮಕ್ಕಳು ಉಚಿತ ಬಸ್ ಪ್ರಯಾಣ ಮಾಡುತ್ತಿದ್ದಾರೆ. ಗಾರ್ಮೆಂಟ್?ಸ ಮಹಿಳೆಯರು, ಕೂಲಿ ಕಾರ್ಮಿಕರು ಉಚಿತ ಬಸ್ ಪ್ರಯಾಣ ಮಾಡುತ್ತಿದ್ದಾರೆ. ಬಡ ಹೆಣ್ಣು ಮಕ್ಕಳ ಹಗುರ ಮಾತನ್ನು ದೇಶದ ಎಲ್ಲ ಮಹಿಳೆಯರು ಖಂಡಿಸಬೇಕು ಎಂದು ಹೇಳಿದರು.

ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮನುಸತಿಯ ಗಾಳಿಯ ಸೋಕಿದೆ. ತಮ ಪಕ್ಷದಲ್ಲಿನ ಜಾತ್ಯಾತೀತ ಪದವನ್ನು ತೆಗೆದು ಹಾಕಬೇಕು. ಹಿಂದಿನ ಚುನಾವಣೆಯಲ್ಲಿ ಸುಮಲತಾ ಅಂಬರೀಶ್ ಅವರ ಬಗ್ಗೆ ಬಹಳ ಹಗುರವಾಗಿ ಮಾತಾಡಿದರು. ಕುಮಾರಣ್ಣ ಅವರು ಮಹಿಳೆಯರ ದಾರಿ ತಪ್ಪಿಸುತ್ತಿದ್ದಾರೆ ಎಂದು ತಿಳಿಸಿದರು.

ತಮ ಹೇಳಿಕೆಗೆ ಕುಮಾರಸ್ವಾಮಿ ವಿಷಾದ ವ್ಯಕ್ತಪಡಿಸಿದ್ದಾರೆ. ಅದಕ್ಕೆ ನಮ ಒಪ್ಪಿಗೆ ಇಲ್ಲ. ಪ್ರಧಾನಿ ನರೇಂದ್ರ ಮೋದಿ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದ ಅವರು, ಎಚ್.ಡಿ. ಕುಮಾರಸ್ವಾಮಿ ಅವರ ವಿರುದ್ಧ ಅವರ ವಿರುದ್ಧ ಹೋಬಳಿ ಮತ್ತು ತಾಲೂಕು ಮಟ್ಟದಲ್ಲಿ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ಮೈಸೂರಿಗೆ ಬಂದಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ಸುಳ್ಳು ಹೇಳಿ ಓಡಿ ಹೋಗಿದ್ದಾರೆ. ಯಾವ ಮುಖ ಇಟ್ಟುಕೊಂಡು ಮೈಸೂರಿಗೆ ಬಂದಿದ್ದರು. ಅವರಿಗೆ ಬಡ ಕುಟುಂಬಗಳ ಮತ ಕೇಳುವ ಹಕ್ಕಿಲ್ಲ. ಇನ್ನೆಷ್ಟು ವರ್ಷಗಳು ದೇಶ, ರಾಮನ ಹೆಸರಿನಲ್ಲಿ ಮತ ಕೇಳುತ್ತೀರಿ? ಎಂದು ವಾಗ್ದಾಳಿ ನಡೆಸಿದರು.

ಮಾಜಿ ಮೇಯರ್ ಮೋದಾಮಣಿ ಮಾತನಾಡಿ, ಮಹಿಳೆಯರು ಎಲ್ಲಿ ದಾರಿ ತಪ್ಪಿದ್ದಾರೆ? ಈ ಹೇಳಿಕೆ ನೀಡಲು ನಿಮಗೆ ಏನು ಅರ್ಹತೆ ಇದೆ. ಹೀಗೆ ಮಾತಾಡಲು ನಿಮಗೆ ಅನುಮತಿ ಕೊಟ್ಟವರು ಯಾರು? ಈ ರೀತಿ ಮಾತಾಡುವುದನ್ನು ನಿಲ್ಲಿಸುವಂತೆ ಕುಮಾರಸ್ವಾಮಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಪುಷ್ಪವಲ್ಲಿ, ಮೋದಾಮಣಿ, ಸುಶೀಲಾ ಕೇಶವಮೂರ್ತಿ, ಲತಾ ಮೋಹನ್, ರೇಖಾ ಶ್ರೀನಿವಾಸ್, ಶುಭದಾಯಿನಿ. ಶಾರದಾ ಸಂಪತ್. ಡಾ ಸುಜಾತಾ ರಾವ್ ಮುಂತಾದವರಿದ್ದರು.

## 10ಲಕ ಸಾಲ ಪಡೆದು ವಂಚನೆ: ದೂರು ದಾಖಲು

ಮೈಸೂರು: ಕೃಷಿ ಉತ್ಪನ್ನಗಳನ್ನು ರಫ್ತು ಮಾಡಿ ಅದರಿಂದ ಹೆಚ್ಚಿನ ಹಣ ಸಂಪಾದಿಸಿ ನಿನಗೆ ಹೆಚ್ಚಿನ ಹಣ ಸೇರಿಸಿ ಕೊಡುವುದಾಗಿ ಹೇಳಿ 10ಲಕ್ಷ ರೂ. ಸಾಲ ಪಡೆದು ವ್ಯಕ್ತಿ ನಾಪತ್ತೆಯಾಗಿರುವ ಪ್ರಕರಣ ಮಂಡಿ ಪೊಲೀಸ್ ಠಾಣೆಯಲ್ಲಿ ಬೆಳಕಿಗೆ ಬಂದಿದೆ. ಹುಣಸಕುಪ್ಪೆ ಮುಖ್ಯರಸ್ತೆ ಪಿರಿಯಾಪಟ್ಟಣದ ನಿವಾಸಿಯಾದ ಪಿ.ಎಂ.ಕಿರಣ್() ಎಂಬುವವರೆ ಆರ್.ಶ್ರೀನಿವಾಸ್ ಐಪಿಎಸ್ ನಗರದ ಹರ್ಷ ಎಂಬುವವರಿಂದ ಹಣ ಪಡೆದು ವಂಚಿಸಿದವರಾಗಿದ್ದಾರೆ. ಇಬ್ಬರೂ ಖಾಸಗಿ ಕಾಲೇಜಿನಲ್ಲಿ ಸ್ನೇಹಿತರಾಗಿದ್ದು ಪರಸ್ಪರ ಹಣದ ವ್ಯವಹಾರ ನಡೆಸುತ್ತಿದ್ದರೆನ್ನಲಾಗಿದೆ. ಅಂತೆಯೇ 90ಸಾವಿರ ರೂ. ಹಣವನ್ನು ಹರ್ಷರಿಂದ ಕಿರಣ್ ಪಡೆದು ವಾಪಾಸ್ ನೀಡಿರುವುದಿಲ್ಲ. ಇದರೊಟ್ಟಿಗೆ ಮಾ.22ರಂದು ಮತ್ತೆ ಕಿರಣ್ ಕರೆ ಮಾಡಿ ಸಕಲೇಶಪುರದಲ್ಲಿರುವ ಏಲಕ್ಕಿಯನ್ನು ತಮಿಳುನಾಡಿನ ಇರೋಡ್ ಗೆ ತೆಗೆದುಕೊಂಡು ಹೋಗಿ ಮಾರಾಟ ಮಾಡಿದರೆ ಹೆಚ್ಚಿನ ಲಾಭ ಸಿಗಲಿದೆ. ಇದಕ್ಕಾಗಿ 10ಲಕ್ಷ ರೂ.ಗಳನ್ನು ನೀನು ಕೊಟ್ಟರೆ ಎಲಕ್ಕಿ ಮಾರಿ 1ಲಕ್ಷ ಹೆಚ್ಚುವರಿ ಸೇರಿಸಿಕೊಡುವುದಾಗಿ ಭರವಸೆ ನೀಡಿದ್ದಾರೆ. ಅದರಂತೆ ಬ್ಯಾಂಕ್ ಖಾತೆ ಮೂಲಕ ಹರ್ಷ 9 ಲಕ್ಷ ಹಾಗೂ 1ಲಕ್ಷ ನಗದನ್ನು ನೀಡಿದ್ದಾರೆ. ಅದಾದ ಬಳಿಕ ನೀಡಿದ ಹಣವನ್ನು ಇದುವರೆವಿಗೂ ಹಿಂದುರುಗಿ ಕಿರಣ್ ಕೊಟ್ಟಿಲ್ಲವೆಂದು ದೂರುದಾರರಾದ ಹರ್ಷ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡ ಮಂಡಿ ಠಾಣೆ ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.



# ಬಿಜೆಪಿ ಕಿತ್ತೊಗೆಯಲು ಯತ್ನಿಸಿ



**ಯಳಂದೂರು ತಾಲೂಕಿನ ಯರಿಯೂರು ಗ್ರಾಮದಲ್ಲಿ ಭಾನುವಾರ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಮತಯಾಚನೆ ಕಾರ್ಯಕ್ರಮದಲ್ಲಿ ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿದರು.**

**ಯಳಂದೂರು:** ದೇಶದಲ್ಲಿ ಬಿಜೆಪಿ ಪಕ್ಷವು ಅಧಿಕಾರಕ್ಕೆ ಬಂದ ನಂತರ ಕೇವಲ ಧರ್ಮ ಸಂಘರ್ಷದಲ್ಲೇ ಜನರು ಕಾಲ ದೂಡುವಂತೆ ಮಾಡಿದ್ದು ಪಕ್ಷಕ್ಕೆ ಪ್ರಮಾಣಿಕವಾಗಿ ದುಡಿದವರಿಗೆ ಮೂಲೆ ಗುಂಪು ಮಾಡಿ, ಕೋಮು ದ್ವೇಷವನ್ನು ಬಿತ್ತುವರಿಗೆ ಆದ್ಯತೆ ನೀಡುತ್ತಿದ್ದು ಇದನ್ನು ದೇಶದಿಂದ ಕಿತ್ತೊಗೆಯುವ ಸಂಕಲ್ಪವನ್ನು ಮತದಾರರು ಮಾಡಬೇಕು ಎಂದು ಕಾಂಗ್ರೆಸ್ ಮುಖಂಡೆ ವಾಣಿ ಕೆ. ಶಿವರಾಂ ಕರೆ ನೀಡಿದರು.

ಅವರು ಭಾನುವಾರ ತಾಲೂಕಿನ ಯರಿಯೂರು ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ಪರ ಮತಯಾಚನೆ ಮಾಡಿ ಮಾತನಾಡಿದರು. ನನ್ನ ಪತಿ ಬಿಜೆಪಿ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸಿದ್ದರು. ಇವರಿಗೆ ಪಕ್ಷ ಮೋಸ ಮಾಡಿತು. ಹಾಗಾಗಿ ನಾನು ಕಾಂಗ್ರೆಸ್ ಪಕ್ಷವನ್ನು ಸೇರಿದೆ. ಈ ಪಕ್ಷ ಬಡವರ ಪರವಾಗಿದೆ. ಗ್ಯಾರಂಟಿ ಯೋಜನೆಗಳಿಂದ ಜನಮನ್ನಣೆ ಗಳಿಸಿದೆ. ಇದರಿಂದ ಬಡವರಿಗೆ ಹೆಚ್ಚು ಅನುಕೂಲವಾಗುತ್ತಿದೆ. ಈ ಪಕ್ಷದ ತತ್ವ ಸಿದ್ಧಾಂತಗಳು ಬಡವರ ಪರವಾಗಿದ್ದು ನಾನು ಇಲ್ಲಿಗೆ ಸೇರಲು ಕಾರಣವಾಯಿತು. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಸುನೀಲ್ ಬೋಸ್‌ರನ್ನು ಆಯ್ಕೆ ಮಾಡುವ ಮೂಲಕ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷದ ಕೈಯನ್ನು ಬಲಪಡಿಸಬೇಕು ಎಂದು ಕರೆ ನೀಡಿದರು.

ಶಾಸಕ ಎ.ಆರ್. ಕೃಷ್ಣಮೂರ್ತಿ, ಜಿಪಂ ಮಾಜಿ ಉಪಾಧ್ಯಕ್ಷ ಜೆ.ಯೋಗೇಶ್ ಮಾತನಾಡಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ವಿ. ಚಂದ್ರು, ಕಿನಕಹಳ್ಳಿ ಪ್ರಭುಪ್ರಸಾದ್, ಅಣಗಳ್ಳಿ ಬಸವರಾಜು, ಜನಪದ ಮಹೇಶ್ ಸೇರಿದಂತೆ ಅನೇಕ ಮುಖಂಡರು ಇದ್ದರು.

# ಗಮನ ಸೆಳೆದ ಚಂದಕವಾಡಿ ಹೋಬಳಿ ಮಟ್ಟದ ಮತದಾನ ಜಾಗೃತಿ

**ಚಾಮರಾಜನಗರ:** ಸಧೃಡ ಭಾರತ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಕಡ್ಡಾಯ ಮತದಾನ ಮಾಡಬೇಕು ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಣಾಧಿಕಾರಿ ಕೃಷ್ಣಪ್ಪ ಹೇಳಿದರು.

ಚಂದಕವಾಡಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ತಾಲೂಕು ಸ್ವೀಪ್ ಸಮಿತಿ ವತಿಯಿಂದ ನಡೆದ ಹೋಬಳಿ ಮಟ್ಟದ ಮತದಾನ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.ಮತದಾನ ಮಾಡುವುದು ಪ್ರತಿಯೊಬ್ಬ ಭಾರತೀಯರ ಹಕ್ಕು ಮತ್ತು ಕರ್ತವ್ಯ ವಾಗಿದೆ ಎಂದರು.

ಪ್ರಜಾತಂತ್ರ ವ್ಯವಸ್ಥೆಯಲ್ಲಿ ಮತ ಹಕ್ಕು ಅತ್ಯಂತ ಮಹತ್ತರವಾದದು. ಅದು ಪ್ರತಿಯೊಬ್ಬರ ಸಂವಿಧಾನಬದ್ಧ ಹಕ್ಕು ಆಗಿದ್ದು, ಪ್ರತಿಯೊಬ್ಬರೂ ಆ ಹಕ್ಕನ್ನು ಚಲಾಯಿಸುವ ಮೂಲಕ ಸದೃಢ ಭಾರತ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಹೇಳಿದರು. ಮತದಾರರು ಮತ ಚಲಾವಣೆಗಾಗಿ ಯಾವುದೇ ಆಸೆ, ಆಮಿಷಕ್ಕೆ ಒಳಗಾಗಿ ಅತ್ಮವಂಚನೆ ಮಾಡಿಕೊಳ್ಳಬಾರದು. ಆ ರೀತಿಯಾದಲ್ಲಿ ಪ್ರಜಾಪ್ರಭುತ್ವದ ಬುಡಕ್ಕೆ ಕೊಡಲಿ ಪೆಟ್ಟು ಹಾಕಿದಂತಾಗುತ್ತದೆ. ಆ ಕಾರಣದಿಂದ ಪ್ರತಿಯೊಬ್ಬರು ತಮ್ಮ ಮತ ಚಲಾಯಿಸಿ ಜವಾಬ್ದಾರಿಯುತ ನಾಗರಿಕರಾಗಬೇಕು ಎಂದರು.

ಜಾಥಾದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಎಂ.ಸಿದ್ದರಾಜು, ಎಂ.ಎಸ್.ಚಂದ್ರು, ರವಿಕುಮಾರ್, ಬಿ.ಎಂ.ಮಹದೇವಪ್ಪ, ರಂಜಿತ್, ವಿ.ಸಿದ್ದರಾಜು, ಕೆ.ಎನ್. ಸೋಮಶೇಖರ, ಕಾರ್ಯದರ್ಶಿ ಗಳಾದ ಮಾದಪ್ಪ, ಕುಮಾರ್, ಪ್ರಕಾಶ್, ಸಿ.ಆರ್.ಲಿಂಗರಾಜು, ರಾಜೇಶ್, ಶಿವಸ್ವಾಮಿ, ರಾಚಪ್ಪ ಹಾಗೂ ಸಿಬ್ಬಂದಿಗಳು, ಎನ್ ಆರ್ ಎಲ್ ಎಂ ಮಹಿಳಾ ಒಕ್ಕೂಟದ ತಾಲೂಕು ಮೇಲ್ವಿಚಾರಕಿ ರಾಜಮ್ಮ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಎನ್ ಆರ್ ಎಲ್ ಎಂ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು.




## ಗೋವಾದಲ್ಲಿ ಕನ್ನಡಿಗರ ಮೇಲಿನ ದಾಳಿ ಸಹಿಸಲು ಸಾಧ್ಯವಿಲ್ಲ

**ಬೆಂಗಳೂರು:** ಉತ್ತರ ಗೋವಾದ ಸಾಂಗೋಲ್ಡಾ ಪ್ರದೇಶದಲ್ಲಿರುವ ಕನ್ನಡಿಗರ 15 ಮನೆಗಳನ್ನು ಜೆಸಿಬಿ ಬಳಸಿ ನೆಲಸಮಗೊಳಿಸಿರುವುದನ್ನು ಆಮ್ ಆದ್ಮಿ ಪಾರ್ಟಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಖಂಡಿಸಿದ್ದಾರೆ. ನಾಲ್ಕಾರು ದಶಕಗಳಿಂದ ನೆಲೆಸಿರುವ ಕನ್ನಡಿಗರ ಮೇಲೆ ಗೋವಾ ಸರ್ಕಾರ ನಡೆಸುತ್ತಿರುವ ಅಮಾನವೀಯ ಕೃತ್ಯಗಳು ಖಂಡನಾರ್ಹ. ನ್ಯಾಯಾಲಯದ ನಿರ್ದೇಶನಗಳನ್ನು ಮೀರಿ ಏಕಾಏಕಿ ಮನೆಗಳನ್ನೆಲ್ಲ ಒಡೆದು ಬೀದಿಪಾಲು ಮಾಡಿರುವುದು ಅಕ್ಷಮ್ಯ. ಗೋವಾದ ಮತದಾರರಾಗಿ, ಗೋವಾ ಅಭಿವೃದ್ಧಿಗೆ ಸತತ ಶ್ರಮಿಸುತ್ತಿರುವ ಕನ್ನಡಿಗರ ಮನೆಗಳನ್ನು ಜೆಸಿಬಿ ಬಳಸಿ ನೆಲಸಮಗೊಳಿಸುತ್ತಿರುವುದು ಅಘಾತಕಾರಿ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಕನ್ನಡಿಗರ ಮೇಲೆ ನಿರಂತರವಾಗಿ ದೌರ್ಜನ್ಯ ಎಸಗುತ್ತಿರುವುದನ್ನು ಸಹಿಸಲು ಸಾಧ್ಯವಿಲ್ಲ. ತಕ್ಷಣ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿರಿಯ ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸಿ ಪರಿಶೀಲಿಸಿ ಪುನರ್ವಸತಿ ಕಲ್ಪಿಸಿಕೊಡಬೇಕು ಹಾಗೂ ಕೇಂದ್ರ ಸರ್ಕಾರ ಗೋವಾದ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರ ಜೊತೆ ಮಾತನಾಡಿ ಪರಿಸ್ಥಿತಿ ತಿಳಿಗೊಳಿಸಬೇಕು ಒತ್ತಾಯಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಮಾತೆತ್ತಿದರೆ ಒಂದು ರಾಷ್ಟ್ರ ಎನ್ನುತ್ತಾರೆ. ಆದರೆ ಒಂದೇ ರಾಷ್ಟ್ರದಲ್ಲಿ ತಮ್ಮದೇ ಸರ್ಕಾರವಿರುವ ಗೋವಾ ಸರ್ಕಾರವು ಕನ್ನಡಿಗರನ್ನು ಶತ್ರುಗಳನ್ನಾಗಿ ನೋಡುತ್ತಿದ್ದರೂ ಕಣ್ಮುಚ್ಚಿ ಕುಳಿತಿರುವುದೇಕೆ? ಒಂದು ರಾಷ್ಟ್ರ ಎಂಬ ಪರಿಕಲ್ಪನೆ ಎಂದರೆ ಇದೇನಾ? ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳು ಬಿಜೆಪಿಯೇತರ ರಾಜ್ಯಗಳ ಮೇಲೆ ಏನು ದಬ್ಬಾಳಿಕೆ ನಡೆಸಿದರೂ ಸಹಿಸಿಕೊಂಡಿರಬೇಕೆ? ಎಂದು ಕಿಡಿಕಾರಿದ್ದಾರೆ.

# ಮೈದಾನ ಸ್ವಚ್ಛಗೊಳಿಸಿದ ಯದುವೀರ್ ದಂಪತಿ



**ಮೈಸೂರು:** ಲೋಕಸಭೆ ಚುನಾವಣೆ ಪ್ರಚಾರಕ್ಕಾಗಿ ಭಾನುವಾರ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಬಿಜೆಪಿ ನಡೆಸಿದ್ದ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅಬ್ಬರದ ಪ್ರಚಾರ ಭಾಷಣ ಮಾಡಿದ್ದರು. ಮೈಸೂರುಕೊಡಗುಕ್ಷೇತ್ರದಪಕ್ಷದಅಭ್ಯರ್ಥಿ ಯದುವೀರ್ ಒಡೆಯರ್ ಪರ ಮತಯಾಚನೆ ಮಾಡಿದ್ದರು. ಸಮಾವೇಶಕ್ಕೆ ಸಾವಿರಾರು ಹಾಜರಾಗಿದ್ದರು. ಸಮಾವೇಶದ ನಂತರ ಆ ಜಾಗದಲ್ಲಿ ಕಸ ಹೆಕ್ಕುವ ಮೂಲಕ ಯದುವೀರ್ ದಂಪತಿ ಗಮನ ಸೆಳೆದಿದ್ದಾರೆ. ಮಹಾರಾಜ ಕಾಲೇಜು ಮೈದಾನದಲ್ಲಿ ಇತರ ಕಾರ್ಯಕರ್ತರ ಜತೆ ಸಾಮಾನ್ಯರಲ್ಲಿ ಸಾಮಾನ್ಯರಂತೆಯೇ ಯದುವೀರ್ ಹಾಗೂ ತ್ರಿಷಿಕಾ ಕುಮಾರಿ ಸಿಂಗ್ ದಂಪತಿ ಶುಚಿತ್ವ ಕಾರ್ಯದಲ್ಲಿ ಭಾಗಿಯಾದರು. ಈ ಮೂಲಕ ನಾನು ಮಹಾರಾಜ ಅಲ್ಲ, ಸಾಮನ್ಯ ಪ್ರಜೆ ಎಂದು ಸಾಬೀತುಪಡಿಸಲು ಯದುವೀರ್ ಮುಂದಾದಂತೆ ಕಂಡಿತು. ಭಾನುವಾರ ಮಹಾರಾಜ ಕಾಲೇಜಯ ಮೈದಾನದಲ್ಲಿ ನಡೆದಿದ್ದ ವಿಜಯ ಸಂಕಲ್ಪ ಸಮಾವೇಶದಲ್ಲಿ 60 ಸಾವಿರಕ್ಕೂ ಹೆಚ್ಚು ಜನರು ಭಾಗಿಯಾಗಿದ್ದರು. ಯದುವೀರ್ ಪರವಾಗಿ ಪ್ರಧಾನಿ ಮೋದಿ ಹಾಗೂ ಜೆಡಿಎಸ್ ವರಿಷ್ಠ ದೇವೇಗೌಡರು ಮತಯಾಚನೆ ಮಾಡಿದ್ದರು. ಅಲ್ಲದೆ, ರಾಜ್ಯ ಇತರ ಕ್ಷೇತ್ರಗಳ ಮೈತ್ರಿ ಅಭ್ಯರ್ಥಿಗಳನ್ನು ಬೆಂಬಲಿಸುವಂತೆಯೂ ಮತದಾರರಿಗೆ ಮನವಿ ಮಾಡಿದ್ದರು.

# ಕಾಂಗ್ರೆಸ್ ರೈತರಿಗೆ ಗ್ಯಾರಂಟಿ ನೀಡದೆ ಮೋಸ ಮಾಡಿದೆ; ಕಾಶಂಪೂರ್ ಆರೋಪ

**ಚಾಮರಾಜನಗರ:** ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಮಹಿಳೆಯರು ಹಾಗೂ ಯುವಕರಿಗೆ ಗ್ಯಾರಂಟಿ ಯೋಜನೆಗಳನ್ನುನೀಡಿದೆ. ಆದರೆ, ರಾಜ್ಯದ ರೈತರಿಗೆ ಯಾವುದೇ ಗ್ಯಾರಂಟಿ ಯೋಜನೆಗಳನ್ನು ನೀಡದೆ ಮೋಸ ಮಾಡಿದೆ ಎಂದು ಜೆಡಿಎಸ್ ಮುಖಂಡ ಬಂಡೆಪ್ಪ ಕಾಶಂಪೂರ್ ಆರೋಪಿಸಿದರು.ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆ, ಸ್ತ್ರೀಶಕ್ತಿ ಯೋಜನೆ ಹಾಗೂ ಯುವಕರಿಗೆ ಯುವನಿಧಿ ಯೋಜನೆಯಡಿ ಹಣ ನೀಡಲಾಗುತ್ತಿದೆ. ಆದರೆ,ರೈತರಿಗೆ ಯಾವ ಗ್ಯಾರಂಟಿ ಕೊಟ್ಟಿದ್ದೀರ ಎಂದು ಪ್ರಶ್ನಿಸಿದಅವರು ರೈತರಿಗೆ ಸಿಗಬೇಕಾದ ಬರ ಪರಿಹಾರ ನೀಡಿಲ್ಲ.ಅಲ್ಲದೇ ರೈತರ ಜಮೀನುಗಳಿಗೆ ದಿನನಿತ್ಯ 7 ಗಂಟೆ ನಿರಂತರ ವಿದ್ಯುತ್ ನೀಡದೆ ತಾರತಮ್ಯ ಮಾಡುತ್ತಿದೆ ಎಂದು ಸುದ್ದಿಗೋಷ್ಠಿಯಲ್ಲಿ ದೂರಿದರು.ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿಯಿಂದ ಚುನಾವಣೆ ಎದುರಿಸುತ್ತಿದ್ದೇವೆ. ಈಗಾಗಲೇ ರಾಜ್ಯದ 28 ಕ್ಷೇತ್ರಗಳ ಪೈಕಿ ಬಿಜೆಪಿಗೆ 25 ಹಾಗೂ ಜೆಡಿಎಸ್‌ಗೆ 3 ಕ್ಷೇತ್ರಗಳನ್ನು ಹಂಚಿಕೆ ಮಾಡಲಾಗಿದ್ದು ಈ ಚುನಾವಣೆಯಲ್ಲಿ 28 ಕ್ಷೇತ್ರಗಳಲ್ಲೂ ಗೆಲ್ಲುತ್ತೇವೆ. ನರೇಂದ್ರ ಮೋದಿ ಅವರು 10 ವರ್ಷಗಳ ಕಾಲ ಉತ್ತಮ ಆಡಳಿತ ನಡೆಸಿದ್ದಾರೆ. ಯುಪಿಎ ಸರ್ಕಾರದ ಅವಧಿಯಲ್ಲಿ ನಡೆದ ಹಗರಣಗಳಂತೆ 10 ವರ್ಷಗಳಲ್ಲಿ ಯಾವುದೇ ಹಗರಣಗಳಿಲ್ಲ ಎಂದರು.5 ಗ್ಯಾರಂಟಿಗಳನ್ನು ನೀಡುತ್ತೇವೆ ಎಂದು ಕಾಂಗ್ರೆಸ್ ಜನರನ್ನು ದಿಕ್ಕು ತಪ್ಪಿಸುತ್ತಿದೆ. 5 ಗ್ಯಾರಂಟಿ ಯೋಜನೆಗಳು ಎಲ್ಲರಿಗೂ ಸಿಗುತ್ತಿಲ್ಲ. ರಾಜ್ಯದಲ್ಲಿ ಭೀಕರ ಬರಗಾಲವಿದ್ದು 18 ಸಾವಿರ ಕೋಟಿ ಪರಿಹಾರ ನೀಡುವಂತೆ ಕೇಂದ್ರಕ್ಕೆ ಮನವಿ ಮಾಡಿದ್ದೇವೆ ಎಂದು ರಾಜ್ಯ ಸರ್ಕಾರ ಹೇಳುತ್ತಿದೆ. 18 ಸಾವಿರ ಕೋಟಿಯನ್ನು ರೈತರಿಗೆ ನೀಡಿ ಆ ನಂತರ ಮಾತನಾಡಲಿ. ರಾಜ್ಯ ಸರ್ಕಾರ 5 ಗ್ಯಾರಂಟಿ ಯೋಜನೆಗಳಿಂದ ದಿವಾಳಿಯಾಗಿದ್ದು ಬೊಕ್ಕಸ ಖಾಲಿಯಾಗಿದೆ ಎಂದು ಹೇಳಿದರು.ಎಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದಾಗ 2018ರಲ್ಲಿ 25 ಸಾವಿರ ಕೋಟಿ ರೂ. ರೈತರ ಸಾಲಮನ್ನಾ ಮಾಡಿದರು. ಆದರೆ, ಕಾಂಗ್ರೆಸ್ ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ. ಯಾವುದೇ ನೀರಾವರಿ ಯೋಜನೆಗಳಿಲ್ಲ. ಎಸ್‌ಇಪಿ, ಟಿಎಸ್‌ಪಿ ಯೋಜನೆಯ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಲಾಗುತ್ತಿದೆ. ಆದರೆ, ಕೇಂದ್ರ ಸರ್ಕಾರ ಆಯುಷ್ಮಾನ್ ಭಾರತ್ ಕಾರ್ಡ್ ಮೂಲಕ 5 ಲಕ್ಷದ ತನಕ ಉಚಿತವಾಗಿ ಆರೋಗ್ಯ ಸೇವೆಗಳನ್ನು ಒದಗಿಸಿದೆ. ಅಲ್ಲದೇ ಜಲ ಜೀವನ್ ಮಿಷನ್ ಅಡಿ ನೀರು ಪೂರೈಸುತ್ತಿದೆ. ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಗೆಲುವು ಭ್ರಮಯಾಗಿದೆ ಎಂದು ಲೇವಡಿ ಮಾಡಿದರು. ಈ ಹಿಂದೆ ಬಿಜೆಪಿಯೊಂದಿಗೆ 20 ತಿಂಗಳು ಹಾಗೂ ಕಾಂಗ್ರೆಸ್‌ನೊಂದಿಗೆ 14 ತಿಂಗಳ ಕಾಲ ನಡೆದ ಆಡಳಿತದಲ್ಲಿ ಸಚಿವನಾಗಿದ್ದು ಬಿಜೆಪಿಯೊಂದಿಗೆ ಇದ್ದ ಕಂಫರ್ಟಬಲ್ ಕಾಂಗ್ರೆಸ್‌ನೊಂದಿಗೆ ಇರಲಿಲ್ಲ. ಆದ್ದರಿಂದ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯೊಂದಿಗೆ ಜೆಡಿಎಸ್ ಮೈತ್ರಿ ಮಾಡಿಕೊಂಡು ಹೆಚ್ಚಿನ ಸ್ಥಾನಗಳನ್ನು ಗೆಲ್ಲಲಿದೆ ಎಂದರು. ಸುದ್ದಿಗೋಷ್ಟಿಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್, ಜೆಡಿಎಸ್ ರಾಜ್ಯ ವಕ್ತಾರ ಸಿ.ಎಂ.ನಾಗರಾಜು, ಜೆಡಿಎಸ್ ಮುಖಂಡ ಬಿ.ಪುಟ್ಟಸ್ವಾಮಿ ಇದ್ದರು.



# ಹೈಕೋರ್ಟ್ 5 ನ್ಯಾಯಮೂರ್ತಿಗಳ ಸೇವೆ ಖಾಯಂ

**ಬೆಂಗಳೂರು:** ರಾಜ್ಯ ಹೈಕೋರ್ಟ್‌ನಲ್ಲಿ ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದ ಐವರು ನ್ಯಾಯಮೂರ್ತಿಗಳನ್ನು ಖಾಯಂಗೊಳಿಸಿ ಸುಪ್ರೀಂಕೋರ್ಟ್ ಕೊಲಿಜಿಯಂ ಅಧಿಸೂಚನೆ ಹೊರಡಿಸಿದೆ. ನ್ಯಾಯಮೂರ್ತಿಗಳಾದ ಸಿ ಎಂ ಪೂಣಚ್ಚ, ಅನಿಲ್ ಭೀಮಸೇನ ಕಟ್ಟಿ, ಚಂದ್ರಶೇಖರ್ ಮೃತ್ಯುಂಜಯ ಜೋಶಿ, ಉಮೇಶ್ ಎಂ. ಅಡಿಗ ಮತ್ತು ಟಿ ಜಿ ಶಿವಶಂಕರೇಗೌಡ ಅವರನ್ನು ಅಧಿಕಾರವಹಿಸಿಕೊಳ್ಳುವ ದಿನದಿಂದ ಅನ್ವಯವಾಗುವಂತೆ ಕಾಯಂಗೊಳಿಸಲಾಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಹೆಚ್ಚುವರಿ ನ್ಯಾಯಮೂರ್ತಿಯಾಗಿ ನೇಮಕಗೊಂಡಿದ್ದ ನ್ಯಾ. ಜಿ ಬಸವರಾಜ ಅವರನ್ನು 2024ರ ಆಗಸ್ಟ್ 16ರಿಂದ ಅನ್ವಯವಾಗುವಂತೆ ಮತ್ತೆ ಒಂದು ವರ್ಷ ಹೊಸದಾಗಿ ಹೆಚ್ಚುವರಿ ನ್ಯಾಯಮೂರ್ತಿ ಹುದ್ದೆಯಲ್ಲಿ ಮುಂದುವರಿಸಲಾಗಿದೆ ಎಂದು ಪ್ರತ್ಯೇಕವಾಗಿ ಹೊರಡಿಸಲಾಗಿರುವ ಅಧಿಸೂಚನೆಯಲ್ಲಿ ಭಾರತ ಸರ್ಕಾರದ ಜಂಟಿ ಕಾರ್ಯದರ್ಶಿ ಜಗನ್ನಾಥ್ ಶ್ರೀನಿವಾಸನ್ ತಿಳಿಸಿದ್ದಾರೆ. ನಾಳೆ ಹೈಕೋರ್ಟ್‌ನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಕಾಯಂಗೊಂಡಿರುವ ನ್ಯಾಯಮೂರ್ತಿಗಳಿಗೆ ಪ್ರಮಾಣ ವಚನ ಬೋಧಿಸಲಿದ್ದಾರೆ ಎಂದು ಹೈಕೋರ್ಟ್‌ನ ರಿಜಿಸ್ಟ್ರಾರ್ ಜನರಲ್ ಕೆ ಎಸ್ ಭರತ್ ಕುಮಾರ್ ''ಬಾರ್ ಅಂಡ್ ಬೆಂಚ್''ಗೆ ತಿಳಿಸಿದ್ದಾರೆ. ಹೈಕೋರ್ಟ್‌ನಲ್ಲಿ ಮುಖ್ಯ ನ್ಯಾಯಮೂರ್ತಿಯೂ ಸೇರಿ 51 ನ್ಯಾಯಮೂರ್ತಿಗಳಿದ್ದಾರೆ. ಸದ್ಯ ಐವರು ನ್ಯಾಯಮೂರ್ತಿಗಳನ್ನು ಕಾಯಂಗೊಳಿಸಿರುವುದರಿಂದ 44 ಮಂದಿ ಕಾಯಂ ನ್ಯಾಯಮೂರ್ತಿಗಳು ಹಾಗೂ ಏಳು ಮಂದಿ ಹೆಚ್ಚುವರಿ ನ್ಯಾಯಮೂರ್ತಿಗಳು ಇದ್ದಾರೆ.



# ಸಾತನೂರಿನಲ್ಲಿ ಮೈತ್ರಿ ಅಭ್ಯರ್ಥಿ ಪರ ಮತಯಾಚನೆ

ಮಂಡ್ಯ: ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿ ಗೆಲುವಿಗೆ ಮನೆಮನೆಗೆ ಕರಪತ್ರ ಹಂಚುವ ಮೂಲಕ ನರೇಂದ್ರ ಮೋದಿ ಅವರ ಆಡಳಿತದ ಸಾಧನೆ ತೋರಿಸುವ ಕೆಲಸ ಮಾಡಿ ಮತಯಾಚನೆ ಮಾಡುವ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದು ಬಿಜೆಪಿ ಮುಖಂಡ ಅಶೋಕ್ ಜಯರಾಂ ಹೇಳಿದರು.

ತಾಲ್ಲೂಕಿನ ಸಾತನೂರು ಗ್ರಾಮದಲ್ಲಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರ ಪರವಾಗಿ ಮನೆಮನೆಗೆ ಕರ ಪತ್ರ ಹಂಚುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಚುನಾವಣಾ ಪ್ರಚಾರವನ್ನು ಜಂಟಿಯಾಗಿ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಮತ್ತು ಮುಖಂಡರು ಮಾಡುತ್ತಿದ್ದೇವೆ, ಬಿಜೆಪಿಯಿಂದ ಬಿಡುಗಡೆ ಮಾಡಿರುವ ಚುನಾವಣಾ ಪ್ರಣಾಳಿಕೆಯು ದೇಶದ ಅಭಿವೃದ್ಧಿಗೆ ಪೂರಕವಾಗಿದೆ, ಇಂತಹ ಹಲವು ಕೇಂದ್ರ ಸರ್ಕಾರದ ಯೋಜನೆಗಳನ್ನು ಹಾಗೂ ಕಾಂಗ್ರೆಸ್ ಆಡಳಿತದ ವೈಫಲ್ಯವನ್ನು ಜನರಿಗೆ ತಿಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು. ಮಂಡ್ಯ ಜಿಲ್ಲೆಯಲ್ಲಿ ರೈತರು ಆತ್ಮಹತ್ಯೆ ಮಾಡಿಕೊಂಡಾಗ ಹೊರ ಜಿಲ್ಲೆಯವರು ಎಂದು ಟೀಕಿಸುತ್ತಿರುವ ನಮ್ಮ ನಾಯಕ ಎಚ್.ಡಿ.ಕುಮಾರಸ್ವಾಮಿ ಅವರೇ ಬಂದು ಆ ಕುಟುಂಬಗಳಿಗೆ ಸಾಂತ್ವಾನ ಹೇಳಿ ಆರ್ಥಿಕ ಸಹಾಯ ಮಾಡಿದರು, ಅಂತಹವರು ಹೊರಗಿನವರು ಹೇಗೆ ಆಗುತ್ತಾರೆ ಎಂಬುದನ್ನು ಕಾಂಗ್ರೆಸ್ ತಿಳಿದುಕೊಳ್ಳಬೇಕು ಎಂದು ಸವಾಲು ಹಾಕಿದರು. ಈ ಸಂದರ್ಭದಲ್ಲಿ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಭೀಮೇಶ್ ನೇತೃತ್ವದಲ್ಲಿ ಮನೆಮನೆಗೆ ಕರಪತ್ರ ನೀಡಿ ಮತಯಾಚನೆ ಮಾಡಲಾಯಿತು. ಮುಖಂಡರಾದ ಯೋಗೇಶ್, ದೇವರಾಜು, ಕರಿಯಪ್ಪ, ರಾಜು, ಸಚಿನ್, ಶಂಭುಲಿಂಗು ಭಾಗವಹಿಸಿದ್ದರು.

# ಅಂಚೆ ಮತದಾನ ಕೇಂದ್ರ ಸ್ಥಾಪನೆ

**ಬೆಂಗಳೂರು:** ಲೋಕಸಭಾ ಸಾರ್ವತ್ರಿಕ ಚುನಾವಣೆ -2024ರ ಸಂಬಂಧ 24-ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ 8 ವಿಧಾನಸಭಾ ಕ್ಷೇತ್ರಗಳಲ್ಲಿ ಅಗತ್ಯ ಸೇವೆಗಳ (ಂಗಿಖಇ) ಸಿಬ್ಬಂದಿಗಳಿಗೆ ಮತ ಚಲಾಯಿಸಲು ಏಪ್ರಿಲ್ 19 (ಶುಕ್ರವಾರ), 20-04-2024 (ಶನಿವಾರ) ಮತ್ತು 21-04-2024 (ಭಾನುವಾರ) ಗಳಂದು ಬೆಳ್ಳಿಗೆ 9 ರಿಂದ ಸಂಜೆ 5 ಗಂಟೆ ವರೆಗೆ ಮತ ಚಲಾಯಿಸಲು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕಂದಾಯ ಇಲಾಖಾ ನೌಕರರ ಸಂಘ (ರಿ) ಕೇಂದ್ರ, ಸಂಘ ಕಟ್ಟಡ, ಸಭಾಂಗಣ ನೆಲಮಹಡಿ, ಕಂದಾಯ ಭವನ ಹಿಂಬಾಗ, ಕೆ.ಜಿ. ರಸ್ತೆ ಬೆಂಗಳೂರು-56009 ಇಲ್ಲಿ ಅಂಚೆ ಮತದಾನ ಕೇಂದ್ರ ಸ್ಥಾಪಿಸಲಾಗಿದೆ ಎಂದು ನಂ- 24 ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ರಾಮನಗರ ತಾಲ್ಲೂಕು ಪಂಚಾಯತ್ ಹಾಗೂ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ರಾಮನಗರ ತಾಲ್ಲೂಕಿನ ವಿಭೂತಿಕೆರೆ ಗ್ರಾಮ ಪಂಚಾಯಿತಿಯಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು.

# ಹನೂರು ಪಟ್ಟಣದಲ್ಲಿ ಮತದಾನ ಜಾಗೃತಿ ಜಾಥಾ

**ಚಾಮರಾಜನಗರ:** ಲೋಕಸಭಾ ಚುನಾವಣಾ ಹಿನ್ನೆಲೆ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕು ಪಂಚಾಯಿತಿ ಮತ್ತು ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಹನೂರು ಪಟ್ಟಣದಲ್ಲಿಂದು ಚುನಾವಣಾ ಪರ್ವ - ದೇಶದ ಗರ್ವ ಘೋಷ ವಾಕ್ಯದೊಂದಿಗೆ ಮತದಾನ ಜಾಗೃತಿಗಾಗಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಜಾಥಾಗೆ ಚಾಲನೆ ನೀಡಿದರು. ಜಾಥಾ ಕಾರ್ಯಕ್ರಮವು ಅಂಬೇಡ್ಕರ್ ಸಮುದಾಯದ ಭವನದಿಂದ ಪ್ರಾರಂಭವಾಗಿ ಬಸ್ ನಿಲ್ದಾಣದಲ್ಲಿ ಅಂತ್ಯವಾಯಿತು. ಇದೇ ವೇಳೆ ಮಾತನಾಡಿದ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಅವರು ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡಿ. ಮತದಾನ ಮಾಡುವಂತೆ ಇತರರನ್ನು ಪ್ರೇರೇಪಿಸಬೇಕು. ಯಾರು ಕೂಡ ಮತದಾನದಿಂದ ವಂಚಿತಾರಾಗಬಾರದು. ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತಚಲಾಯಿಸಬೇಕು ಎಂದರು. ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುರೇಶ್ ಅವರು ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು. ಸಹಾಯಕ ನಿರ್ದೇಶಕರಾದ ರವೀಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಪಂಚಾಯತಿ ಅಧಿಕಾರಿಗಳು, ಎನ್.ಆರ್.ಎಲ್.ಎಂ ಸಂಘದ ಸದಸ್ಯರು, ಬಿ.ಎಲ್.ಓ ಗಳು ಇದೇ ವೇಳೆ ಇದ್ದರು.

## ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ನಾಗ್ ಸಲಹೆ

# ಮತಗಟ್ಟೆಗಳಲ್ಲಿ ಸೌಲಭ್ಯ ಕಲ್ಪಿಸಿ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆಗಳಲ್ಲಿ ವಿಶೇಷಚೇತನರ ಮತದಾನಕ್ಕೆ ಅಗತ್ಯ ಮೂಲ ಸೌಕರ್ಯಗಳನ್ನು ಆದ್ಯತೆ ಮೇರೆಗೆ ಕಲ್ಪಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.



ನಗರದ ಜಿಲ್ಲಾಡಳಿತ ಭವನದಲ್ಲಿರುವ ಕೆಸ್ವಾನ್ ಕಚೇರಿ ಸಭಾಂಗಣದಲ್ಲಿಂದು ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ ವಿಶೇಷಚೇತನ ಮತದಾರರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ನೋಡಲ್ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 26 ಸಾವಿರಕ್ಕೂ ಹೆಚ್ಚಿನ ವಿಶೇಷಚೇತನ ಮತದಾರರನ್ನು ಗುರುತಿಸಲಾಗಿದ್ದು, ಮತಗಟ್ಟೆಗಳಲ್ಲಿ ವಿಶೇಷಚೇತನರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಕನಿಷ್ಠ ಸೌಲಭ್ಯಗಳನ್ನು ಒದಗಿಸಬೇಕಾಗಿದೆ. ಭಾರತ ಚುನಾವಣಾ ಆಯೋಗ ಹಾಗೂ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ಕಚೇರಿ ಈ ಬಗ್ಗೆ ನಿರ್ದೇಶನ ನೀಡಿದೆ. ಈ ನಿಟ್ಟಿನಲ್ಲಿ ವಿಶೇಷಚೇತನರಿಗೆ ಮತಗಟ್ಟೆಗಳಲ್ಲಿ ಅವಶ್ಯ ಸೌಲಭ್ಯಗಳನ್ನು ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳು ಮುಂದಾಗಬೇಕು ಎಂದರು.

ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಯಾವುದೇ ವಿಶೇಷಚೇತನರು ಮತದಾನದಿಂದ ವಂಚಿತರಾಗದಂತೆ ನಿಗಾ ವಹಿಸಬೇಕು. ಇದಕ್ಕಾಗಿ ಪ್ರತಿ ಗ್ರಾಮ ಪಂಚಾಯಿತಿವಾರು ಹಾಗೂ ಪ್ರತಿ ಮತಗಟ್ಟೆವಾರು ಎಷ್ಟು ವಿಶೇಷಚೇತನರಿದ್ದಾರೆ ಎಂಬ ಮಾಹಿತಿ ಸಂಗ್ರಹಿಸುವ ಕಾರ್ಯ ತುರ್ತಾಗಿ ಆಗಬೇಕಾಗಿದೆ. ಮತದಾನ ದಿನದಂದು ವಿಶೇಷಚೇತನರಿಗೆ ಮತ ಚಲಾಯಿಸಲು ಯಾವುದೇ ಗೊಂದಲಕ್ಕೆ ಆಸ್ಪದವಾಗದಂತೆ ಮತದಾರರ ಚೀಟಿಯನ್ನು ಕ್ಷೇತ್ರ ಮತಗಟ್ಟೆ ಅಧಿಕಾರಿಗಳ ಮೂಲಕ ವಿತರಿಸಲಾಗಿದೆ ಎಂದು ತಿಳಿಸಿದರು.

ವಿಶೇಷಚೇತನರು ಮತದಾನಕ್ಕೆ ಮತಗಟ್ಟೆಗಳಿಗೆ ಆಗಮಿಸಿದಾಗ ಇತರರೊಂದಿಗೆ ಸರತಿ ಸಾಲಿನಲ್ಲಿ ಕಾಯಿಸದೇ ಆದ್ಯತೆ ಮೇರೆಗೆ ಪ್ರತ್ಯೇಕ ವ್ಯವಸ್ಥೆ ಮಾಡಿಕೊಡಬೇಕು. ಮತಗಟ್ಟೆಗಳು ವಿಶೇಷಚೇತನ ಸ್ನೇಹಿಯಾಗಿರಬೇಕು. ಕುಡಿಯುವ ನೀರು, ನೆರಳಿನ ವ್ಯವಸ್ಥೆ, ಶೌಚಾಲಯ, ಕುಳಿತುಕೊಳ್ಳಲು ಅಸನಗಳ ವ್ಯವಸ್ಥೆ, ರ‍್ಯಾಂಪ್ ವ್ಯವಸ್ಥೆ, ಸೇರಿದಂತೆ ಎಲ್ಲಾ ವ್ಯವಸ್ಥೆಗಳು ಸಮರ್ಪಕವಾಗಿರಬೇಕು. ಮತದಾನ ಸಮಯದಲ್ಲಿ ವಿಶೇಷಚೇತನರು ಯಾವುದೇ ಆಮಿಷ ಒಳಗಾಗದಂತೆ ತಡೆಯಲು ಸಂಬಂಧಪಟ್ಟ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ವಿಶೇಷ ಗಮನ ಹರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದರು.

ಚಾಮರಾಜನಗರ ಲೋಕಸಭಾ ವ್ಯಾಪ್ತಿಯ 8 ವಿಧಾನಸಭಾ ಕ್ಷೇತ್ರಗಳಲ್ಲಿ ಅಂಚೆಪತ್ರ ಮತದಾನದ ಸಲುವಾಗಿ ಒಟ್ಟು 25589 ವಿಶೇಷಚೇತನರನ್ನು ಗುರುತಿಸಿದ್ದು, ಈ ಪೈಕಿ 445 ವಿಶೇಷಚೇತನ ಮತದಾರರು ಮನೆಯಲ್ಲಿ ಮತದಾನ ವ್ಯವಸ್ಥೆಯನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಉಳಿದವರು ಮತಗಟ್ಟೆಗೆ ಬಂದು ಮತ ಚಲಾಯಿಸಲಿದ್ದಾರೆ. ಈ ಸಂಬಂಧ ಮತದಾರರಿಗೆ ?ನಮೂನೆ-12ಡಿ? ಯನ್ನು ವಿತರಿಸಲಾಗಿದೆ. ಒಟ್ಟಾರೆ ಯಾವುದೇ ವಿಶೇಷಚೇತನರು ಕಡ್ಡಾಯವಾಗಿ ಮತದಾನ ಮಾಡಲು ಆಯಾ ತಹಶೀಲ್ದಾರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಹೆಚ್ಚುವರಿ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ಚುನಾವಣಾಧಿಕಾರಿ ಗೀತಾ ಹುಡೇದ, ಎಂಟು ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸುರೇಶ್, ಜಿಲ್ಲಾಮಟ್ಟದ ಅಧಿಕಾರಿಗಳು, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ನರಸಾಪುರ ಹೋಬಳಿ ಮಟ್ಟದ ಬಿಜೆಪಿ ಜೆಡಿಎಸ್ ಮುಖಂಡರ ಸಭೆ

**ನರಸಾಪುರ :** ಇದೆ ತಿಂಗಳ 22 ನೇ ತಾರೀಕು ವೇಮಗಲ್ ಗ್ರಾಮದಲ್ಲಿ ಬಿಜೆಪಿ ಜೆಡಿಎಸ್ ಪಕ್ಷದ ಬೃಹತ್ ಸಮಾವೇಶದ ಪೂರ್ವಭಾವಿ ಸಭೆ ಇರುವುದರಿಂದ ನರಸಾಪುರ ಹೋಬಳಿ ಮುಖಂಡರ ಸಭೆಯಲ್ಲಿ ಮಾಜಿ ಸಚಿವ ವರ್ತೂರ್ ಪ್ರಕಾಶ್ ಮಾತನಾಡಿ ರಾಜ್ಯದಲ್ಲಿ ಬಿಜೆಪಿ ಪಕ್ಷ ಅಧಿಕಾರದಲ್ಲಿ ಇದ್ದಾಗ ನರಸಾಪುರ ಮತ್ತು ವೇಮಗಲ್ ಭಾಗಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿದ್ದು ಇದರಿಂದ ಸಾವಿರಾರು ಮಂದಿ ನಿರುದ್ಯೋಗಿ ಯುವಕ ಯುವತಿಯರಿಗೆ ಉದ್ಯೋಗ ಕಲ್ಪಿಸಿದ ಪಕ್ಷ ಬಿಜೆಪಿ ಪಕ್ಷ ಕಳೆದ ಲೋಕಸಭಾ ಚುನಾವಣೆಯಲ್ಲಿ ಎಸ್ ಮುನಿಸ್ವಾಮಿ ರವರು ಬಿಜೆಪಿ ಪಕ್ಷದಿಂದ ಗೆಲುವು ಸಾಧಿಸಿ ಜಿಲ್ಲೆಗೆ ಹಲವಾರು ಯೋಜನೆಗಳನ್ನು ತಂದಿದ್ದಾರೆ ನಮ್ಮ ಜಿಲ್ಲೆ ಇನ್ನು ಅಭಿವೃದ್ಧಿ ಆಗಬೇಕಾಗಿದ್ದು ಅದಕ್ಕಾಗಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿ ಮಲ್ಲೇಶ್ ಬಾಬುರವರನ್ನು ಮೂರು ಲಕ್ಷಕ್ಕೂ ಹೆಚ್ಚಿನ ಮತಗಳಿಂದ ಗೆಲ್ಲಿಸಬೇಕು ನರೇಂದ್ರ ಮೋದಿಜಿ ಮತ್ತು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರು ಮಾಡಿರುವ ಅಭಿವೃದ್ಧಿ ಕೆಲಸಗಳನ್ನು ನಿಮ್ಮ ಗ್ರಾಮಗಳಲ್ಲಿ ಸರ್ವಜನಿಕರಿಗೆ ತಿಳಿಸಿ ದೇಶದಲ್ಲಿ ನರೇಂದ್ರ ಮೋದಿ ಕೈ ಬಲಪಡಿಸಲು ಜೆಡಿಎಸ್ ಬಿಜೆಪಿ ಕಾರ್ಯಕರ್ತರು ಹಗಲಿರಲು ಶ್ರಮಿಸಬೇಕು ಎಂದು ತಿಳಿಸಿದರು .

ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್ ಮಾತನಾಡಿ ನಮ್ಮ ಭಾರತ ದೇಶಕ್ಕೆ ಭದ್ರ ಅಡಿಪಾಯ ಹಾಕಿಕೊಟ್ಟ ಪ್ರಧಾನಿಗಳಾದ ಸನ್ಮಾನ್ಯ ನರೇಂದ್ರ ಮೋದಿಜಿ ರವರು ಮತ್ತು ಎಚ್ ಡಿ ದೇವೇಗೌಡ ರವರು ಇವರು ಮಾಡಿರುವ ಅಭಿವೃದ್ಧಿ ಕಾರ್ಯಗಲಿಂದಲೇ ದೇಶ ಅಭಿವೃದ್ಧಿಯಾಗಲು ಸಾಧ್ಯವಾಗುತ್ತಿದೆ ಇನ್ನು ಹೆಚ್ಚಿನ ಅಭಿವೃದ್ಧಿಯ ಕೆಲಸಗಳು ಆಗಬೇಕಾಗುವುದರಿಂದ ಕೋಲಾರದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭ್ಯರ್ಥಿಯಾದ ಮಲ್ಲೇಶ್ ಬಾಬು ರವರನ್ನು ಗೆಲ್ಲಿಸುವುದರ ಮುಖಾಂತರ ದೇಶದ ಅಭಿವೃದ್ಧಿಗೆ ನಮ್ಮ ಕಡೆಯಿಂದಲು ಒಂದು ಕಾಣಿಕೆ ನೀಡಿ ಬೇಕಾಗಿದೆ ಎಂದು ಕಾರ್ಯಕರ್ತರಿಗೆ ತಿಳಿಸಿದರು .

ಈ ಸಂದರ್ಭದಲ್ಲಿ ಬೆಗ್ಲಿ ಸೂರ್ಯ ಪ್ರಕಾಶ್, ಬಾಬು ಮೌನಿ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಬಂಕ್ ಮಂಜುನಾಥ್, ಕಡೆಗಟ್ಟೂರು ವಿಜಯ್ ಕುಮಾರ್ ,ಗ್ರಾಮಾಂತರ ಅಧ್ಯಕ್ಷಸಿಡಿರಾಮಚಂದ್ರಗೌಡ,ಮಾಜಿ ಪ್ರಧಾನ ಕಾರ್ಯದರ್ಶಿ ಜಂಬಾಪುರ ವಿನಯ್ ಕುಮಾರ್, ತಾಲೂಕ್ ಪಂಚಾಯತ್ ಮಾಜಿ ಅಧ್ಯಕ್ಷ ಸೋಲೂರು ಆಂಜಿನಪ್ಪ, ಒಕ್ಕಲೇರಿ ರಾಮು, ಲೋಕೇಶ್ ಮರಿಯಪ್ಪ, ಎಲ್ಲವಾರ ಸೊಣ್ಣೆಗೌಡ, ಕೋಲಾರ ಗ್ರಾಮಾಂತರ ಯುವ ಮೋರ್ಛಾ ಅಧ್ಯಕ್ಷ ಅಭಿ ಭಾರದ್ವಾಜ್ ನಾಯ್ಡು, ಪ್ರಧಾನ ಕಾರ್ಯದರ್ಶಿ ನವೀನ್ ಕುಮಾರ್,ತಿರುಮಲೇಶ್,ಪ್ರಭಾಕರ್,ಮೋಹನ್ ಗೌಡ, ಮತ್ತು ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಉಪಸ್ಥಿತರಿದ್ದರು.



# ಗುರಿ ಸಾಧನೆಗೆ ಪರಿಶ್ರಮ, ತಾಳ್ಮೆ ಮುಖ್ಯ

**ಚಾಮರಾಜನಗರ:** ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಪಡೆಯಲು ಓದಿನಲ್ಲಿ ಶ್ರದ್ದೆ, ಪರಿಶ್ರಮ, ತಾಳ್ಮೆ ಹಾಗೂ ಅತ್ಮವಿಶ್ವಾಸ ಜಿಲ್ಲಾಧಿಕಾರಿ ಹೊಂದಿರಬೇಕು. ಆಗಮಾತ್ರ ತಾವು ಇತರೆ ವಿದ್ಯಾರ್ಥಿಗಳಿಗೆ ಮಾದರಿಯಾಗಲು ಸಾಧ್ಯವಾಗಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ತಿಳಿಸಿದರು.



ಚಾಮರಾಜನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಅತೀ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಪ್ರಾಂಶುಪಾಲರ ಸಂಘದಿಂದ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಅಭಿನಂದಿಸಿ, ನಗದು ಬಹುಮಾನ ವಿತರಿಸಿ ಅವರು ಮಾತನಾಡಿದರು.

ಈ ಬಾರಿಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದೀರಿ. ನಿಮ್ಮ ಈ ಸಾಧನೆ ಇತರರಿಗೆ ಪ್ರೇರಣೆಯಾಗಬೇಕು. ಮುಂದಿನ ದಿನಗಳಲ್ಲಿ ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿ ಜಿಲ್ಲೆ, ರಾಜ್ಯ, ದೇಶಕ್ಕೆ ಕೀರ್ತಿ ತರಬೇಕು. ವಿದ್ಯಾರ್ಥಿಗಳು ಸಾಮಾಜಿಕ ಕಳಕಳಿಯನ್ನು ಹೊಂದಿ ಇದೇ ಜಿಲ್ಲೆಯಲ್ಲಿ ಸೇವೆ ಸಲ್ಲಿಸಿ ಜಿಲ್ಲೆಯನ್ನು ಮುಂಚೂಣಿಗೆ ತರಲು ಮುಂದಾಗಬೇಕು ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿಗೂ ಉನ್ನತ ಸ್ಥಾನ ಪಡೆಯಲು ಉತ್ತಮ ಅವಕಾಶಗಳಿವೆ. ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಜಿಲ್ಲೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಪಟ್ಟಣ ಪ್ರದೇಶದ ಮಕ್ಕಳಿಗೆ ಸಮಾನವಾಗಿ ಅಂಕಗಳನ್ನು ಪಡೆದು ಉತ್ತೀರ್ಣರಾಗಿದ್ದೀರಿ. ಅವರಷ್ಟೆ ನೀವು ಬುದ್ದಿವಂತರು, ಸಮರ್ಥರಾಗಿದ್ದೀರಿ. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಆತ್ಮವಿಶ್ವಾಸವಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಮಾತನಾಡಿ ಭವಿಷ್ಯದಲ್ಲಿ ನಿಗದಿತ ಗುರಿ ಸಾಧನೆಗೆ ಪ್ರಯತ್ನ ಮಾಡಬೇಕು. ವಿದ್ಯಾರ್ಥಿಗಳ ಗುರಿ ಸಾಧನೆಗೆ ಪೋಷಕರು, ಶಿಕ್ಷಕರ ಸಹಕಾರ ಅತೀ ಮುಖ್ಯವಾಗಿದೆ. ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿ ಎಂದು ಸಲಹೆ ನೀಡಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಂಜುನಾಥ ಪ್ರಸನ್ನ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ದ್ವಿತೀಊಯ ಪಿ.ಯು.ಸಿ 1ನೇ ಹಂತದ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ಉನ್ನತ ಶ್ರೇಣಿ ಪಡೆದಿರುವ ಕಲಾ ವಿಭಾಗದಲ್ಲಿ 3, ವಾಣಿಜ್ಯ ವಿಭಾಗದಲ್ಲಿ 6 ಮತ್ತು ವಿಜ್ಞಾನ ವಿಭಾಗದ 3 ಸೇರಿದಂತೆ ಒಟ್ಟು 12 ಮಂದಿ ವಿದ್ಯಾರ್ಥಿಗಳನ್ನು ಜಿಲ್ಲಾಡಳಿತ ವತಿಯಿಂದ ಗೌರವಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ತಮ್ಮ ಮುಂದಿನ ಭವಿಷ್ಯದ ಗುರಿ ಕುರಿತು ಅನಿಸಿಕೆಗಳನ್ನು ಕಾರ್ಯಕ್ರಮದಲ್ಲಿ ಹಂಚಿಕೊಂಡರು. ವಿದ್ಯಾರ್ಥಿಗಳ ಅನಿಸಿಕೆಗಳಿಗೆ ಜಿಲ್ಲಾಧಿಕಾರಿಯವರಾದ ಶಿಲ್ಪಾ ನಾಗ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಪ್ರಾಂಶುಪಾಲರ ಸಂಘದಿಂದ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಜಿಲ್ಲೆಯ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳನ್ನು ಶಾಲು ಹೊದಿಸಿ, ಸ್ಮರಣಿಕೆ ಹಾಗೂ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ವಿದ್ಯಾರ್ಥಿಗಳ ಪೋಷಕರು, ಶಿಕ್ಷಕರು ಕಾರ್ಯಕ್ರಮದಲ್ಲಿ ಇದ್ದರು.

# ದಸೂಡಿ ಗ್ರಾಪಂನಲ್ಲಿ ಅಂಬೇಡ್ಕರ್ ಜಯಂತಿ

**ಹುಳಿಯಾರು:** ಅಂಬೇಡ್ಕರ್ ಅವರು ಭಾರತದಲ್ಲಿ ಮತ್ರವಲ್ಲದೆ ಪ್ರಪಂಚಾದ್ಯಂತ ಪ್ರಸ್ತುತರಾಗಿದ್ದಾರೆ. ಅಮೇರಿಕಾ ಅವರನ್ನು ಈ ಹಿಂದೆನೇ ಜ್ಞಾನದ ಸಂಕೇತ ಎಂದು ಒಪ್ಪಿಕೊಂಡಿತ್ತು. ದುರಾದೃಷ್ಟಕರವೆಂದರೆ ಭಾರತ ದೇಶದಲ್ಲಿ ಅವರ ಚಿಂತನೆಗಳನ್ನು ಕಡೆಗಣಿಸಲಾಗುತ್ತದೆ ಹಾಗು ಹತ್ತಿಕ್ಕಲಾಗುತ್ತಿದೆ. ಎಂದು ಲೇಖಕ ಹಾಗೂ ಗ್ರಾಪಂ ಸದಸ್ಯ ಕೆ.ಮರಿಯಪ್ಪ ಅಭಿಪ್ರಾಯಪಟ್ಟರು. ಹುಳಿಯಾರು ಹೋಬಳಿಯ ದಸೂಡಿ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಏ.14 ರಂದು ಆಯೋಜಿಸಿದ್ದ ಅಂಬೇಡ್ಕರ್ ಜಯಂತಿಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಭಾರತದಲ್ಲಿ ಜಾತಿ ವ್ಯವಸ್ಥೆ ಶೋಷಣೆಗೆ ಕಾರಣವಾಗಿದ್ದು ಮೇಲ್ಜಾತಿಯವರು. ಬಾಬಾಸಾಹೇಬರು ಜಾತಿ ವಿನಾಶ ಬಯಸಿ ಮೀಸಲಾತಿ ಜಾರಿ ತಂದರು. ಆದರೆ ಜಾತಿಯ ಅಂತರ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದು ವಿಷಾದನೀಯ ಸಂಗತಿ. ಮೇಲ್ಜಾತಿಗಳು ಮತ್ತು ದಲಿತರ ನಡುವೆ ಆರ್ಥಿಕ ಅಸಮಾನತೆ ನಿರಂತರವಾಗಿ ಹೆಚ್ಚುತ್ತಿದೆ, ಅಂಬೇಡ್ಕರ್ ಹೇಳಿದಂತೆ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಸಮಾನತೆ ದೇಶದಲ್ಲಿ ಬರುವವರೆವಿಗೂ ದೇಶದ ಪ್ರಗತಿ ಅಸಾಧ್ಯ ಎಂದರು. ಗ್ರಾಮ ಪಂಚಾಯಿತಿ ಸದಸ್ಯ ಜಯ್ಯಣ್ಣ, ತ್ರಿವೇಣಿ ಮತ್ತು ಮಾಜಿ ಸದಸ್ಯ ಲಕ್ಷ್ಮೀಕಾಂತ ಜಿ ಹರ್ತಿ, ಕಚೇರಿ ಸಿಬ್ಬಂದಿಗಳಾದ ಕೆ.ಸಿ.ರಾಜು, ತಿಮ್ಮರಾಜು, ದಬ್ಬಗುಂಟೆ ಗ್ರಾಮದ ಮುಖಂಡ ಹನುಮಯ್ಯ ಇತರರು ಇದ್ದರು.



# ಸಮಸಮಾಜ ಕಟ್ಟುವಲ್ಲಿ ಅಂಬೇಡ್ಕರ್ ಶ್ರಮ ಅಪಾರ; ಶಿಕ್ಷಕ ಪುಟ್ಟಮಾದಯ್ಯ

**ಪಿರಿಯಾಪಟ್ಟಣ:**ಡಾ. ಬಿ ಆರ್.ಅಂಬೇಡ್ಕರ್ ದೀನ ದಲಿತರು, ಮಹಿಳೆಯರು ಹಾಗೂ ಕಾರ್ಮಿಕರ ಹಕ್ಕುಗಳಿಗಾಗಿ ಹೋರಾಡಲು ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು ಎಂದು ಮುರಾರ್ಜಿ ವಸತಿ ಶಾಲೆಯ ಶಿಕ್ಷಕ ಪುಟ್ಟಮಾದಯ್ಯ ತಿಳಿಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಭಾನುವಾರ ಅಯೋಜಿಸಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ರವರ 133 ನೇ ಜನ್ಮ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಮಸಮಾಜವನ್ನು ಕಟ್ಟುವಲ್ಲಿ ಅವರ ಶ್ರಮ ಅಪಾರವಾಗಿದ್ದು, ಸ್ವಾತಂತ್ರ್ಯ ಹೋರಾಟದಲ್ಲಿ , ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಆರ್ಥಿಕ ಬೆಳವಣಿಗೆಗೆ ಪ್ರಮುಖ ಪಾತ್ರ ವಹಿಸಿದ್ದರು, ಅಸ್ಪೃಶ್ಯತೆ ವಿರುದ್ಧ, ತಾರತಮ್ಯವನ್ನು ತೊಡೆದು ಹಾಕಲು ಹೋರಾಡಿದ ಅವರು ಯಾವ ಸಮಾಜದಲ್ಲಿ ತಾರತಮ್ಯವಿರುತ್ತದೆಯೋ ಅಲ್ಲಿಯವರೆಗೆ ವ್ಯವಸ್ಥಿತ ಸಮಾಜವನ್ನು ಕಟ್ಟುವಲ್ಲಿ ವಿಫಲವಾಗುತ್ತೇವೆ,

ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರಜೆಗಳೇ ಆಡಳಿತ ಮಾಡುವಂತಹ ಈ ರಾಜಕೀಯ ವ್ಯವಸ್ಥೆಯಲ್ಲಿ ರಾಜನೇ ಪ್ರಜೆಗಳ ಹತ್ತಿರ ಬಂದು ಮತ ಕೇಳುವ ಪರಸ್ಥಿತಿ ಎದುರಾಗುತ್ತದೆ ಎಂದು ಅಂದೇ ಹೇಳಿದ್ದರು ಎಂದರು. ಆರ್ಥಿಕ ಪರಿಸ್ಥಿತಿಗಳನ್ನು ಸುಧಾರಿಸುವುದು ಮತ್ತು ತುಳಿತಕ್ಕೊಳಗಾದ ವರ್ಗಗಳ ಕುಂದುಕೊರತೆಗಳ ನಿವಾರಣೆ ರಿಸರ್ವ್ ಬ್ಯಾಂಕ್ ಸ್ಥಾಪನೆ, ರಾಜಕೀಯದಲ್ಲಿ 21 ವರ್ಷಕ್ಕೆ



ಇದ್ದ ಮತದಾನದ ಅವಧಿಯನ್ನು 18 ವರ್ಷಕ್ಕೆ ತಿದ್ದುಪಡಿ ಮಾಡಿ ಪ್ರಜೆಗಳ ಹಕ್ಕನ್ನು ಬಲಪಡಿಸಲಾಗಿದೆ ಎಂದರು.

ತಹಶೀಲ್ದಾರ್ ಸುರೇಂದ್ರ ಮೂರ್ತಿ, ತಾ. ಪಂ. ಇಒ ಸುನೀಲ್ ಕುಮಾರ್ ಲೋಕೋಪಯೋಗಿ ಇಲಾಖೆ ಇಇ ವೆಂಕಟೇಶ್, ಎಇಇ ಕೃಷ್ಣಮೂರ್ತಿ, ಪಶುಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಸೋಮಯ್ಯ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಚಂದ್ರಶೇಖರ್, ಮುಖಂಡರಾದಚಾಮರಾಯನ ಕೋಟೆ ಜಗದೀಶ್, ಪಿ. ಮಹದೇವ್, ಪಿ. ಪಿ.ಮಹದೇವ್ ಸೀಗೂರು ವಿಜಯ್ ಕುಮಾರ್, ಎಸ್.ರಾಮು, ರಾಮಚಂದ್ರ, ಜಗದೀಶ್, ಶಿವಣ್ಣ, ತಮ್ಮಣ್ಣಯ್ಯ ಇನ್ನಿತರರಿದ್ದರು.

# ಬಲೂನ್ ಹಾರಿಸುವ ಮೂಲಕ ಮತದಾನ ಅರಿವು



**ಚಿಕ್ಕಬಳ್ಳಾಪುರ:** ಜಿಲ್ಲೆಯ ವಿವಿಧೆಡೆ ಮತದಾನದ ಮಹತ್ವ ಮೂಡಿಸುವ ಜಾಗೃತಿಗಾಗಿ ವಿಭಿನ್ನ ಕಾರ್ಯಕ್ರಮಗಳು ನಡೆದವು.

ಬಾಗೇಪಲ್ಲಿ ತಾಲ್ಲೂಕಿನ ಘಂಟಂವಾರಿಪಲ್ಲಿ ಗ್ರಾಮ ಪಂಚಾಯ್ತಿಯ ಹೊಸಹುಡ್ಯ ಗ್ರಾಮದಲ್ಲಿ ಮಂಗಳಮುಖಿಯರೊಂದಿಗೆ ಬಲೂನ್ ಹಾರಿಸುವ ಮೂಲಕ ಮತದಾನದ ಪ್ರಾಮುಖ್ಯತೆಯ ಬಗ್ಗೆ ಅರಿವು ಮೂಡಿಸಲಾಯಿತು. ಮತದಾರರ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ಆರ್. ಹೇಮಾವತಿ ಅವರು ಹದಿನೆಂಟು ವರ್ಷ ಮೇಲ್ಪಟ್ಟವರು ಕಡ್ಡಾಯವಾಗಿ ತಮ್ಮ ಮತದಾನದ ಹಕ್ಕನ್ನು ಚಲಾಯಿಸಬೇಕು. ಯಾರೂ ಕೂಡ ಮತದಾನದಿಂದ ವಂಚಿತರಾಗಬಾರದು. ಪ್ರತಿಯೊಬ್ಬರಿಗೂ ಮತದಾನದ ಬಗ್ಗೆ ಅರಿವಿರಬೇಕು ಎಂದರು.

ಈ ಸಂದರ್ಭದಲ್ಲಿ ಗುಡಿಬಂಡೆ ತಹಶೀಲ್ದಾರ್ ಎನ್. ಮನಿಷ್, ಗ್ರಾಮ ಪಂಚಾಯತ್ ಸಿಬ್ಬಂದಿ, ಹಿರಿಯ ನಾಗರೀಕರು, ಇತರರು ಹಾಜರಿದ್ದರು.

ಚಿಕ್ಕಬಳ್ಳಾಪುರ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ನಗರದ 3ನೇ ವಾರ್ಡ್ ನಲ್ಲಿ ಮತದಾನದ ಮಹತ್ವ ಸಾರುವ ಬ್ಯಾನರ್ ಪ್ರದರ್ಶಿಸಿ ಕರಪತ್ರಗಳನ್ನು ನೀಡಲಾಯಿತು. ಇದೇ ವೇಳೆ ಮತದಾರರ ಜಾಗೃತಿಗಾಗಿ ಸೆಲ್ಫಿ ಕೇಂದ್ರವನ್ನು ತೆರೆಯಲಾಯಿತು. ಸಿವಿಜಿಲ್ ಆಪ್ ಕುರಿತು ಮಾಹಿತಿ ನೀಡಲಾಯಿತು. ಮತದಾನ ಕುರಿತ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಮಂಚೇನಹಳ್ಳಿ ತಸೀಲ್ದಾರ್ ವೆಂಕಟೇಶ್, ಸಮಗ್ರ ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಗೌರಿಬಿದನೂರು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ಜಿ.ಕೆ. ಹೊನ್ನಯ್ಯ ರವರು ಮನೆಯಿಂದ ಮತದಾನಕ್ಕೆ ಸಂಬಂಧಿಸಿದಂತೆ ಮನೆಗಳಿಗೆ ಭೇಟಿ ನೀಡಿ ಮತದಾನ ಮಾಡಿದ 85 ವರ್ಷ ಮೇಲ್ಪಟ್ಟ ಹಾಗೂ ವಿಶೇಷ ಚೇತನ ಮತದಾರರಿಂದ ಮನೆ ಮತದಾನದ ಅನುಕೂಲಗಳ ಬಗ್ಗೆ ಅಭಿಪ್ರಾಯ ಪಡೆದರು.

# ಕೆಪಿಸಿಸಿ ಎಸ್ಸಿ ಘಟಕದ ಅಧ್ಯಕ್ಷ ಧರ್ಮಸೇನಾರಿಂದ ಪ್ರಚಾರ: ಮಾತಿನ ಚಕಮಕಿ

**ಕೋಲಾರ:** ನಗರದ ಜಿಲ್ಲಾ ಕಾಂಗ್ರೆಸ್ ಭವನಕ್ಕೆ ಸೋಮವಾರ ಕೆಪಿಸಿಸಿ ಎಸ್ಸಿ ಘಟಕದ ಅಧ್ಯಕ್ಷ ಆರ್.ಧರ್ಮಸೇನ ಲೋಕಸಭಾ ಚುನಾವಣೆಯ ಪ್ರಚಾರಕ್ಕೆ ಆಗಮಿಸಿದ ವೇಳೆ ಕಾರ್ಯಕರ್ತರು ತಮ್ಮ ಅಳಲನ್ನು ತೋಡಿಕೊಂಡು, ತಾಳ್ಮೆಯ ಕಟ್ಟೆ ಹೊಡೆದು, ಮಾತಿನ ಚಕಮಕಿ ನಡೆಸಿದ ಪ್ರಸಂಗ ನಡೆಯಿತು.

ಕೋಲಾರ ಲೋಕಸಭಾ ಮೀಸಲಾತಿ ಕ್ಷೇತ್ರದಲ್ಲಿ ಏಳು ಬಾರಿ ಗೆದ್ದಿರುವ ಕೆ.ಎಚ್.ಮುನಿಯಪ್ಪ ಅವರನ್ನು ಕ್ಷೇತ್ರಕ್ಕೆ ಬರದಂತೆ ಮಾಡಿರುವುದು ತಮಗೆಲ್ಲರಿಗೂ ಬೇಸರವಾಗಿದೆ. ಅವರವರ ವೈಯಕ್ತಿಕ ವಿಚಾರಗಳಿಗೆ ನಮ್ಮ ರಾಜಕೀಯ ಮಾರ್ಗದರ್ಶಕರಾದ ಕೆ.ಎಚ್.ಮುನಿಯಪ್ಪರ ಗೌರವ ಕುಂದುವ ಕೆಲಸ ನಡೆಯುತ್ತಿದೆ ಎಂದು ಎಸ್ಸಿ ಘಟಕದ ಜಿಲ್ಲಾ ಹಾಗೂ ತಾಲೂಕು ಮುಖಂಡರು ಮತ್ತು ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.

ಕೆಪಿಸಿಸಿ ಎಸ್ಸಿ ಘಟಕದ ಅಧ್ಯಕ್ಷರಾದ ನೀವು ಎಐಸಿಸಿ ಅಥವಾ ಕೆಪಿಸಿಸಿ ಗೆ ಹೇಳಿ ಕೋಲಾರದಲ್ಲಿ ನಡೆಯುತ್ತಿರುವ ಬಣಗಳ ಕಿತ್ತಾಟವನ್ನು ಶಮನ ಮಾಡಿ, ಇಲ್ಲವಾದಲ್ಲಿ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲುವುದು ಕಷ್ಟಕರ. ಇನ್ನು ಸಮಯ ಮಿಂಚಿಲ್ಲ 10 ದಿನಗಳ ಕಾಲವಕಾಶವಿದ್ದು, ಎಲ್ಲರೂ ಒಂದಾಗಿ ಕಾಂಗ್ರೆಸ್ ಅಭ್ಯರ್ಥಿ ಪರ ಪ್ರಚಾರ ಮಾಡುವ ರೀತಿ ನೀವು ಮಾಡಿದರೆ ಕಾಂಗ್ರೆಸ್ ಗೆಲ್ಲುವುದರಲ್ಲಿ ಸಂಶಯವಿಲ್ಲ ಎಂದರು.

ಕಾಂಗ್ರೆಸ್ ಅಭ್ಯರ್ಥಿ ಗೌತಮ್ ಅವರು, ಹಳೆ ಕಾಂಗ್ರೆಸ್ ವ್ಯಕ್ತಿಗಳನ್ನು ಭೇಟಿ ಮಾಡದೆ. ಯಾರೋ ಮಾತಿನಂತೆ ಪ್ರಚಾರ ನಡೆಸುತ್ತಿದ್ದಾರೆ. ನಾವೆಲ್ಲರೂ ಕೆ.ಎಚ್.ಮುನಿಯಪ್ಪ ಅನುಹಾಯಿಗಳೆಂದು ನಮಗೆ ಬೆಲೆ ನೀಡುತ್ತಿಲ್ಲ. ನಮ್ಮನ್ನು ಸೌಜನ್ಯಕೂ ಮಾತಾಡಿಸಿಲ್ಲ. ನಾವು ಕೆ.ಎಚ್ ಮಾತಿನಂತೆ ಪಕ್ಷ ಸಂಘಟನೆ ಮಾಡಿ ಇಲ್ಲಿ ಕಾಂಗ್ರೆಸ್ ಗೆಲ್ಲಲು ನಮ್ಮ ಶ್ರಮವೂ ಇದೆ. ಕೆ.ಎಚ್.ಮುನಿಯಪ್ಪರಿಗೆ ಬೆಲೆ ನೀಡದೆ ಇರುವಾಗ ನಮಗೆ ಎಲ್ಲಿ ನೀಡುತ್ತಾರೆ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಕೆ.ಜಯದೇವ್ ಮಾತನಾಡಿ, 35 ವರ್ಷಗಳಿಂದ ಕೋಲಾರದಲ್ಲಿ ಕಾಂಗ್ರೆಸ್ ಪಕ್ಷವನ್ನು ಸಂಘಟನೆ ಮಾಡಿರುವ ಸಚಿವ ಕೆ.ಎಚ್.ಮುನಿಯಪ್ಪ ಅವರನ್ನು ಗಣನೆಗೆ ತೆಗೆದುಕೊಳ್ಳುತ್ತಿಲ್ಲ. ಕಾಂಗ್ರೆಸ್ ಪಕ್ಷವು ನಮ್ಮ ತಾಯಿ ಇದ್ದಂತೆ ಎಂದು ಕೆ.ಹೆಚ್.ಮುನಿಯಪ್ಪ ಅವರು ಹೇಳುತ್ತಾರೆ. ತಾಯಿಯಾದ ಪಕ್ಷವು ಎಲ್ಲಾ ಮಕ್ಕಳನ್ನು ಸರಿ ಸಮಾನವಾಗಿ ನೋಡಬೇಕು. ಕೋಲಾರದಲ್ಲಿ ಉದ್ಭವ ಕೊಂಡಿರುವ ಬಣಗಳ ಕಿತ್ತಾಟ ಹೈಕಮಾಂಡ್ ಗೆ ಗೊತ್ತಿದ್ದರೂ, ಯಾವುದೇ ಸಂಧಾನ ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಅಭ್ಯರ್ಥಿ ಗೌತಮ್ ಅವರನ್ನು ಗೆಲ್ಲಿಸಿ ಎಂದು ಕೆ.ಎಚ್. ಮುನಿಯಪ್ಪ ನಮಗೆ ಸೂಚನೆ ನೀಡಿದ್ದಾರೆ. ಅವರ ಮಾತಿನಂತೆ ನಾವೆಲ್ಲರೂ ಒಗ್ಗಟ್ಟಾಗಿ ಪ್ರಚಾರ ಕೈಗೊಂಡಿದ್ದೇವೆ. ಕೆಎಚ್ ಮುನಿಯಪ್ಪ ಅವರು ಸಹ ಕೋಲಾರಕ್ಕೆ ಬಂದು ಪ್ರಚಾರ ನಡೆಸಿದರೆ ಆನೆ ಬಲ ಬರುತ್ತದೆ. ಇದರ ಬಗ್ಗೆ ಯಾರೂ ತಲೆಕೆಡಿಸಿಕೊಳ್ಳುತ್ತಿಲ್ಲ. ನೀವಾದರೂ ಕೇಂದ್ರ ಹಾಗೂ ರಾಜ್ಯದ ಹೈ ಕಮಾಂಡ್ ಗೆ ಮಾಹಿತಿ ನೀಡಿ ಇಲ್ಲಿನ ಬಿಕ್ಕಟ್ಟನ್ನು ಸರಿಪಡಿಸಿ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಜಿಲ್ಲಾ ಕಾರ್ಯದಕ್ಷ ಊರುಬಾಗಿಲು ಶ್ರೀನಿವಾಸ್ ಮಾತನಾಡಿ, ವಯಸ್ಸಾದ ನನ್ನನ್ನೇ ಬಿಡದೆ ನಾವು ಕಟ್ಟಿದ ಮನೆ, ಕಾಂಗ್ರೆಸ್ ಭವನದಲ್ಲಿ ನನ್ನನ್ನು ಹೊಡೆದಿದ್ದಾರೆ. ಅಂದೆ ಕೆ.ಎಚ್.ಮುನಿಯಪ್ಪ ಅವರು ಅದು ನನ್ನ ಮೇಲೆ ಹಲ್ಲೇ ಮಾಡಿದಂತೆ, ಯಾವುದೇ ಕಾರಣಕ್ಕೂ ನೀವು ಜಗಳವಾಡದೇ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ವ್ಯಕ್ತಿಯನ್ನು ಗೆಲ್ಲಿಸಿಕೊಳ್ಳುವ ಕೆಲಸವನ್ನು ಮಾಡಿ ಎಂದು ಸೂಚಿಸಿದ್ದಾರೆ. ನಾವು ಜಗಳ ಮಾಡುವ, ಶಕುನಿ ಬುದ್ಧಿ ತೋರುವ ಕಾರ್ಯಕರ್ತರಲ್ಲ. ನಮಗೆ ಆ ರೀತಿಯ ಬುದ್ಧಿಯು ಕೆ.ಎಚ್.ಮುನಿಯಪ್ಪ ಅವರು ಕಲಿಸಿಕೊಟ್ಟಿಲ್ಲ. ಶಾಂತಿಯಿಂದ ನಡೆಯುವ ಗುಣ ಉಳ್ಳವರು ಎಂದು ಹೇಳಿದರು.

ಕ್ಷೇತ್ರದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ತಿಳಿಸಿದ ಅವರು, ಕೆ.ಎಚ್.ಮುನಿಯಪ್ಪ ಕೋಲಾರದಲ್ಲಿ ಕಾಂಗ್ರೆಸ್ ಉಳಿಯಬೇಕು. ಆದ್ದರಿಂದ ನೀವೆಲ್ಲರೂ ಒಗ್ಗಟ್ಟಾಗಿ ಗೌತಮ್ ಅವರನ್ನು ಗೆಲ್ಲಿಸುವ ಕಾರ್ಯವನ್ನು ಮಾಡಿ ಎಂದು ಆದೇಶಿಸಿದ್ದಾರೆ. ಕೆ.ಎಚ್.ಮುನಿಯಪ್ಪ ಇಲ್ಲದೆ ಕೋಲಾರದಲ್ಲಿ ಕಾಂಗ್ರೆಸ್ ಇಲ್ಲ. ಆದರಿಂದ ನೀವು ಇಲ್ಲಿ ನಡೆಯುತ್ತಿರುವ ಮಲತಾಯಿ ಧೋರಣೆಯನ್ನು ಹೈ ಕಾಮಾಂಡ್ ಗೆ ತಿಳಿಸಿ ಸರಿಪಡಿಸಿ ಎಂದರು.

ಕೆಪಿಸಿಸಿ ಎಸ್ಸಿ ಘಟಕದ ಅಧ್ಯಕ್ಷ ಆರ್.ಧರ್ಮಸೇನ ಮಾತನಾಡಿ, ಏ.17ರಂದು ಲೋಕಸಭಾ ಚುನಾವಣೆ ಪ್ರಚಾರಕ್ಕೆ ಕೋಲಾರಕ್ಕೆ ರಾಹುಲ್ ಗಾಂಧಿಯವರು ಆಗಮಿಸುತ್ತಿದ್ದು, ಯಾವುದೇ ಒಳ ಜಗಳ ಇನ್ನಿತರೆ ಸಮಸ್ಯೆಗಳನ್ನು ಬದಿಗೊತ್ತಿ ರಾಹುಲ್ ಗಾಂಧಿಯವರ ಕಾರ್ಯಕ್ರಮಕ್ಕೆ ತಾವೆಲ್ಲರೂ ಆಗಮಿಸಬೇಕು. ಕ್ಷೇತ್ರದಲ್ಲಿ ನಡೆಯುತ್ತಿರುವ ರಾಜಕೀಯ ಚಟುವಟಿಕೆಗಳ ಬಗ್ಗೆ ಹೈಕಮಾಂಡ್ ಮೂಲಕವೇ ಸರಿಪಡಿಸುವ ಕೆಲಸವಾಗಬೇಕು. ನೀವೆಲ್ಲರೂ ಹೇಳಿದ ಮಾಹಿತಿಯನ್ನು ಪ್ರಮಾಣಿಕವಾಗಿ ದೊಡ್ಡ ನಾಯಕರಿಗೆ ತಿಳಿಸುವ ಕರ್ತವ್ಯ ಮಾಡುತ್ತೇನೆ. ಕೋಲಾರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಒಗ್ಗಟ್ಟಾಗಿ ಪ್ರಚಾರ ಮಾಡಿ ಗೆಲ್ಲಿಸುವ ಕೆಲಸವನ್ನು ಮಾಡಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮುನಿವೆಂಕಟಪ್ಪ, ಮುನಿರಾಜು, ವೀಣಾ, ಡಾ.ವೈಶಾಖ, ರತ್ನಮ್ಮ, ಮಂಜುನಾಥ್, ಜಗಪ್ಪ, ವೆಂಕಟರಾಮಯ್ಯ, ಲಾಲ್ ಬಹುದ್ದೂರ್ ಶಾಸ್ತ್ರಿ, ರಂಗನಾಥ್, ಡಾ.ವಿಜಯೇಂದ್ರ, ಜಗನ್, ರಾಮಯ್ಯ, ಖಾದ್ರಿಪುರ ಬಾಬು, ಯಲ್ಲಪ್ಪ, ನಾಗೇಶ್, ಶ್ರೀನಿವಾಸ್, ಕಾರ್ಗಿಲ್ ವೆಂಕಟೇಶ್ ಹಾಗೂ ಎಸ್ಸಿ ಘಟಕದ ಜಿಲ್ಲಾ ಹಾಗೂ ತಾಲೂಕು ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸಿದ್ದರು.



## ಹುಳಿಯಾರಿನಲ್ಲಿ ಮಾತಂಗ ನೌಕರರ ಸಂಘದಿಂದ ಅಂಬೇಡ್ಕರ್ ಜಯಂತಿ

**ಹುಳಿಯಾರು:** ಹುಳಿಯಾರಿನಲ್ಲಿ ಮಾತಂಗ ನೌಕರರ ಸಂಘದ ವತಿಯಿಂದ ಏಪ್ರಿಲ್ 14 ರ ಸಂಜೆ ಬಾಬಾ ಸಾಹೇಬ್ ಅಂಬೇಡ್ಕರ್ ರವರ 133 ನೇ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟನೆ ಮಾಡಿದ ಉಪನ್ಯಾಸಕ ಕನಸುಸೋಮಶೇಖರ್ ಮಾತನಾಡಿ ಅಂಬೇಡ್ಕರ್ ವಿಶ್ವ ಸಮತೆಯ ದ್ರುವತಾರೆ. ಅಂಬೇಡ್ಕರ್ ರವರನ್ನು ಜಾತಿ ಪೆಟ್ಟಿಗೆಯಲ್ಲಿ ಬಂಧಿಸಿ, ಇಂದಿನ ಮಕ್ಕಳಿಗೆ ಸಿಗದಂತೆ ಮಾಡುತ್ತಿರುವುದು ತುಂಬಾ ವಿಪರ್ಯಾಸ. ಅಂಬೇಡ್ಕರ್ ಓದುವುದು ಮಾನವೀಯತೆಯ ಅಂತರಂಗ ಒಕ್ಕಿದಂಗೆ, ಬದುಕಿನ ಮೌಲ್ಯಗಳನ್ನ ಸ್ಪರ್ಶಿಸಿದಂತ ಅನುಭವ ನೀಡುತ್ತದೆ. ಈ ಓದಿನಿಂದ ಯಾವ ಮಕ್ಕಳನ್ನು ವಿಮುಖ ಮಾಡಬೇಡಿ ಎಂದರು.

ಹೋರಾಟದ ಮನೋಭಾವವಿಲ್ಲದೆ ಯಾವೊಬ್ಬ ವ್ಯಕ್ತಿಯು ಏನನ್ನೂ ಗಳಿಸಲು ಸಾಧ್ಯವಿಲ್ಲ. ಹೋರಾಟಕ್ಕೆ ಬೇಕಾದ ಶಿಕ್ಷಣ ಮತ್ತು ಸಂಘಟನೆ ಆಳವಾಗಿ ಬಲಪಡಿಸಬೇಕು, ಆಗ ನಮ್ಮ ಹಕ್ಕುಗಳು ದಕ್ಕುತ್ತವೆ. ಮುಂದಿನ ಪೀಳಿಗೆಗೂ ಉಳಿಸಬಹುದಾಗಿದೆ. ಸಮಾನತೆ ಎಂಬುದು ದೇವರ ದೃಷ್ಟಿಯಲ್ಲಿರದೆ ವ್ಯಕ್ತಿಯ ದೃಷ್ಟಿಯಲ್ಲಿಳಿದಾಗ ಮಾತ್ರ ಸಮಾನತೆ ಅನುಭವಿಸಲು ಸಾಧ್ಯ. ಮೀಸಲಾತಿ ಬರೀ ಎಸ್.ಸಿ ಗಳದ್ದು ಎನ್ನುವ ಮುಖವಾಡ ಕಳಚಿ ಎಲ್ಲಾ ಜಾತಿಗಳು ಮೀಸಲಾತಿಯನ್ನ ಅನುಭವಿಸುತ್ತಿರುವ ನೈಜ ಮುಖ ಅನಾವರಣವಾಗದೆ ಇರುವುದು ಮೀಸಲಾತಿಗೆ ಆವರಿಸಿರುವ ಕಾರ್ಮೋಡವಾಗಿದೆ ಎಂದರು.

ಕಟ್ಟ ಕಡೆಯ ಮನುಷ್ಯನೂ ಎಲ್ಲಾ ವ್ಯವಸ್ಥೆ ಪಡೆಯುವಂತಾಗಬೇಕು, ಇಲ್ಲದಿದ್ದರೆ ಆ ದೇಶ ಅಭಿವೃದ್ಧಿಯ ಪಥ ಸೇರಲು ಸಾಧ್ಯವಿಲ್ಲ ಎಂದು ಅಂಬೇಡ್ಕರ್ ಹೇಳುತ್ತಿದ್ದರು. ಮಹಿಳೆಗೆ ಸಮಾನ ಹಕ್ಕು ನೀಡಿ, ಸಾಮಾಜಿಕ, ರಾಜಕೀಯ, ಆರ್ಥಿಕ ದಿಕ್ಕಿನಲ್ಲಿ ಕೊಂಡೊಯ್ಯಿರಿ ಆಗ ನಿಜವಾದ ದೇಶಾಭಿವೃದ್ಧಿ ಕಾಣಬಹುದು. ಸರ್ವ ಮಕ್ಕಳು ಅಕ್ಷರ ಅನುಭವಿಸಬೇಕು, ಜ್ಞಾನಶೀಲ ಭಾರತಕ್ಕೆ ಪುಟ್ಟ ಮಕ್ಕಳ ಹೆಜ್ಜೆ ಗುರುತುಗಳು ಮುನ್ನುಡಿಯಾಗಬೇಕೆಂಬುದು ಬಾಬಾ ಸಾಹೇಬರ ಆಶಯವಾಗಿತ್ತು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾತಂಗ ನೌಕರರ ಸಂಘದ ಅಧ್ಯಕ್ಷ ಜಯಣ್ಣ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಘದ ಖಜಾಂಚಿ ಮಲ್ಲೇಶಪ್ಪ, ಬೆಸ್ಕಾಂ ಮೂರ್ತಣ್ಣ, ಕಾರ್ಯದರ್ಶಿ ಗಂಗಾಧರ್, ಪಶು ಇಲಾಖೆ ಸಿದ್ದರಾಮಯ್ಯ, ಚಿಕ್ಕಣ್ಣ ಹಾಗಲವಾಡಿ, ಮಂಜುನಾಥ್, ಶಶಿಯವರು, ಜಿ.ಎಸ್.ಪುಷ್ಪ ರವರು ಭಾಗವಹಿಸಿದ್ದರು.



## ಸಿಎಂ ಸಿದ್ದರಾಮಯ್ಯ ಪೋಸ್ಟ್ ವಿರುದ್ಧ ಬಿಜೆಪಿ ಕಿಡಿ

**ಪಣಜಿ/ಬೆಂಗಳೂರು:** ಗೋವಾದ ಸಂಗೋಲ್ಡಾದಲ್ಲಿ ಕನ್ನಡಿಗರಿಗೆ ಸೇರಿದ ಮನೆಗಳನ್ನು ನೆಲಸಮಗೊಳಿಸಲಾಗಿದೆ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಗೆ ಬಿಜೆಪಿ ತೀವ್ರವಾಗಿ ಕಿಡಿಕಾರಿದೆ. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದ ಸಿದ್ದರಾಮಯ್ಯ ಅವರು, 'ಗೋವಾದ ಸಂಗೋಲ್ಡಾದಲ್ಲಿ ಕನ್ನಡಿಗರ ಮನೆಗಳು ಧ್ವಂಸಗೊಂಡಿರುವುದು ತೀವ್ರ ಕಳವಳಕಾರಿಯಾಗಿದೆ. ಪರ್ಯಾಯ ಕ್ರಮಗಳನ್ನು ಒದಗಿಸುವವರೆಗೆ ಮುಂದಿನ ಕಾರ್ಯಾಚರಣೆಯನ್ನು ತಕ್ಷಣವೇ ನಿಲ್ಲಿಸುವಂತೆ ಗೋವಾದ ಮುಖ್ಯಮಂತ್ರಿ ಡಾ. ಪ್ರಮೋದ್ ಸಾವಂತ್ ಅವರಿಗೆ ಮನವಿ ಮಾಡುತ್ತೇನೆ. ಸ್ಥಳಾಂತರಗೊಂಡ ಕುಟುಂಬಗಳಿಗೆ ಸೂಕ್ತ ಪುನರ್ವಸತಿ ಒದಗಿಸುವಂತೆಯೂ ಕೇಳಿಕೊಳ್ಳುತ್ತೇನೆಂದು ಹೇಳಿದ್ದರು.

### ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಮಾಹಿತಿ

# ಸಿಇಟಿ ಪರೀಕ್ಷೆಗೆ ಸಕಲ ಸಿದ್ಧತೆ

**ಚಿಕ್ಕಬಳ್ಳಾಪುರ:** ಜಿಲ್ಲೆಯಾದ್ಯಂತ 16 ಪರೀಕ್ಷಾ ಕೇಂದ್ರಗಳಲ್ಲಿ ಏಪ್ರಿಲ್ 18 ಮತ್ತು 19 ರಂದು ನಡೆಯಲಿರುವ ವೃತ್ತಿಪರ ಕೋರ್ಸ್ ಗಳ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಲು ಸಕಲ ಸಿದ್ದತೆಗಳನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಕಚೇರಿ ಸಭಾಂಗಣದಲ್ಲಿ ನಡೆದ ಸಿ.ಇ.ಟಿ. ಪರೀಕ್ಷಾ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಈಗಾಗಲೇ ಜಿಲ್ಲೆಯಲ್ಲಿ ಯಶಸ್ವಿಯಾಗಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಾರ್ಷಿಕ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲಾಗಿದ್ದು, ಅದೇ ಮಾದರಿಯಲ್ಲಿ ವೃತ್ತಿಪರ ಕೋರ್ಸ್ ಗಳ ಸಾಮಾನ್ಯ ಪರೀಕ್ಷೆಯನ್ನು ಸಮರ್ಪಕವಾಗಿ ನಿರ್ವಹಿಸಲು ಜಿಲ್ಲಾಧಿಕಾರಿಗಳು ಪರೀಕ್ಷಾ ಕರ್ತವ್ಯಗಳಿಗೆ ನಿಯೋಜಿಸಿರುವ ಅಧಿಕಾರಿಗಳಿಗೆ ಮತ್ತು ಪ್ರಾಂಶುಪಾಲರುಗಳಿಗೆ ಸೂಚಿಸಿದರು. ಈ ಬಾರಿ ಸಿಇಟಿ ಪರೀಕ್ಷೆ ಬರೆಯಲು ದ್ವಿತೀಯ ಪಿಯುಸಿ ಪೂರೈಸಿರುವ 7,211 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಆ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಪೂರಕ ವಾತಾವರಣವನ್ನು ಸೃಷ್ಟಿಸುವುದು ನಮ್ಮ ಜವಬ್ದಾರಿಯಾಗಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಪರೀಕ್ಷಾ ಗೌಪ್ಯ ವಸ್ತುಗಳನ್ನು ಜಿಲ್ಲಾ ಖಜಾನೆಯ ಅಭಿರಕ್ಷೆಯಲ್ಲಿಡಲು ತ್ರಿಸದಸ್ಯ ಸಮಿತಿಯನ್ನು ರಚಿಸಲಾಗಿದ್ದು, ಪರೀಕ್ಷಾ ಗೌಪ್ಯ ವಸ್ತುಗಳನ್ನು ನಿಯಮಿತವಾಗಿ ಪಡೆದು ಪರೀಕ್ಷಾ ದಿನದಂದು ನಿಗದಿತ ಸಮಯಕ್ಕೆ ಮಾರ್ಗಾಧಿಕಾರಿಗಳ ಮೂಲಕ ಪರೀಕ್ಷಾ ಕೇಂದ್ರಗಳಿಗೆ ನಿಯಮಿತವಾಗಿ ತಲುಪಿಸುವುದು ಈ ಸಮಿತಿಯ ಜವಬ್ದಾರಿಯಾಗಿರುತ್ತದೆ ಎಂದು ತಿಳಿಸಿದರು. ಪರೀಕ್ಷಾ ಕೇಂದ್ರದ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗುವುದು. ಅದರಂತೆ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಹಾಗೂ ಎಲ್ಲಾ ಮಾರ್ಗಾಧಿಕಾರಿಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಮತ್ತು ಬೆಂಗಾವಲು ರಕ್ಷಣೆಯನ್ನು ಒದಗಿಸುವುದು. ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಪರೀಕ್ಷಾ ದಿನಗಳಂದು ಮುಚ್ಚಿಸಲು ಕ್ರಮವಹಿಸುವಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಮರ್ಪಕವಾಗಿ ಕುಡಿಯುವ ನೀರಿನ ವ್ಯವಸ್ಥೆ, ಆಸನ ವ್ಯವಸ್ಥೆ, ಬೆಳಕಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆಯನ್ನು ಒದಗಿಸುವುದು. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಹಾಜರಾತಿಯನ್ನು ಆನ್ ಲೈನ್ ನಲ್ಲಿ ದಾಖಲಿಸಬೇಕು. ಆಸನ ವ್ಯವಸ್ಥೆಯ ಮಾಹಿತಿಯನ್ನು ಕಾಲೇಜು ಆವರಣದ ಸೂಚನಾ ಫಲಕದಲ್ಲಿ 3-4 ಕಡೆ ಪ್ರಕಟಿಸಬೇಕು. ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಹೊರತು ಪಡಿಸಿ ವಿದ್ಯಾರ್ಥಿಗಳ ಪೋಷಕರು ಹಾಗೂ ಇನ್ನಿತರ ಯಾವುದೇ ವ್ಯಕ್ತಿಗಳು ಪರೀಕ್ಷಾ ಕೇಂದ್ರದ ಆವರಣದೊಳಗೆ ಪ್ರವೇಶಿಸುವುದನ್ನು ನಿಷೇಧಿಸಲಾಗಿರುತ್ತದೆ. ಈ ಎಲ್ಲಾ ಸೂಚನೆಗಳ ಪಾಲನೆಗೆ ಅಗತ್ಯ ಕ್ರಮವಹಿಸಲು ಮುಖ್ಯ ಅಧೀಕ್ಷಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

16 ಪರೀಕ್ಷಾ ಕೇಂದ್ರಗಳಲ್ಲಿಯೂ ಪರೀಕ್ಷಾ ದಿನದಂದು ವಿದ್ಯುತ್ ವ್ಯತ್ಯಯವಾಗದಂತೆ ಬೆಸ್ಕಾಂ ಅಧಿಕಾರಿಗಳು ನಿಗಾವಹಿಸಬೇಕು. ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಠಿಯಿಂದ ಎಲ್ಲಾ ಕೇಂದ್ರಗಳಲ್ಲಿ ಒಬ್ಬರು ಆರೋಗ್ಯಾಧಿಕಾರಿ ಮತ್ತು ಸಿಬ್ಬಂದಿಯನ್ನು ನೇಮಿಸಲು ಆರೋಗ್ಯ ಇಲಾಖೆಗೆ ಸೂಚಿಸಲಾಯಿತು. ಪರೀಕ್ಷಾ ಸಮಯಕ್ಕೆ ಪೂರಕವಾಗಿ ಅನುಕೂಲವಾಗಲು ಸಾರಿಗೆ ವ್ಯವಸ್ಥೆ ಕಲ್ಪಿಸಲು ಕೆ.ಎಸ್. ಆರ್.ಟಿ.ಸಿ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಲಾಯಿತು. ಒಟ್ಟಾರೆ ಪರೀಕ್ಷಾ ಪಾವಿತ್ರತೆಯನ್ನು ಕಾಪಾಡಿ ಸುಸೂತ್ರವಾಗಿ ಮತ್ತು ಸಮರ್ಪಕವಾಗಿ ಸಿಇಟಿ ಪರೀಕ್ಷೆಯನ್ನು ನಡೆಸಲು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪರೀಕ್ಷೆಗೆ ನೋಂದಾಯಿತರಾಗಿರುವ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುವ ವೇಳೆ ಕ್ಯಾಪ್, ಆಭರಣಗಳು ಮತ್ತು ಫುಲ್ ಸ್ಲೀವ್ಸ್ ಷರ್ಟ್, ಮಾಸ್ಕ್ ಧರಿಸಬಾರದು. ಮೊಬೈಲ್, ಸ್ಮಾರ್ಟ್ ವಾಚ್, ಇನ್ನಿತರ ಎಲೆಕ್ಟ್ರಾನಿಕ್ ಉಪಕರಣಗಳ ರಹಿತವಾಗಿ ಪರೀಕ್ಷಾ ಕೇಂದ್ರಗಳಿಗೆ ಅರ್ಧ ಗಂಟೆ ಮುಂಚಿತವಾಗಿ ಹಾಜರಾಗಲು ಹಾಗೂ ಪರೀಕ್ಷೆಯನ್ನು ಎದುರಿಸಿ ಜಿಲ್ಲೆಗೆ ಕೀರ್ತಿ ತರಬೇಕು. ಒಟ್ಟಾರೆ ವಿದ್ಯಾರ್ಥಿಗಳು ನಿರ್ಭಿತಿಯಿಂದ ಪರೀಕ್ಷೆ ಎದುರಿಸುವಂತೆ ಜಿಲ್ಲಾಧಿಕಾರಿಗಳು ಶುಭ ಹಾರೈಸಿದರು

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಐ ಖಾಸಿಂ, ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮರಿಸ್ವಾಮಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬೈಲಾಂಜಿನಪ್ಪ, ಜಿಲ್ಲಾ ಖಜಾನೆ ಉಪನಿರ್ದೇಶಕ ಎಂ.ಮಂಜುನಾಥ, ಮಾರ್ಗಾಧಿಕಾರಿಗಳು, ಪ್ರಾಂಶುಪಾಲರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.



### ಪರೀಕ್ಷಾ ಕೇಂದ್ರಗಳ ಹೆಸರು, ವಿಳಾಸ

ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ, ಪಂಚಗಿರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ, ಸರ್. ಎಂ.ವಿ. ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ, ಎಸ್.ಬಿ.ಜಿ.ಎನ್.ಎಸ್. ಗ್ರಾಮಾಂತರ ಪದವಿ ಪೂರ್ವ ಕಾಲೇಜು, ಅಗಲಗುರ್ಕಿ, ಪೂರ್ಣಪ್ರಜ್ಞಾ ಪದವಿ ಪೂರ್ವ ಕಾಲೇಜು, ಸ್ಟೇಡಿಯಂ ರಸ್ತೆ, ಚಿಕ್ಕಬಳ್ಳಾಪುರ, ಶ್ರೀ ಕೃಷ್ಣ ರುಕ್ಮಿಣಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ, ಶಾಂತಿನಿಕೇತನ್ ಪದವಿ ಪೂರ್ವ ಕಾಲೇಜು, ಭಾರತಿನಗರ ಚಿಕ್ಕಬಳ್ಳಾಪುರ, ಸಂತ ಜೋಸೆಫರ ಬಾಲಕಿಯರ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ, ನ್ಯೂಟನ್ ಇಂಟಿಗ್ರೇಟೆಡ್ ಪದವಿ ಪೂರ್ವ ಕಾಲೇಜು, ಸಾಧುಮಠ ರಸ್ತೆ, ಚಿಕ್ಕಬಳ್ಳಾಪುರ, ಸರ್ಕಾರಿ ಪ್ರೌಢಶಾಲೆ, ಬಿ.ಬಿ.ರಸ್ತೆ, ಚಿಕ್ಕಬಳ್ಳಾಪುರ, ಬಿ.ಜಿ.ಎಸ್ ಪದವಿ ಪೂರ್ವ ಕಾಲೇಜು, ಅಗಲಗುರ್ಕಿ, ಎಸ್.ಬಿ.ಜಿ.ಎನ್.ಎಸ್ ಗ್ರಾಮಾಂತರ ಪ್ರೌಢಶಾಲೆ, ಅಗಲಗುರ್ಕಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಎಂ.ಜಿ.ರಸ್ತೆ, ಚಿಕ್ಕಬಳ್ಳಾಪುರ, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ, ಬಿ.ಜಿ.ಎಸ್ ವರ್ಲ್ಡ್ ಸ್ಕೂಲ್ ಜ್ಞಾನಗಂಗಾ ಕ್ಯಾಂಪಸ್, ಎಸ್.ಜೆ.ಸಿ.ಐ.ಟಿ ಕಾಲೇಜು ಹತ್ತಿರ, ಬೆಸ್ಟ್ ಪದವಿ ಪೂರ್ವ ಕಾಲೇಜು, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ.

## ಮನೆಯಲ್ಲಿಯೇ ಮತದಾನ ಮಾಡಿದ ಹಿರಿಯ ನಾಗರೀಕರು ಹಾಗೂ ವಿಶೇಷಚೇತನರು

**ಕೋಲಾರ:** ಕೋಲಾರ ಜಿಲ್ಲೆಯಲ್ಲಿ 13815 ಜನ 85 ವರ್ಷ ಮೇಲ್ಪಟ್ಟರಿದ್ದು, ಇದರಲ್ಲಿ 1433 ಜನರು ಮನೆಯಲ್ಲೇ ಮತದಾನ ಮಾಡುವ ಅವಕಾಶವನ್ನು ಆಯ್ಕೆ ಮಾಡಿಕೊಂಡಿದ್ದು, 1316 ಜನರು ಮನೆಯಲ್ಲೇ ಮತ ಚಲಾಯಿಸಿರುತ್ತಾರೆ. ಒಟ್ಟಾರೆ ಜಿಲ್ಲೆಯಲ್ಲಿ ಮನೆಯಲ್ಲೇ ಮತ ಚಲಾಯಿಸಲು ಆಯ್ಕೆ ಮಾಡಿಕೊಂಡ 85 ವರ್ಷ ಮೇಲ್ಪಟ್ಟವರಲ್ಲಿ ಶೇ. 91.84 ರಷ್ಟು ಮತದಾನವಾಗಿದೆ. ಜಿಲ್ಲೆಯಲ್ಲಿ ಒಟ್ಟು 20413 ವಿಶೇಷಚೇತನರಿದ್ದು, 759 ಜನರು ಮನೆಯಲ್ಲೇ ಮತದಾನವನ್ನು ಆಯ್ಕೆ ಮಾಡಿಕೊಂಡಿದ್ದು, 704 ಜನರು ಮತದಾನ ಮಾಡಿದ್ದಾರೆ ಅಂದರೆ ಶೇ. 92.75 ರಷ್ಟು ವಿಶೇಷಚೇತನರು ಮತದಾನ ಮಾಡಿದ್ದಾರೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯೂ ಆದ ಅಕ್ರಂ ಪಾಷಾ ಅವರು ತಿಳಿಸಿದ್ದಾರೆ. ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ಅನುಕೂಲವಾಗುವಂತೆ ಏಪ್ರಿಲ್ 13 ಹಾಗೂ 14ರಂದು ನಿಗದಿಪಡಿಸಿ, ಮನೆಯಲ್ಲಿಯೇ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಸಂಬಂಧಿಸಿದವರು ಇದರ ಸದುಪಯೋಗ ಮಾಡಿಕೊಂಡಿರುತ್ತಾರೆಂದು ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಕ್ಷ್ಮೀಜನಾರ್ಧನ ಬ್ರಹ್ಮೋತ್ಸವ

**ಮಂಡ್ಯ:** ಮಂಡ್ಯ ನಗರದಲ್ಲಿರುವ ಶ್ರೀ ಲಕ್ಷ್ಮೀಜನಾರ್ಧನ ಸ್ವಾಮಿಯವರ ಬ್ರಹ್ಮರಥೋತ್ಸವವು ಏಪ್ರಿಲ್ 20 ರಂದು ಮಧ್ಯಾಹ್ನ 1 ಗಂಟೆಗೆ ಶ್ರೀ ಲಕ್ಷ್ಮಿ?ಮೀಜನಾರ್ಧನ ಸ್ವಾಮಿ ದೇವಾಲಯದಲ್ಲಿ ನಡೆಯಲಿದೆ. ಕಾರ್ಯಕ್ರಮಗಳ ವಿವರ: ಏಪ್ರಿಲ್ 16 ರಂದು ಬೆಳಿಗ್ಗೆ ನಿತ್ಯ ಪೂಜೆ-ಉತ್ಸವ, ರಾತ್ರಿ ಶೇಷವಾಹನೋತ್ಸವ, ಏಪ್ರಿಲ್ 17 ರಂದು ಬೆಳಿಗ್ಗೆ ನಿತ್ಯ ಪೂಜೆ-ಉತ್ಸವ, ರಾತ್ರಿ ಮುಡಿ ಉತ್ಸವ, ಏಪ್ರಿಲ್ 18 ರಂದು ಬೆಳಿಗ್ಗೆ ನಿತ್ಯ ಪೂಜೆ-ಉತ್ಸವ, ರಾತ್ರಿ ಪ್ರಹ್ಲಾದ ಪರಿಪಾಲನೋತ್ಸವ ಮತ್ತು ಗರುಡೋತ್ಸವ, ಏಪ್ರಿಲ್ 19 ರಂದು ಬೆಳಿಗ್ಗೆ ನಿತ್ಯ ಪೂಜೆ, ರಾತ್ರಿ ಗಜೇಂದ್ರ ಮೋಕ್ಷ ಮತ್ತು ಆನೆ ವಾಹನ, ಏಪ್ರಿಲ್ 20 ರಂದು ಶ್ರೀಯವರ ದಿವ್ಯ ಬ್ರಹ್ಮ ರಥೋತ್ಸವ – ಪುಷ್ಪಾಂಧೋಳಿಕೋತ್ಸವ, ಏಪ್ರಿಲ್ 21 ರಂದು ಬೆಳಿಗ್ಗೆ ನಿತ್ಯ ಪೂಜೆ-ಉತ್ಸವ, ರಾತ್ರಿ ಸಿಂಹವಾಹನ, ಡೋಲೋತ್ಸವ, ಶಯನೋತ್ಸವ ಕುದುರೆವಾಹನ, ಏಪ್ರಿಲ್ 22 ರಂದು ಬೆಳಿಗ್ಗೆ ನಿತ್ಯ ಪೂಜೆ ಮತ್ತು ತೀರ್ಥಸ್ನಾನ ? ರಾತ್ರಿ ತೆಪ್ಪೋತ್ಸವ, ಧ್ವಜಾವರೋಹಣ, ಪೂರ್ಣಾಹುತಿ, ಏಪ್ರಿಲ್ 23 ರಂದು ಬೆಳಿಗ್ಗೆ ಮಹಾಭಿಷೇಕ – ಶ್ರೀ ಆನಂದಾಳ್ವಾರ್ ತಿರುನಕ್ಷತ್ರ ರಾತ್ರಿ ಹನುಮಂತೋತ್ಸವ ಮಹಾಮಂಗಳಾರತಿ ಕಾರ್ಯಕ್ರಮಗಳು ಜರುಗುವವು.

## ರಾಮನವಮಿಗೆ ವಿಶೇಷ ಪೂಜೆ

**ಹುಳಿಯಾರು:** ಹುಳಿಯಾರಿನ ಶ್ರೀ ಸದ್ಗುರು ಸೇವಾಲಾಲ್ ಸರ್ಕಲ್‌ನಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗೋರ್ ಬಂಜಾರ ಬಂದುಗಳಿಂದ ಏ.17 ರ ಬುಧವಾರ ಬೆಳಿಗ್ಗೆ 10:30 ರಿಂದ ಶ್ರೀ ರಾಮನವಮಿ ಹಬ್ಬದ ಪ್ರಯುಕ್ತ ರಾಮನ ವಿಶೇಷ ಪೂಜೆಯನ್ನು ಏರ್ಪಡಿಸಲಾಗಿದೆ. ಪ್ರಸಾದ ವಿನಿಯೋಗ ಜೊತೆಗೆ ಪಾನಕ, ಮಜ್ಜಿಗೆ ಸೇವೆಯನ್ನು ಆಯೋಜಿಸಲಾಗಿದೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಚಿಕ್ಕನಾಯಕನಹಳ್ಳಿ ತಾಲ್ಲೂಕ್ ಶ್ರೀ ಸೇವಾಲಾಲ್ ಮರಿಯಮ್ಮ ಅಭಿವೃದ್ಧಿ ಟ್ರಸ್ಟ್ ಮತ್ತು ಶ್ರೀ ಸದ್ಗುರು ಸೇವಾಲಾಲ್ ಜಯಂತೋತ್ಸವ ಸಮಿತಿ ಮನವಿ ಮಾಡಿದೆ.

## ದುರ್ಮಾರ್ಗಕ್ಕೆ ಹಲವು ದಾರಿ ಆದರೆ ಸನ್ಮಾರ್ಗಕ್ಕೆ ಒಂದೇ ದಾರಿ

ಕಲಘಟಗಿ: ಮಾನವ ಜೀವನದ ಉನ್ನತಿಗೆ ಧರ್ಮ ದಿಕ್ಸೂಚಿ. ಧರ್ಮದ ಆದರ್ಶ ಮೌಲ್ಯಗಳನ್ನರಿತು ಬಾಳಿದರೆ ಜೀವನ ಸಮೃದ್ಧ. ದುರ್ಮಾರ್ಗಕ್ಕೆ ಹಲವಾರು ದಾರಿ ಆದರೆ ಸನ್ಮಾರ್ಗಕ್ಕೆ ಇರುವುದೊಂದೇ ದಾರಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಸೋಮವಾರ ತಾಲೂಕಿನ ಸಂಗೇದೇವರಕೊಪ್ಪ ಗ್ರಾಮದಲ್ಲಿ ಶ್ರೀ ಸಂಗಮೇಶ್ವರ ಮತ್ತು ನಂದೀಶ್ವರ ನೂತನ ದೇವಾಲಯದ ಉದ್ಘಾಟನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು ಅವಿನಾಶಿಯಾದ ಸತ್ಯ ಶಿವನ ಮೊರೆ ಹೊಕ್ಕರೆ ಚಿಂತೆ ಭೀತಿ ದೂರ. ಸತ್ಯವೇ ಶಾಶ್ವತ ಎಂದು ತಿಳಿದು ಆ ದೇವರ ಮೇಲೆ ಅಚಲ ಭಕ್ತಿ ಶ್ರದ್ಧೆಯನ್ನಿಡಬೇಕು. ಅಧಿಕಾರ ಕೀರ್ತಿ ಧನ ಕನಕ ವಸ್ತು ವಾಹನ ಮತ್ತು ದೇಹ ಸೌಖ್ಯಕ್ಕಾಗಿ ಬಡಿದಾಡಿ ಮಡಿದವರೆಷ್ಟೋ ಜನ. ಅವರೆಲ್ಲರೂ ಕಾಲ ಗರ್ಭದಲ್ಲಿ ಮರೆಯಾಗಿ ಹೋದರು. ಜಗದ ಜನರಿಗೆ ಬೆಳಕು ತೋರುವ ಜೀವನ ಸಾಗಿಸಿದ ಆಚಾರ್ಯರು ಋಷಿ ಮುನಿಗಳು ಮತ್ತು ಸಂತ ಮಹಾತ್ಮರ ಮಾತುಗಳನ್ನು ಯಾರೂ ಮರೆಯುವುದಿಲ್ಲ. ಬದುಕು ಸುಖ ದು:ಖ, ನೋವು ನಲಿವು, ಮಾನ ಅಪಮಾನ, ಜಯ ಅಪಜಯ ಮೊದಲಾದ ದ್ವಂದ್ವಗಳಿಂದ ಕೂಡಿದೆ. ಜೀವನ ನಮಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ ನಾವು ಬೇರೆಯವರಿಗೆ ಏನು ಕೊಟ್ಟಿದ್ದೇವೆ ಎನ್ನುವುದು ಮುಖ್ಯ. ಸ್ವಾಭಿಮಾನದ ಕೊರತೆಯಿಂದಾಗಿ ಮನುಷ್ಯ ಅನೇಕ ನೋವು ಅನುಭವಿಸುತ್ತಿದ್ದಾನೆ. ಪ್ರತಿಯೊಬ್ಬರಲ್ಲಿ ದೇಶಾಭಿಮಾನ ಮತ್ತು ಧರ್ಮಾಭಿಮಾನ ಬೆಳೆದುಕೊಂಡು ಬರಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ತಾತ್ವಿಕ ಸಮಾಜ ಕಟ್ಟಿ ಬೆಳೆಸಲು ಅನೇಕ ನೀತಿ ಸೂತ್ರಗಳನ್ನು ನೀಡಿದ್ದು ಅವುಗಳನ್ನು ಪರಿಪಾಲಿಸಿ ಜೀವನದಲ್ಲಿ ಶ್ರೇಯಸ್ಸನ್ನು ಕಾಣಬೇಕಾಗಿದೆ. ಗ್ರಾಮದ ಎಲ್ಲ ಜನರ ಸಹಕಾರದಿಂದ ಸುಂದರ ದೇವಾಲಯ ನಿರ್ಮಿಸಿದ್ದು ತಮಗೆ ಹರುಷ ತಂದಿದೆ ಎಂದರು. ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಂಭ್ರಮದ ಅಡ್ಡಪಲ್ಲಕ್ಕಿ ಮಹೋತ್ಸವ ಜರುಗಿತು. ಉತ್ಸವದಲ್ಲಿ ಸಹಸ್ರಾರು ಭಕ್ತರು ಪಾಲ್ಗೊಂಡು ಜಗದ್ಗುರುಗಳ ಆಶೀರ್ವಾದ ಪಡೆದರು. ಸಮಾರಂಭದ ನಂತರ ಆಗಮಿಸಿದ ಎಲ್ಲ ಭಕ್ತರಿಗೂ ಅನ್ನ ದಾಸೋಹ ಜರುಗಿತು.

### ಬಿಟ್ಟರೂ ಬಿಡದ 'ರಾಜಕೀಯ' ಮಾಯೆ | ಸಿಎಂ ಸಿದ್ದು ಬಳಿಕ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಭೇಟಿ

# ನಿವೃತ್ತಿ ನಂತರವೂ ಕೇಂದ್ರ ಬಿಂದುವಾದ ವಿ.ಶ್ರೀನಿವಾಸಪ್ರಸಾದ್

**ಚಾಮರಾಜನಗರ:** ರಾಜಕೀಯ ನಿವೃತ್ತಿ ಘೋಸಿರುವ ಹಿರಿಯ ಮುತ್ಸದ್ಧಿ, ಸಂಸದ ವಿ.ಶ್ರೀನಿವಾಸಪ್ರಸಾದ್ ಲೋಕಸಭೆ ಚುನಾವಣಾ ರಾಜಕಾರಣದ ಕೇಂದ್ರ ಬಿಂದುವಾಗಿದ್ದಾರೆ.

ಸಂಸದ ವಿ.ಶ್ರೀನಿವಾಸ್ ಪ್ರಸಾದ್ ರಾಜಕೀಯ ಬಿಟ್ಟರೂ ರಾಜಕೀಯ ಇವರನ್ನು ಬಿಡುತ್ತಿಲ್ಲ. ಇವರು 1974ರ ಮಾ.17ರ ಮೈಸೂರು-ಚಾಮರಾಜನಗರ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಮೊದಲ ಬಾರಿಗೆ ಸ್ಪರ್ಧೆ ಮಾಡಿದರು. 2019ರ ಲೋಕಸಭೆ ಚುನಾವಣೆಯಲ್ಲಿ ಕೊನೆಯ ಸ್ಪರ್ಧೆ ಮಾಡಿದರು. 9 ಲೋಕಸಭೆ, 5 ವಿಧಾನಸಭೆ ಸೇರಿ ಒಟ್ಟು 14 ಚುನಾವಣೆಗಳಲ್ಲಿ ಸ್ಪರ್ಧೆ ಮಾಡಿದ್ದಾರೆ.

6 ಲೋಕಸಭೆ ಚುನಾವಣೆಗಳಲ್ಲಿ ಗೆಲುವು ಕಂಡಿದ್ದಾರೆ. 2 ಬಾರಿ ವಿಧಾನಸಭಾ ಚುನಾವಣೆಗಳಲ್ಲಿ ಜಯಗಳಿಸಿದ್ದಾರೆ. ಈ ಮಧ್ಯೆ ಎದುರಾದ ಸೋಲುಗಳನ್ನೂ ಸ್ವೀಕಾರ ಮಾಡಿದ್ದಾರೆ. ತಾನು ಸ್ಪರ್ಧೆ ಮಾಡದೆ ಇದ್ದಾಗ ಬೇರೆಯವರನ್ನು ಕಣಕ್ಕಿಳಿಸಿ ಗೆಲ್ಲಿಸಲು ಶ್ರಮಿಸಿದ್ದಾರೆ. ಹೀಗೆ ಸುದೀರ್ಘ 50 ವರ್ಷಗಳ ರಾಜಕೀಯ ಜೀವನದಲ್ಲಿ ಹೋರಾಟ ನಡೆಸಿ ಮಾ.17ರಂದು ನಿವೃತ್ತಿ ಘೋಷಣೆ ಮಾಡಿದರು.

'ಯಾವುದೇ ರಾಜಕೀಯ ಪಕ್ಷಗಳೊಂದಿಗೆ ಗುರುತಿಸಿಕೊಳ್ಳಲ್ಲ. ರಾಜಕೀಯ ಮಾಡಲ್ಲ, ಸಭೆ, ಸಮಾರಂಭಗಳಲ್ಲಿ ಭಾಗವಹಿಸಲ್ಲವೆಂದು ಭಾವುಕತೆಯಿಂದ ನುಡಿದ್ದಾರೆ. ಹೀಗೆ ಅವರು ರಾಜಕೀಯದಿಂದ ದೂರು ಸರಿದರೂ ರಾಜಕೀಯ ಮಾತ್ರ ಅವರನ್ನು ಮತ್ತೆ ಹುಡುಕಿಕೊಂಡು ಬರುತ್ತಿದೆ.



ಸಂಸದ ವಿ.ಶ್ರೀನಿವಾಸಪ್ರಸಾದ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶನಿವಾರ ಭೇಟಿ ಮಾಡಿದ ಬೆನ್ನಲ್ಲೇ ಭಾನುವಾರ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕೂಡ ಭೇಟಿಯಾಗಿದ್ದಾರೆ.

ಈ ಇಬ್ಬರು ನಾಯಕರು ಬೇರೆ ವಿಷಯ ಇಟ್ಟುಕೊಂಡು ಭೇಟಿ ಮಾಡಿದ್ದರೂ ಆಂತರಿಕ ಕಾರಣ ಮಾತ್ರ 'ಲೋಕಸಭೆ ಚುನಾವಣೆ'. ವಿ.ಶ್ರೀನಿವಾಸಪ್ರಸಾದ್ ರಾಜಕೀಯ ಜೀವನದಲ್ಲಿ ಕಂಡ ಚುನಾವಣೆಗಳಂತೆಯೇ ನಿವೃತ್ತಿ ಜೀವನದಲ್ಲಿ ಕಾಣುತ್ತಿರುವ ಚುನಾವಣೆಯೂ ಚಲಾವಣೆಯಲ್ಲಿ ಇರಿಸಿದೆ.

### ಬೆಂಬಲಕ್ಕಾಗಿ ಗೊಂದಲ, ತಲ್ಲಣ

ಮೈಸೂರು ಮತ್ತು ಚಾಮರಾಜನಗರ ಭಾಗದ ಹಿರಿಯ ದಲಿತ ನಾಯಕ ವಿ.ಶ್ರೀನಿವಾಸಪ್ರಸಾದ್ ಬೆಂಬಲ ಮುಖ್ಯವಾಗಿದೆ. ಇದಕ್ಕಾಗಿ ಚುನಾವಣೆಯಲ್ಲಿ ಕಾಂಗ್ರೆಸ್ ಪರ ಇವರಿಗೆ ಒಲವಿದೆ ಮತ್ತು ಬೆಂಬಲ ಸಿಕ್ಕಿದೆ ಎಂಬ ಸಂದೇಶ ರವಾನೆ ಮಾಡುವ ಪ್ರಯತ್ನ ನಡೆದಿದೆ. ಇದಕ್ಕೆ ಪೂರಕವೆಂಬಂತೆ ಅವರ ಕುಟುಂಬಸ್ಥರು, ಬೆಂಬಲಿಗರು 'ಕೈ' ಸೇರ್ಪಡೆಯಾಗಿದ್ದಾರೆ. ಕ್ಷೇತ್ರದ ಜನತೆಗೆ ವಿ.ಶ್ರೀನಿವಾಸಪ್ರಸಾದ್ ಅವರ ನಿಲುವಿನ ಕುರಿತು ಗೊಂದಲ ಸೃಷ್ಟಿಯಾಗಿದೆ. ಇದರಿಂದ ತಲ್ಲಣಗೊಂಡಿರುವ ಬಿಜೆಪಿ ತಮ್ಮ ಪಕ್ಷದ ಸಂಸದರ ಬೆಂಬಲವನ್ನು ಪದೇ ಪದೆ ಖಚಿತ ಪಡಿಸಿಕೊಳ್ಳುತ್ತಲೇ ಇದೆ. ಇದರ ಮುಂದುವರಿದ ಭಾಗವಾಗಿವೇ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭೇಟಿಯಾಗಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರಮೋದಿ ಅವರ ಕಾರ್ಯಕ್ರಮಕ್ಕೆ ಆಹ್ವಾನ ನೀಡಿದ್ದಾರೆ. ಈ ವೇಳೆ ಪಿಎಂ ಮೋದಿ ಮತ್ತು ಪಕ್ಷದ ಮೇಲೆ ತಮಗಿರುವ ಅಭಿಮಾನವನ್ನು ವಿ.ಶ್ರೀನಿವಾಸಪ್ರಸಾದ್ ವ್ಯಕ್ತಪಡಿಸಿದ್ದಾರೆ. ತಮ್ಮ ರಾಜಕೀಯ ನಿವೃತ್ತಿ ?ಷಣೆ ವೇಳೆ ಅನಾರೋಗ್ಯದ ಹಿನ್ನೆಲೆಯಲ್ಲಿ ಸಭೆ, ಸಮಾರಂಭ, ಪ್ರಚಾರಗಳಲ್ಲಿ ಭಾಗವಹಿಸುವುದಿಲ್ಲ ಎಂದು ಹೇಳಿದಂತೆಯೇ ನಡೆದುಕೊಂಡಿದ್ದಾರೆ.

### ಅಳಿಯನಿಗೆ ಸ್ಥಾನಮಾನ?: ಸಂಸದ

ವಿ.ಶ್ರೀನಿವಾಸಪ್ರಸಾದ್ ಅವರ ಅಳಿಯ ಡಾ.ಎನ್.ಎಸ್.ಮೋಹನ್‌ಗೆ ಮುಂದಿನ ದಿನಗಳಲ್ಲಿ ಪಕ್ಷದಲ್ಲಿ ಸೂಕ್ತ ಸ್ಥಾನಮಾನ ಸಿಗುವ ನಿರೀಕ್ಷೆ ಇದೆ. ಲೋಕಸಭೆ ಚುನಾವಣೆ ಟಿಕೆಟ್ ಆಕಾಂಕ್ಷಿಯಾಗಿದ್ದ ಇವರಿಗೆ ಅವಕಾಶ ಕೈತಪ್ಪಿತು. ಬಳಿಕ ಅಭ್ಯರ್ಥಿ ಎಸ್.ಬಾಲರಾಜ್‌ಗೆ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದರು. ಆದರೆ ಇವರನ್ನು ಪಕ್ಷದ ಮುಖಂಡರು ಗಣನೆಗೆ ತೆಗೆದುಕೊಳ್ಳದೆ ನಿರ್ಲಕ್ಷ್ಯ ಮಾಡುತ್ತಿದ್ದಾರೆಂಬ ಆರೋಪ ಕೇಳಿಬಂತು. ಈ ಹಿನ್ನೆಲೆಯಲ್ಲಿ ಏ.17ರಂದು ನಂಜನಗೂಡಿನಲ್ಲಿ ಇವರ ಹಿತೈಷಿಗಳ ಸಭೆಯನ್ನೂ ಕರೆಯಲಾಗಿತ್ತು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸಂಸದ ವಿ.ಶ್ರೀನಿವಾಸಪ್ರಸಾದ್ ಅವರನ್ನು ಭಾನುವಾರ ಭೇಟಿ ಮಾಡಿದ ಸಂದರ್ಭದಲ್ಲಿ ಡಾ.ಎನ್.ಎಸ್.ಮೋಹನ್‌ಗೆ ಅಭಯ ಸಿಕ್ಕಿದೆ. ಈ ವೇಳೆ ಹಾಜರಿದ್ದ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ ಅವರಿಗೆ ಅಳಿಯ, ನಂಜನಗೂಡು ಮಾಜಿ ಶಾಸಕ ಹರ್ಷವರ್ಧನ್ ಅವರನ್ನು ನೋಡಿಕೊಳ್ಳಿ ಎಂದು ವಿ.ಶ್ರೀನಿವಾಸಪ್ರಸಾದ್ ಭಾವುಕತೆಯಿಂದ ಹೇಳಿದ್ದಾರೆ. ಹರ್ಷವರ್ಧನ್ ಅವರೊಂದಿಗೆ ನಾವಿದ್ದೇವೆ ಎಂದಿರುವ ಪ್ರೀತಂಗೌಡ ಅಲ್ಲೇ ಇದ್ದ ಡಾ.ಮೋಹನ್ ಅವರೊಂದಿಗೂ ಮಾತುಕತೆ ನಡೆಸುವುದಾಗಿ ಹೇಳಿದ್ದಾರೆ.



# ಸಂಜೆ ಟಿಪ್ಸ್




## ಪ್ಯಾನಾಸೋನಿಕ್ ಕರ್ನಾಟಕದಲ್ಲಿ ಹೊಸ ಎಸಿ ಶ್ರೇಣಿ ಅನಾವರಣ

ಪ್ಯಾನಾಸೋನಿಕ್ ಲೈಫ್ ಸೊಲ್ಯೂಷನ್ಸ್ ಇಂಡಿಯಾ - ಪ್ರಮುಖ ವೈವಿಧ್ಯಮಯತಂತ್ರಜ್ಞಾನ ಕಂಪನಿ, ತನ್ನ 2024 ನೇ ಸಾಲಿನ ಹೊಸ ಏರ್ ಕಂಡಿಷನರ್ಗಳನ್ನು ಕರ್ನಾಟಕ ಮಾರುಕಟ್ಟೆಯಲ್ಲಿ ಪ್ರಕಟಿಸಿದೆ. ವ್ಯಾಪಕ ಶ್ರೇಣಿಯ 1.0, 1.5 ಮತ್ತು 2.0-ಟನ್ ಮಾದರಿಗಳಿಂದ 60 ಮಾಡೆಲ್ಗಳನ್ನು ಒಳಗೊಂಡಿರುವ ಇತ್ತೀಚಿನ ಶ್ರೇಣಿಯ ಏರ್ ಕಂಡಿಷನರ್ಗಳು ಈಗ ಎಲ್ಲಾ ಪ್ರಮುಖ ಚಿಲ್ಲರೆ ಮಾರಾಟ ಮಳಿಗೆಗಳು, ಇ-ಕಾಮರ್ಸ್ ಪ್ಲಾಟ್ಫಾರ್ಮ್ಗಳು ಮತ್ತು ಪ್ಯಾನಾಸೋನಿಕ್ ಬ್ರ್ಯಾಂಡ್ ಸ್ಟೋರ್ನಲ್ಲಿ ಲಭ್ಯವಿದೆ. PMIN, PLSINDಏರ್ ಕಂಡೀಷನರ್ ಗ್ರೂಪ್ನ ಬಿಸಿನೆಸ್ ಹೆಡ್ ಅಭಿಷೇಕ್ ವರ್ಮಾ, ''ನಮ್ಮ ಇತ್ತೀಚೆಗೆ ನಿಯೋಜಿಸಲಾದ ಅಧ್ಯಯನವು ಕರ್ನಾಟಕದ ಗ್ರಾಹಕರಲ್ಲಿ ಪ್ರಮುಖ ಕಾಳಜಿಯನ್ನು ಬಹಿರಂಗಪಡಿಸಿದೆ, ವಿಶೇಷವಾಗಿ ರಾತ್ರಿಯ ಸಮಯದಲ್ಲಿ ಆಗಾಗ್ಗೆ ಎಸಿ ತಾಪಮಾನವನ್ನು ಸರಿಹೊಂದಿಸುವ ಜಗಳ, ಕೂಲಿಂಗ್ ಕಾರ್ಯಕ್ಷಮತೆ, ಹೊರಾಂಗಣ ಘಟಕ ತುಕ್ಕು ಹಿಡಿಯುವುದು ಮತ್ತು ನಿರ್ವಹಣೆ ಹೆಚ್ಚಿನ ಇನ್ವರ್ಟರ್ ಎಸಿ ಮಾರಾಟವನ್ನು ಬಂಡವಾಳವಾಗಿಟ್ಟುಕೊಂಡು, ನಾವು ದಕ್ಷಿಣ ಭಾರತದಿಂದ ಇನ್ವರ್ಟರ್ ಎಸಿಗಳಿಗೆ ಬೇಡಿಕೆಯ ಏರಿಕೆಯನ್ನು ನಿರೀಕ್ಷಿಸುತ್ತಿದ್ದೇವೆ. ಭಾರತದಲ್ಲಿ ಸರಿಸುಮಾರು 7% ರಷ್ಟು ಂಆ ನುಗ್ಗುವಿಕೆಯೊಂದಿಗೆ, ಉದ್ಯಮವು ಅಪಾರ ಬೆಳವಣಿಗೆಯ ಸಾಮರ್ಥ್ಯವನ್ನು ಹೊಂದಿದೆ. ಆದ್ದರಿಂದ, ಕಳೆದ ಎಸಿ ಸೀಸನ್ಗೆ ಹೋಲಿಸಿದರೆ ಈ ಅವಕಾಶವನ್ನು ಬಳಸಿಕೊಳ್ಳಲು ಮತ್ತು 40% ರಷ್ಟು ಬೆಳೆಯಲು ನಾವು ಆಶಿಸುತ್ತಿದ್ದೇವೆ. ಶ್ರೀ ವರ್ಮಾ ಮತ್ತಷ್ಟು ಸೇರಿಸಿದರು. ಹವಾನಿಯಂತ್ರಣಗಳನ್ನು ಅಭಿವೃದ್ಧಿಪಡಿಸುವಲ್ಲಿ 65 ವರ್ಷಗಳ ಪರಿಣತಿಯೊಂದಿಗೆ, Panasonic ನ ಹೊಸ ಶ್ರೇಣಿಯ ಂಆ ಗಳು ಟೆಕ್-ಸಕ್ರಿಯಗೊಳಿಸಲ್ಪಟ್ಟಿವೆ ಮತ್ತು ಕೂಲಿಂಗ್, ಗುಣಮಟ್ಟ ಮತ್ತು ಸ್ಮಾರ್ಟ್ ಜೀವನವನ್ನು ಮರು ವ್ಯಾಖ್ಯಾನಿಸಲು ಸಂಪರ್ಕಿತ ಅನುಭವವನ್ನು ನೀಡಲು ವಿನ್ಯಾಸಗೊಳಿಸಲಾಗಿದೆ.

## ಪಾಲಕ್ ಕಾಬೂಲ್ ಮಸಾಲ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಪಾಲಕ್ ಸೊಪ್ಪು- 2ಕಟ್ಟು, ಕಾಬೂಲ್- 2ಕಪ್, ಈರುಳ್ಳಿ- 2, ಟೊಮ್ಯಾಟೋ- 2, ಉಪ್ಪು- ರುಚಿಗೆ ತಕ್ಕಂತೆ, ಕಾರದಪುಡಿ- 1ಚಮಚ, ಒಣಮೆಣಸು-2, ಅರಶಿನಪುಡಿ- ಸ್ವಲ್ಪ, ಗರಂಮಸಾಲ- ಅರ್ಧ ಚಮಚ, ಶುಂಠಿ-ಬೆಳ್ಳುಳ್ಳಿ ಪೇಸ್ಟ್- 1ಚಮಚ, ಎಣ್ಣೆ- ಸ್ವಲ್ಪ.

### ಮಾಡುವ ವಿಧಾನ

ಕಾಬೂಲನ್ನು ಸುಮಾರು ಐದಾರು ಗಂಟೆಗಳ ಕಾಲ ನೀರಿನಲ್ಲಿ ನೆನೆಹಾಕಿ. ಆ ನಂತರ ಅದನ್ನು ಚೆನ್ನಾಗಿ ಬೇಯಿಸಿಟ್ಟುಕೊಳ್ಳಿ. ಇನ್ನೊಂದೆಡೆ ಪಾಲಕ್ ಸೊಪ್ಪನ್ನು ಹಚ್ಚಿಟ್ಟುಕೊಂಡು ಅದನ್ನು ಕುಕ್ಕರ್ ನಲ್ಲಿ ಸ್ವಲ್ಪ ನೀರು ಹಾಕಿ ಒಂದು ವಿಶಲ್ ನಷ್ಟು ಕೂಗಿಸಿ ಇಳಿಸಿಟ್ಟು ಬಳಿಕ ಅದನ್ನು ಮಿಕ್ಸಿಯಲ್ಲಿ ಪೇಸ್ಟ್ ಮಾಡಿಕೊಳ್ಳಬೇಕು. ಇನ್ನೊಂದೆಡೆ ಈರುಳ್ಳಿ ಹಾಗೂ ಟೊಮ್ಯಾಟೋವನ್ನು ಹಚ್ಚಿಟ್ಟುಕೊಳ್ಳಬೇಕು. ಆ ನಂತರ ಸ್ಟೌವ್ ಮೇಲೆ ಪಾತ್ರೆಯಿಟ್ಟು ಅದಕ್ಕೆ ಎಣ್ಣೆ ಹಾಕಿ. ಅದು ಕಾದ ಬಳಿಕ ಹಚ್ಚಿಟ್ಟ ಈರುಳ್ಳಿ ಹಾಕಿ ಚೆನ್ನಾಗಿ ಹುರಿಯಬೇಕು. ಅದು ಬೆಂದು ಕಂದು ಬಣ್ಣಕ್ಕೆ ಬರುತ್ತಿದ್ದಂತೆಯೇ ಟೊಮ್ಯಾಟೋ ಹಾಕಿ ಎರಡನ್ನು ಮಿಶ್ರ ಮಾಡಿ ಆ ನಂತರ ಅದಕ್ಕೆ ಪಾಲಕ್ ಪೇಸ್ಟ್, ಶುಂಠಿ, ಬೆಳ್ಳುಳ್ಳಿ ಪೇಸ್ಟ್ ಸೇರಿಸಿ ಚೆನ್ನಾಗಿ ಹುರಿಯಬೇಕು. ಆ ನಂತರ ಕಾರದ ಪುಡಿ, ಗರಂಮಸಾಲ, ಉಪ್ಪು, ಅರಿಶಿನಪುಡಿ, ಒಣಮೆಣಸು ಹಾಕಿ ಎಲ್ಲವನ್ನು ಸೇರಿಸಿ ಅಗತ್ಯವಿದ್ದರೆ ಸ್ವಲ್ಪ ನೀರು ಸೇರಿಸಿ ಕುದಿಸಿ ಆ ನಂತರ ಅದಕ್ಕೆ ಮೊದಲೇ ಬೇಯಿಸಿಟ್ಟ ಕಾಬೂಲನ್ನು ಸೇರಿಸಿ ಚೆನ್ನಾಗಿ ಮಿಶ್ರ ಮಾಡಿದರೆ ಪಾಲಕ್ ಕಾಬೂಲ್ ಮಸಾಲ ರೆಡಿ.

## ಟಿರಾ ಜೊತೆ ನಟಿ ದೀಪಿಕಾ ಪಡುಕೋಣೆ 82ಲಿಇ ಬ್ರ್ಯಾಂಡ್ ಪಾಲುದಾರಿಕೆ



ಜಾಗತಿಕ ಐಕಾನ್ ಆಗಿರುವ ಭಾರತದ ನಟಿ ದೀಪಿಕಾ ಪಡುಕೋಣೆ ಅವರ ಸೆಲ್ಫ್-ಕೇರ್ ಬ್ರ್ಯಾಂಡ್ '82ಲಿಇ' (82ಲಿಇ), ರಿಲಯನ್ಸ್ ರೀಟೇಲ್ನ ಸೌಂದರ್ಯವರ್ಧಕ ಉತ್ಪನ್ನಗಳ ವೇದಿಕೆ ಆಗಿರುವ 'ಟಿರಾ' ಜೊತೆ ಪಾಲುದಾರಿಕೆಯನ್ನು ಘೋಷಿಸಿದೆ. ಈ ಪಾಲಯದಾರಿಕೆಯಿಂದಾಗಿ '82ಲಿಇ',ಬ್ರ್ಯಾಂಡ್ನ ಉತ್ಪನ್ನಗಳು 'ಟಿರಾ'ದ ಆನ್ಲೈನ್ ಮತ್ತು ಆಫ್ಲೈನ್ ಫ್ಲಾಟ್ಫಾರಂಗಳಲ್ಲಿ ಸಿಗಲಿವೆ.

82ಲಿಇ' ಬ್ರ್ಯಾಂಡ್ ಚರ್ಮದ ಆರೈಕೆ ಮತ್ತು ದೇಹದ ಆರೈಕೆ ಉತ್ಪನ್ನಗಳೊಂದಿಗೆ ಪುರುಷರಿಗೆ ವಿಶೇಷ ಶ್ರೇಣಿಯನ್ನು ತಂದಿದೆ. ಅಶ್ವಗಂಧ ಬೌನ್ಸ್, ಲೋಟಸ್ ಸ್ಪ್ಲಾಶ್ ಮತ್ತು ಅರಿಶಿನ ಶೀಲ್ಡ್ನಂತಹ ಹೆಚ್ಚು ಮಾರಾಟವಾಗುವ ಉತ್ಪನ್ನಗಳು 'ಟಿರಾ'ದಲ್ಲಿ ಸಿಗುತ್ತವೆ. ಆರಂಭದಲ್ಲಿ, '82ಲಿಇ'ನ ಉತ್ಪನ್ನಗಳು ಮುಂಬೈ, ದೆಹಲಿ, ಬೆಂಗಳೂರು ಮತ್ತು ಪುಣೆಯ 'ಟಿರಾ'ದ ಆಫ್ಲೈನ್ ಮಳಿಗೆಗಳಲ್ಲಿ ಲಭ್ಯವಿರುತ್ತವೆ. ನಂತರದಲ್ಲಿ ಇತರ ನಗರಗಳಲ್ಲಿಯೂ ಲಭ್ಯವಾಗಲಿವೆ. ಕಾರ್ಯನಿರ್ವಾಹಕ ನಿರ್ದೇಶಕಿ ಇಶಾ ಎಂ. ಅಂಬಾನಿ ಮಾತನಾಡಿ, 'ಸ್ವ ಆರೈಕೆಯ ಪ್ರಸಿದ್ಧ ಬ್ರಾಂಡ್ '82ಲಿಇ' ನೊಂದಿಗೆ ಪಾಲುದಾರರಾಗಲು ನಾವು ಉತ್ಸುಕರಾಗಿದ್ದೇವೆ. ಈ ಸಹಭಾಗಿತ್ವವು ಟಿರಾ'ದ ವಹಿವಾಟನ್ನು ಹೆಚ್ಚಿಸುತ್ತದೆ ಮತ್ತು ನಮ್ಮ ಗ್ರಾಹಕರಿಗೆ ಚರ್ಮದ ಆರೈಕೆಯ ಪ್ರೀಮಿಯಂ ಉತ್ಪನ್ನಗಳನ್ನು ತಲುಪಿಸಲು ಸಹಾಯ ಮಾಡುತ್ತದೆ ಎಂದರು. ಚಿತ್ರನಟಿ ಮತ್ತು '82ಲಿಇ' ಸಹ-ಸಂಸ್ಥಾಪಕಿ ದೀಪಿಕಾ ಪಡುಕೋಣೆ ಮಾತನಾಡಿ, '82ಲಿಇ' ಉತ್ಪನ್ನಗಳು ಈಗ ಆನ್ಲೈನ್ನಲ್ಲಿ ಮತ್ತು ಟೀರಾ ಮಳಿಗೆಗಳಲ್ಲಿ ಲಭ್ಯವಿದೆ ಎಂದು ಘೋಷಿಸಲು ನಾವು ಸಂತೋಷಪಡುತ್ತೇವೆ. ಚರ್ಮದ ಆರೈಕೆಯನ್ನು ಸರಳೀಕರಿಸುವುದು ಮತ್ತು ಸ್ವ ಆರೈಕೆಯನ್ನು ನಮ್ಮ ದೈನಂದಿನ ಜೀವನದ ಒಂದು ಭಾಗವನ್ನಾಗಿ ಮಾಡುವುದು ನಮ್ಮ ಗುರಿಯಾಗಿದೆ. ಟಿರಾ ಆನ್ಲೈನ್ ಮತ್ತು ಆಫ್ಲೈನ್ ಪ್ಲಾಟ್ ಫಾರ್ಮ್ಗಳಲ್ಲಿ ನಾವು '82ಲಿಇ' ಸ್ಕಿನ್ ಕೇರ್, '82ಲಿಇ' ಬಾಡಿ ಕೇರ್ ಮತ್ತು '82ಲಿಇ' ಮ್ಯಾನ್ನಂತಹ ಅತ್ಯುತ್ತಮ ಮಾರಾಟದ ಉತ್ಪನ್ನಗಳನ್ನು ತರುತ್ತಿದ್ದೇವೆ' ಎಂದು ಹೇಳಿದರು.




## ಕಾಲರಾ, ಸಾಂಕ್ರಾಮಿಕ ರೋಗಗಳ ತಡೆಗಟ್ಟಲು ಕ್ರಮ

### ಹೆಲ್ತ್ ಟಿಪ್ಸ್

ಬೇಸಿಗೆ ಕಾಲ ಪ್ರಾರಂಭದ ಹಿನ್ನಲೆಯಲ್ಲಿ ಕಾಲರಾ ರೋಗವು ಪತ್ತೆಯಾಗಿದ್ದು, ರೋಗವು ವ್ಯಾಪಕವಾಗಿ ಹರಡದಂತೆ ಮುನ್ನೆಚ್ಚರಿಕೆಕ್ರಮವಹಿಸಲು ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಹೋಟೇಲ್ ಅಥವಾ ಬೇಕರಿ ಮಾಲೀಕರು, ಬೀದಿಬದಿ ವ್ಯಾಪಾರಸ್ಥರು, ತಂಪುಪಾನೀಯ ಅಥವಾ ಐಸ್ಕ್ರೀಮ್, ತಿಂಡಿತಿಸಿಸು ಮಾರಾಟ ಮಾಡುವ ಎಲ್ಲಾ ವ್ಯಾಪಾರಸ್ಥರಿಗೆ ಸಾಂಕ್ರಾಮಿಕ ರೋಗಗಳು ಹರಡದಂತೆ ಸರ್ಕಾರದ ಮಾರ್ಗಸೂಚಿಗಳನ್ನು ಅನುಸರಿಸಿ ರೋಗವು ಹರಡದಂತೆ ತಡೆಗಟ್ಟಿ ಸಾರ್ವಜನಿಕ ಆರೋಗ್ಯಕ್ಕೆ ಹಾನಿಯಾಗದಂತೆ ಕಾಲರಾ ಅಥವಾ ಕರಳುಬೇನೆ ಹಾಗೂ ಇತ್ಯಾದಿ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಹಿಸಲು ಸೂಚಿಸಿದೆ.

ಸಾರ್ವಜನಿಕ ನೀರಿನ ಕೊಳಾಯಿ ಮತ್ತುಕುಡಿಯುವ ನೀರನ್ನು ಸಂಗ್ರಹಿಸುವ ಸ್ಥಳವನ್ನು ಸ್ವಚ್ಛವಾಗಿಡುವುದು.

ಕುದಿಸಿ ಆರಿಸಿದ ನೀರನ್ನೇಕುಡಿಯುವುದು. ಶುದ್ಧ ನೀರಿನಘಟಕದಲ್ಲಿನ ತ ನೀರನ್ನುಉಪಯೋಗಿಸುವುದು. ಹೋಟೆಲ್ ಗಳಲ್ಲಿ ಕಡ್ಡಾಯವಾಗಿಕುಡಿಯಲು ಬಿಸಿನೀರನ್ನು ಗ್ರಾಹಕರಿಗೆ ನೀಡುವುದು. ರಸ್ತೆ ಬದಿಯಲ್ಲಿ ಮಾರಾಟ ಮಾಡುವತಂಪು ಪಾನೀಯ ಮತ್ತು ಸೋಡಾಗಳನ್ನು ಸಾರ್ವಜನಿಕರು ಸಾಧ್ಯವಾದಷ್ಟುಜಾಗ್ರತೆಯಿಂದಉಪಯೋಗಿಸುವುದು. ಊಟ ಮಾಡುವ ಮುನ್ನ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಸ್ವಚ್ಛಗೊಳಿಸಬೇಕು. ಹೋಟೆಲ್, ರೆಸ್ಟೋರೆಂಟ್ ಅಥವಾ ಬೇಕರಿಗಳಲ್ಲಿ ಬಿಸಿಯಾದ ಆಹಾರ ಪದಾರ್ಥಗಳನ್ನೆ ಗ್ರಾಹಕರಿಗೆ ನೀಡುವುದು.ತಿಂಡಿ ತಿನಿಸು ಮಾರಾಟ ಮಾಡುವ ಎಲ್ಲಾ ವ್ಯಾಪಾರಸ್ಥರು ಮತ್ತು ಹೋಟೆಲ್ನಲ್ಲಿ ಕೆಲಸ ನಿರ್ವಹಿಸುವ ಎಲ್ಲಾ ಕಾರ್ಮಿಕರು ಕಡ್ಡಾಯವಾಗಿ ಸುರಕ್ಷಾ ಧರಿಸುಗಳನ್ನು ಧರಿಸತಕ್ಕದ್ದು( ಹ್ಯಾಂಡ್ಗ್ಲೌಸ್, ಹೆಡ್ಕ್ಯಾಪ್, ಮಾಸ್ಕ್, ಏಪ್ರನ್). ರಸ್ತೆ ಬದಿಯಲ್ಲಿತೆರೆದರೀತಿಯಲ್ಲಿ ಮಾರಾಟ ಮಾಡುವಆಹಾರ ಪದಾರ್ಥ, ತಿಂಡಿ ತಿನಿಸುಗಳು, ಕತ್ತರಿಸಿದ ಹಣ್ಣು ಹಂಪಲುಗಳನ್ನು ತಿನ್ನಬಾರದು.ಹೊರಗಡೆ ಬಂದಾಗಬಾಟಲ್ಗಳಲ್ಲಿ ನೀರನ್ನು ಸಂಗ್ರಹಿಸಿ ಸಾಧ್ಯವಾದಷ್ಟು ಮನೆಯ ನೀರನ್ನು ಬಳಸುವುದು.

ಸಿದ್ಧಪಡಿಸಿದ ಆಹಾರ ಪದಾರ್ಥಗಳ ಮೇಲೆ ಕ್ರಿಮಿಕೀಟಗಳು ಕುಳಿತುಕೊಳ್ಳದಂತೆ ಮುನ್ನೆಚ್ಚರಿಕೆಕ್ರಮ ಕೈಗೊಳ್ಳುವುದು.



## ಬ್ರೂವರಿಗಳಿಂದ ತುಪ್ಪದ ದೋಸೆವರೆಗೆ.... ಗೋದ್ರೇಜ್ ಫುಡ್ ಟ್ರೆಂಡ್ಸ್ ರಿಪೋರ್ಟ್ ಫಾರೆಕ್







ಇದೊಂದು ಕ್ಯುರೇಟೆಡ್, ಬ್ರ್ಯಾಂಡ್-ಅಜ್ಞೇಯತಾವಾದಿ, ಮಾಲೀಕತ್ವದ ಮಾಧ್ಯಮ ವೇದಿಕೆಯಾದ ಗೋದ್ರೇಜ್ ವಿಖ್ರೋಲಿ ಕ್ಯುಸಿನಾ, ಗ್ಲಾಮರಸ್ ಗೋದ್ರೇಜ್ ಲಾ39;ಅಫೇರ್ 2024 ರಲ್ಲಿ ಕಾತರದಿಂದ ನಿರೀಕ್ಷಿಸುತ್ತಿರುವ ಗೋದ್ರೇಜ್ ಫುಡ್ ಟ್ರೆಂಡ್ಸ್ ವರದಿ 2024 ರ ಸ್ಟಾರ್-ಸ್ಟಡೆಡ್ ಲಾಂಚ್ ಅನ್ನು ಆಯೋಜಿಸಿದೆ.

ಪ್ರೊವೆನೆನ್ಸ್ ಎಂಬ ಥೀಮ್ ಅಡಿಯಲ್ಲಿ ಈ ವರದಿ, ಭಾರತದ ಆಹಾರ ಸಂಸ್ಕೃತಿಯ ಶ್ರೀಮಂತಿಕೆಯನ್ನು ಪರಿಶೋಧಿಸುತ್ತದೆ; ಪದಾರ್ಥಗಳ ವೈವಿಧ್ಯಮಯ ಮೂಲಗಳು ಮತ್ತು ಭಾರತದ ಪಾಕಶಾಲೆಯ ಅಭ್ಯಾಸಗಳನ್ನು ಪರಿಶೀಲಿಸುತ್ತದೆ. ತಾನ್ಯಾ ದುಬಾಶ್, ಕಾರ್ಯನಿರ್ವಾಹಕ ನಿರ್ದೇಶಕ ಮತ್ತು ಚೀಫ್ ಬ್ರಾಂಡ್ ಆಫೀಸರ್, ಗೋದ್ರೇಜ್ ಇಂಡಸ್ಟ್ರೀಸ್ ಲಿಮಿಟೆಡ್, ವರದಿಯ ಏಳನೇ ಆವೃತ್ತಿಯನ್ನು ಅನಾವರಣಗೊಳಿಸಿದರು; ಆಹಾರದ ಭವಿಷ್ಯವನ್ನು

ರೂಪಿಸುವ ಆಕರ್ಷಕ ಪ್ರವೃತ್ತಿಯನ್ನು ಕಂಡುಹಿಡಿಯಲು ಹಾಜರಿದ್ದ ಮಲೈಕಾ ಅರೋರಾ ಅವರಂತಹ ಆಹಾರ ಪ್ರಿಯರಲ್ಲಿ ಕುತೂಹಲವನ್ನು ಹುಟ್ಟುಹಾಕಿದರು. ಗೋದ್ರೇಜ್ ಫುಡ್ ಟ್ರೆಂಡ್ಸ್ ವರದಿ 2024 ಪ್ರಸಿದ್ಧ ಬಾಣಸಿಗರು, ಬ್ಲಾಗರ್ಗಳು ಮತ್ತು ಪೌಷ್ಟಿಕತಜ್ಞರು ಸೇರಿದಂತೆ ವಿವಿಧ ಪಾಕಶಾಲೆಯ ಹಿನ್ನೆಲೆಯಿಂದ ಬಂದಿರುವ 190+ ಅಗ್ರ ಚಿಂತಕರನ್ನು ಒಂದೆಡೆ ಸೇರಿಸಿತ್ತು. ಅವರೆಲ್ಲ ವರದಿಯಲ್ಲಿ ಉಲ್ಲೇಖಿಸಲಾದ ಸಮಗ್ರ ಪ್ರವೃತ್ತಿಗಳ ಕುರಿತು ತಮ್ಮ ಒಳನೋಟಗಳನ್ನು ಹಂಚಿಕೊಂಡಿದ್ದಾರೆ. ನಿರಂತರವಾಗಿ ವಿಕಸನಗೊಳ್ಳುತ್ತಿರುವ ಪಾಕಶಾಲೆಯ ಕಲೆಯಲ್ಲಿ, ಮೂಲ ವಿಷಯವಾದ ಪ್ರಾವೆನೆನ್ಸ್ ಭಾರತೀಯ ಪಾಕಶಾಸ್ತ್ರದ ಆಳ ಮತ್ತು ವೈವಿಧ್ಯತೆಯ ಪರಿಶೋಧನೆ ಮತ್ತು ಬೆಳವಣಿಗೆಯನ್ನು ಸೂಚಿಸುತ್ತದೆ. ಇದು ನಮ್ಮ ಆಹಾರದ ಮೂಲಗಳೊಂದಿಗೆ ನಮ್ಮನ್ನು ಸಂಪರ್ಕಿಸುತ್ತದೆ ಮಾತ್ರವಲ್ಲದೆ ನಮ್ಮ ಪಾಕಶಾಲೆಯ ಪರಂಪರೆಯನ್ನು ಸಂರಕ್ಷಿಸುವ ಸುಸ್ಥಿರ ಅಭ್ಯಾಸಗಳ ಅಗತ್ಯತೆಯನ್ನು ಎತ್ತಿ ತೋರಿಸುತ್ತದೆ. ವರದಿಯು ಪಾರದರ್ಶಕತೆ ಮತ್ತು ಅಧಿಕೃತತೆಯನ್ನು ಬಯಸುವ ಅರಿತು ತಿನ್ನುವವರ ಮೇಲೆ ಬೆಳಕು ಚೆಲ್ಲುತ್ತದೆ. ಈ ಮೂಲಕ ಉತ್ಪನ್ನಗಳ

'ತೋಟದಿಂದ ತಟ್ಟೆಗೆ' ಪ್ರಯಾಣದಲ್ಲಿ ಹುದುಗಿರುವ ಮೌಲ್ಯಗಳನ್ನು ಜನಪ್ರಿಯಗೊಳಿಸುತ್ತದೆ. ವರದಿಯ 2024 ರ ಆವೃತ್ತಿಯ ಕುರಿತು ಪ್ರತಿಕ್ರಿಯಿಸಿದ ತಾನ್ಯಾ ದುಬಾಶ್ - ಕಾರ್ಯನಿರ್ವಾಹಕ ನಿರ್ದೇಶಕಿ ಮತ್ತು ಮುಖ್ಯ ಬ್ರಾಂಡ್ ಆಫೀಸರ್, ಗೋದ್ರೇಜ್ ಇಂಡಸ್ಟ್ರೀಸ್ ಲಿಮಿಟೆಡ್ ಮತ್ತು ಅಸೋಸಿಯೇಟ್ ಕಂಪನಿಗಳು,''ಗೋದ್ರೇಜ್ ಫುಡ್ ಟ್ರೆಂಡ್ಸ್ ವರದಿ 2024 ನಮ್ಮ ಅನ್ವೇಷಣೆಯಲ್ಲಿನ ಮತ್ತೊಂದು ಮೈಲಿಗಲ್ಲು. ಇದು, ಆಹಾರೋದ್ಯಮದಲ್ಲಿನ ಪ್ರವೃತ್ತಿಗಳನ್ನು ಗುರುತಿಸುತ್ತದೆ ಮತ್ತು ಚರ್ಚೆಗಳನ್ನು ಹುಟ್ಟುಹಾಕುತ್ತದೆ. ಗ್ರಾಹಕರು ತಾವು ತಿನ್ನುವ ಆಹಾರದ ಬಗ್ಗೆ ಹೆಚ್ಚು ಪ್ರಜ್ಞಾವಂತರಾಗುತ್ತಿದ್ದಾರೆ, ಸರಿಯಾದ ಪೋಷಣೆಯ ಮೇಲೆ ಗಮನವನ್ನು ಕೇಂದ್ರೀಕರಿಸುತ್ತಿದ್ದಾರೆ.

ಪರ್ಫೆಕ್ಟ್ ಬೈಟ್ ಕನ್ಸಲ್ಟಿಂಗ್ನ ವ್ಯವಸ್ಥಾಪಕ ನಿರ್ದೇಶಕಿ ಮತ್ತು ಗೋದ್ರೇಜ್ ಫುಡ್ ಟ್ರೆಂಡ್ಸ್ ವರದಿಯ ಕ್ಯುರೇಟಿಂಗ್ ಸಂಪಾದಕ ರುಶಿನಾ ಮುನ್ಶಾ ಘಿಲ್ಡಿಯಾಲ್ 2024 ರ ಆವೃತ್ತಿಗೆ ವೇದಿಕೆಯನ್ನು ಸಿದ್ಧಪಡಿಸಿದ್ದಾರೆ:ನಾವು 2024 ರ ಆವೃತ್ತಿಯನ್ನು ಪ್ರಾರಂಭಿಸುತ್ತಿದ್ದಂತೆ, ಜಾಗತಿಕ ಪಾಕಶಾಲೆಯ ಶಕ್ತಿ ಕೇಂದ್ರವಾಗಿ ಭಾರತ ಹೊರಹೊಮ್ಮುತ್ತಿರುವುದನ್ನೂ ಗಮನಿಸುತ್ತಿದ್ದೇವೆ. ಇದೇ ನಮ್ಮ ಪ್ರಾವಿನೆನ್ಸ್ ನ ಮೂಲ ವಿಷಯ. ಭಾರತದಲ್ಲಿ, ಪ್ರಾವಿನೆನ್ಸ್ ಆಹಾರದ ಕುರಿತಾದ ನಮ್ಮ ಅತ್ಯಂತ ಆಪ್ತ ಸಂಭಾಷಣೆಗಳಿಗೆ ದಿಕ್ಕನ್ನು ಸೂಚಿಸುತ್ತದೆ.

ಅಧಿಕೃತ ಪಾಕಪದ್ಧತಿ ಪ್ರಯಾಣದ ಸುಖಾನುಭವಗಳನ್ನು ಹೆಚ್ಚಿಸುತ್ತದೆ: 92.3% ಪ್ರಯಾಣಿಕರು ಅಧಿಕೃತಪಾಕಶಾಲೆಯ ಅಮುಭವಗಳ ಮೂಲಕ ತಮ್ಮ ಪ್ರಯಾಣವನ್ನು ಇನ್ನಷ್ಟು ಉತ್ಕೃಷ್ಟಗೊಳಿಸಲು ಪಾಕಶಾಲೆಗಳಿಗೆ ಭೇಟಿನೀಡುತ್ತಾರೆ ಎಂದು ತಜ್ಞರು ಮುನ್ಸೂಚನೆ ನೀಡಿದ್ದಾರೆ

ಬೆಸ್ಪೋಕ್ ಕಾಕ್ಟೇಲ್ಗಳು ಬಾರ್ ಮಟ್ಟವನ್ನು ಏರಿಸುತ್ತವೆ: 2024 ರಲ್ಲಿ 82.7% ರಷ್ಟು ಬಾರ್ ದೃಶ್ಯವು ಭಾರತೀಯ ಮೂಲದ ಸ್ಪಿರಿಟ್ಗಳಿಂದಲೇ ಸುತ್ತುವರಿದ ಮೆನ್ಯುಗಳಿಂದ ಮೆರುಗುಗೊಳ್ಳುತ್ತವೆ ಎಂದು ತಜ್ಞರುಬಹಿರಂಗಪಡಿಸಿದ್ದಾರೆ ಚಾಕೊಲೇಟ್ ಒಂದು ಅತ್ಯಾಧುನಿಕ ವ್ಯವಹಾರವಾಗಲಿದೆ: ಭಾರತೀಯ ಚಾಕೊಲೇಟ್ಗಳು ಸ್ಥಳೀಯವಾಗಿ ಬೆಳೆದ,ಉತ್ತಮ-ಗುಣಮಟ್ಟದ, ಕೋಕೋ ಬೀನ್ಸ್ ಅನ್ನು ಕಲಾತ್ಮಕವಾಗಿ ಸಂಯೋಜಿಸುವ ಮೂಲಕ ಪ್ರಾವೆನೆನ್ಸ್ ನ ವಿಶಿಷ್ಟಸೂಕ್ಷ್ಮ ವ್ಯತ್ಯಾಸಗಳನ್ನು ಹೆಚ್ಚು ಪ್ರದರ್ಶಿಸುತ್ತಿವೆ ಎಂದು ತಜ್ಞರು 94.2% ಕುಶಲಕರ್ಮಿಗಳ ಚಾಕೊಲೇಟ್ಗಳನ್ನುಅಧ್ಯಯನ ಮಾಡಿ ವರದಿ ಮಾಡಿದ್ದಾರೆ .

## ಕಡಲೆಕಾಯಿ ಫೇಸ್ ಪ್ಯಾಕ್'

### ಬ್ಯೂಟಿ ಟಿಪ್ಸ್



ಕಡಲೆಕಾಯಿ ಆರೋಗ್ಯಕ್ಕೆ ಉತ್ತಮ. ಕಡಲೆಕಾಯಿ ಕೂದಲು ಮತ್ತು ಚರ್ಮದ ಸೌಂದರ್ಯವನ್ನು ಹೆಚ್ಚಿಸಲು ಸಹಕಾರಿ. ಇದು ಚರ್ಮದ ರಂಧ್ರಗಳನ್ನು ಶುದ್ಧಿಕರಿಸುತ್ತದೆ. ಹಾಗಾಗಿ ಪಾರ್ಟಿ ಫಕ್ಷನ್ ಗಳಿಗೆ ಹೋಗುವಾಗ ಕಡಲೆಕಾಯಿಯಿಂದ ಫೇಸ್ ಪ್ಯಾಕ್ ತಯಾರಿಸಿ ಮುಖಕ್ಕೆ ಹಚ್ಚಿ. 3 ಚಮಚ ಕಡಲೆಕಾಯಿ ಮತ್ತು ಳಿ ಕಪ್ ಹಾಲನ್ನು ಮಿಕ್ಸಿಯಲ್ಲಿ ಹಾಕಿ ರುಬ್ಬಿ ಪೇಸ್ಟ್ ತಯಾರಿಸಿಕೊಳ್ಳಿ. ಇದಕ್ಕೆ 1 ಚಮಚ ಜೇನುತುಪ್ಪ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ ಫೇಸ್ ಪ್ಯಾಕ್ ತಯಾರಿಸಿ. ಮುಖವನ್ನು ಹಸಿ ಹಾಲಿನಿಂದ ಸ್ವಚ್ಛಗೊಳಿಸಿ ಬಳಿಕ ಈ ಫೇಸ್ ಪ್ಯಾಕ್ ಹಚ್ಚಿ 20 ನಿಮಿಷ ಬಿಟ್ಟು ಮುಖವನ್ನು ವಾಶ್ ಮಾಡಿ. ಕಪ್ ಕಡಲೆಕಾಯಿ ಮತ್ತು 2 ಬಾಳೆಹಣ್ಣನ್ನು ಸೇರಿಸಿ ಚೆನ್ನಾಗಿ ರುಬ್ಬಿ ಪೇಸ್ಟ್ ತಯಾರಿಸಿ ಇದಕ್ಕೆ 1 ಚಿಟಿಕೆ ಅರಿಶಿನ ಮಿಕ್ಸ್ ಮಾಡಿ ಪ್ಯಾಕ್ ತಯಾರಿಸಿ ಮುಖ ಮತ್ತು ಕುತ್ತಿಗೆಗೆ ಹಚ್ಚಿ 15 ನಿಮಿಷ ಬಿಟ್ಟು ಮುಖವನ್ನು ವಾಶ್ ಮಾಡಿ. ಇದನ್ನು ವಾರಕೊಮ್ಮೆ ಬಳಸಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆತ್ಮೀಯರಲ್ಲಿ ಪ್ರೀತಿ, ಟ್ರಾವೆಲ್ಸ್ ಉದ್ಯಮಿಗಳಿಗೆ ಲಾಭ, ಅಪರಿಚಿತರಿಂದ ತೊಂದರೆ, ಉದ್ಯೋಗದಲ್ಲಿ ಪ್ರಗತಿ

**ವೃಷಭ:** ಪರರಿಗೆ ಸಹಾಯ, ನಿರೀಕ್ಷಿತ ಆದಾಯ, ಪಿತ್ರಾರ್ಜಿತ ಆಸ್ತಿ ಲಭ್ಯ, ಆಕಸ್ಮಿಕ ಧನ ಲಾಭ, ಕುಟುಂಬದಲ್ಲಿ ಪ್ರೀತಿ

**ಮಿಥುನ:** ಅಧಿಕಾರಿಗಳಿಂದ ಪ್ರಶಂಸೆ, ಆಪ್ತರ ಸಲಹೆ, ರಾಜಕೀಯದಲ್ಲಿ ಗೊಂದಲ, ಶ್ರಮವಿಲ್ಲದೆ ಏನು ನಡೆಯುವುದಿಲ್ಲ.

**ಕಟಕ:** ಮಾನಸಿಕ ಒತ್ತಡ, ಕೋಪ ಜಾಸ್ತಿ, ವ್ಯಾಸಂಗಕ್ಕೆ ತೊಂದರೆ, ಶತ್ರು ಭಯ, ಉದ್ಯೋಗದಲ್ಲಿ ಉನ್ನತ ಸ್ಥಾನ, ಋಣಭಾದೆ.

**ಸಿಂಹ:** ಮಕ್ಕಳ ವಿಚಾರದಲ್ಲಿ ಅಧಿಕ ಚಿಂತೆ, ಹಿತೈಷಿಗಳಿಂದ ಬೆಂಬಲ, ಮನಶಾಂತಿ, ನಿದ್ರಾ ಭಂಗ, ಪರಸ್ಥಳವಾಸ, ಮಾತೃವಿನ ಆರೈಕೆ.

**ಕನ್ಯಾ:** ಬಾಕಿ ಹಣ ಕೈ ಸೇರುವುದು, ಅನಗತ್ಯ ಖರ್ಚು, ಪತ್ರ ವ್ಯವಹಾರಗಳಲ್ಲಿ ಎಚ್ಚರ, ಆಕಸ್ಮಿಕ ದನ ಲಾಭ, ಶರೀರದಲ್ಲಿ ತಳಮಳ.

**ತುಲಾ:** ಮಾತಿಗೆ ಪಶ್ಚಾತ್ತಾಪ, ದೃಷ್ಟಿ ದೋಷದಿಂದ ತೊಂದರೆ, ರೋಗ ಭಾದೆ.

**ವೃಶ್ಚಿಕ:** ಮಾತಿನಿಂದ ಅನರ್ಥ, ಮನಸ್ಸಿನಲ್ಲಿ ದುಗುಡ, ಕೃಷಿಕರಿಗೆ ಲಾಭ, ದಾಂಪತ್ಯದಲ್ಲಿ ಪ್ರೀತಿ.

**ಧನಸ್ಸು:** ಮಾತಾಪಿತರಲ್ಲಿ ವಾತ್ಸಲ್ಯ, ಶ್ರಮಕ್ಕೆ ತಕ್ಕ ಫಲ, ಕಾರ್ಯ ಸಾಧನೆ, ಪರರಿಗೆ ಸಹಾನುಭೂತಿ ತರುವಿರಿ

**ಮಕರ:** ಅತಿಯಾದ ಆತ್ಮವಿಶ್ವಾಸ ಒಳ್ಳೆಯದಲ್ಲ, ಮತ್ತೊಬ್ಬರ ವಿಷಯದಲ್ಲಿ ಪ್ರವೇಶ ಮಾಡುವಿರಿ, ದೂರ ಪ್ರಯಾಣ.

**ಕುಂಭ:** ಮಾತಿಗೆ ಮರುಳಾಗದಿರಿ, ದೇವತಾ ಕಾರ್ಯಗಳ ಬಗ್ಗೆ ಒಲವು, ವೃತ್ತಿ ಜೀವನದಲ್ಲಿ ಬದಲಾವಣೆ.

**ಮೀನ:** ಬಹು ಲಾಭ, ಅನಾವಶ್ಯಕ ಖರ್ಚು, ಸಾಲಬಾಧೆ, ಗೌರವಕ್ಕೆ ಧಕ್ಕೆ, ಗೃಹ ಬದಲಾವಣೆ, ವಿಪರೀತ ವ್ಯಸನ.

## ವಿಶ್ವ ಧ್ವನಿ ದಿನ




ಏಪ್ರಿಲ್ 16 ರಂದು ನಡೆಯುವ ವಿಶ್ವ ಧ್ವನಿ ದಿನವು ಮಾನವ ಧ್ವನಿಯ ವಿದ್ಯಮಾನವನ್ನು ಆಚರಿಸಲು ಮತ್ತು ಧ್ವನಿಯ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಮೀಸಲಾಗಿದೆ. ರಜಾದಿನವು ಜನರ ದೈನಂದಿನ ಸಂವಹನಗಳಲ್ಲಿ ಮಾನವ ಧ್ವನಿಯು ಎಷ್ಟು ಪ್ರಮುಖವಾಗಿದೆ ಎಂಬುದನ್ನು ಪ್ರದರ್ಶಿಸುವ ಗುರಿಯನ್ನು ಹೊಂದಿದೆ. ಪರಿಣಾಮಕಾರಿ ಮತ್ತು ಆರೋಗ್ಯಕರ ಮಾನವ ಸಂವಹನಕ್ಕೆ ಧ್ವನಿ ನಿರ್ಣಾಯಕವಾಗಿದೆ. ವಿಶ್ವ ಧ್ವನಿ ದಿನವು ಧ್ವನಿ ಸಮಸ್ಯೆಗಳನ್ನು ತಡೆಗಟ್ಟಲು, ತೊಂದರೆಗೊಳಗಾದ ಧ್ವನಿಗಳನ್ನು ಪುನರ್ವಸತಿ ಮಾಡಲು, ಕಲಾತ್ಮಕ ಧ್ವನಿಗಳಿಗೆ ತರಬೇತಿ ನೀಡಲು ಮತ್ತು ಮಾನವ ಧ್ವನಿಯ ಕಾರ್ಯ ಮತ್ತು ಅನ್ವಯವನ್ನು ಸಂಶೋಧಿಸಲು ಜಾಗತಿಕ ಜಾಗೃತಿಯನ್ನು ತರಲು ಸಹಾಯ ಮಾಡುತ್ತದೆ. ವಿಶ್ವ ಧ್ವನಿ ದಿನದ ಒಂದು ಮುಖ್ಯ ಗುರಿಯು ಧ್ವನಿಗಳ ಎಲ್ಲಾ ಮಾಲೀಕರು ಮತ್ತು ಬಳಕೆದಾರರನ್ನು ತಮ್ಮ ಧ್ವನಿಯನ್ನು ಹೇಗೆ ಕಾಳಜಿ ವಹಿಸಬೇಕು ಎಂಬುದನ್ನು ಕಲಿಯಲು ಉತ್ತೇಜಿಸುವುದು, ಹಾಗೆಯೇ ಅಗತ್ಯವಿರುವಲ್ಲಿ ಸಹಾಯವನ್ನು ಹೇಗೆ ಪಡೆಯುವುದು ಮತ್ತು ಧ್ವನಿಯ ಕುರಿತು ಸಂಶೋಧನೆಯನ್ನು ಬೆಂಬಲಿಸುವುದು.

ನಾವು ಮನುಷ್ಯರು ಇರುವವರೆಗೂ ಮಾನವ ಧ್ವನಿ ಅಸ್ತಿತ್ವದಲ್ಲಿದೆ. ಮಾನವನ ಇತಿಹಾಸದ ಸಹಸ್ರಮಾನಗಳ ಮಾನವ ಧ್ವನಿಯ ಮೂಲ ಮತ್ತು ಬಳಕೆಯ ಸಮಗ್ರ ಇತಿಹಾಸವು ಪ್ರಯಾಸಕರವೆಂದು ಸಾಬೀತುಪಡಿಸಬಹುದು. ಆದಾಗ್ಯೂ, ಮಾನವ ಧ್ವನಿಯ ಜೈವಿಕ ರಚನೆಯ ಸಿದ್ಧಾಂತಗಳು ಧ್ವನಿಯು ಹೇಗೆ ಕಾರ್ಯನಿರ್ವಹಿಸುತ್ತದೆ ಎಂಬುದರ ಉತ್ತಮ ವಿವರಣೆಯಾಗಿದೆ ಮತ್ತು ಈ ಚರ್ಚೆಗೆ, ಇದು ಸಾಕಷ್ಟು ಹೆಚ್ಚು ಎಂದು ನಾವು ಭಾವಿಸುತ್ತೇವೆ.

ಮಾನವ ಧ್ವನಿಯು ವ್ಯಕ್ತಿಯ ಧ್ವನಿಯ ಮೂಲಕ ಉತ್ಪತ್ತಿಯಾಗುವ ಶಬ್ದಗಳನ್ನು ಒಳಗೊಂಡಿದೆ. ಇದರ ಪರಿಣಾಮವಾಗಿ ಉಂಟಾಗುವ ಕೆಲವು ಕ್ರಿಯೆಗಳು ಮಾತನಾಡುವುದು, ಹಾಡುವುದು, ನಗುವುದು, ಅಳುವುದು, ಕಿರುಚುವುದು, ಕೂಗುವುದು ಮತ್ತು ಗುನುಗುವುದು, ಇತರ ವಿಷಯಗಳ ಜೊತೆಗೆ. ಮಾನವರ ಧ್ವನಿ ಆವರ್ತನವು ಸೂರ್ಯನ ಉತ್ಪಾದನೆಯಲ್ಲಿ ನಿರ್ದಿಷ್ಟವಾಗಿ ಪ್ರಮುಖ ಪಾತ್ರವನ್ನು ವಹಿಸುತ್ತದೆ, ಇದರಲ್ಲಿ ನಿರ್ದಿಷ್ಟ ಧ್ವನಿ ಮಡಿಕೆಗಳು ಅಥವಾ ಹಗ್ಗಗಳು ಧ್ವನಿಯ ಪ್ರಾಥಮಿಕ ಮೂಲವಾಗಿದೆ. ಅದೇ ದೇಹದ ಪ್ರದೇಶದಿಂದ ಮಾನವ ಧ್ವನಿ ಉತ್ಪಾದನೆಯ ಇತರ ಕಾರ್ಯವಿಧಾನಗಳು ಸಾಮಾನ್ಯವಾಗಿ ಧ್ವನಿರಹಿತ ವ್ಯಂಜನಗಳ ಉತ್ಪಾದನೆಯನ್ನು ಒಳಗೊಂಡಿರುತ್ತವೆ, ಕ್ಲಿಕ್ಗಳು, ಶಿಳ್ಳೆಗಳು ಮತ್ತು ಪಿಸುಗುಟ್ಟುವಿಕೆ.

ಸಂಜೆ ಮುಗಿಲು
ಮಂಗಳವಾರ
16.4.2024


# ಒಮಾನಿನಲ್ಲಿ ಭಾರೀ ಮಳೆ, ಪ್ರವಾಹ: 13 ಮಂದಿ ಸಾವು



**ಮಸ್ಕತ್:** ಒಮಾನ್ನಲ್ಲಿ ಭಾರೀ ಮಳೆ ಮತ್ತು ಪ್ರವಾಹದಿಂದಾಗಿ ಕನಿಷ್ಠ 13 ಮಂದಿ ಸಾವನ್ನಪ್ಪಿರುವುದಾಗಿ ಮೂಲಗಳನ್ನು ಉಲ್ಲೇಖಿಸಿ 'ಖಲೀಜ್ ಟೈಮ್ಸ್' ಸೋಮವಾರ ವರದಿ ಮಾಡಿದೆ.

ರವಿವಾರ ದಿಢೀರ್ ಪ್ರವಾಹಕ್ಕೆ ಸಿಲುಕಿ 9 ವಿದ್ಯಾರ್ಥಿಗಳ ಸಹಿತ ಕನಿಷ್ಟ 12 ಮಂದಿ ಸಾವನ್ನಪ್ಪಿದ್ದರು ಎಂದು ವಿಪತ್ತು ನಿರ್ವಹಣೆಗೆ ಸಂಬಂಧಿಸಿದ ರಾಷ್ಟ್ರೀಯ ಸಮಿತಿ ಹೇಳಿದೆ.

ರವಿವಾರದ ಪ್ರವಾಹದಲ್ಲಿ ಉತ್ತರ ಅಲ್ಶರ್ಕಿಯಾ ಗವರ್ನರೇಟ್ನಲ್ಲಿ 4 ಮಂದಿ ನಾಪತ್ತೆಯಾಗಿದ್ದು ತೀವ್ರ ಶೋಧ ಕಾರ್ಯಾಚರಣೆಯ ಬಳಿಕ ಒಬ್ಬನ ಮೃತದೇಹ ಸೋಮವಾರ ಪತ್ತೆಯಾಗಿದೆ. ಮಗುವಿನ ಸಹಿತ ಇತರ ಮೂವರ ಪತ್ತೆಕಾರ್ಯಾಚರಣೆ ಮುಂದುವರಿದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಭಾರೀ ಮಳೆಯಿಂದಾಗಿ ಒಮಾನ್ನ ಹಲವು ಭಾಗಗಳಲ್ಲಿ ಪ್ರವಾಹ ಉಂಟಾಗಿದೆ. ಶಾಲೆಯ ವಿದ್ಯಾರ್ಥಿಗಳನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದ್ದು ಆನ್ಲೈನ್ ಮೂಲಕ ಪಾಠ ನಡೆಸುವಂತೆ ಶಾಲೆ-ಕಾಲೇಜುಗಳಿಗೆ ಸೂಚಿಸಲಾಗಿದೆ. ಕೆಲವು ಮನೆಗಳೂ ಜಲಾವೃತಗೊಂಡಿದ್ದು ಮನೆಯ ನಿವಾಸಿಗಳನ್ನು ಸ್ಥಳಾಂತರಿಸುವ ಕಾರ್ಯ ನಡೆಯುತ್ತಿದೆ. ಪ್ರಮುಖ ರಸ್ತೆಗಳು ಜಲಾವೃತಗೊಂಡಿದ್ದು ರಸ್ತೆಬದಿ ನಿಲ್ಲಿಸಿದ್ದ ವಾಹನಗಳು ನೆರೆನೀರಲ್ಲಿ ಕೊಚ್ಚಿಹೋಗುತ್ತಿರುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಒಮನ್ ಪೊಲೀಸ್ನ ವಾಯುಯಾನ ತಂಡವು ಗ್ರಾಮೀಣ ಫಾರ್ಮ್ ಒಂದರಲ್ಲಿ ಅತಂತ್ರ ಸ್ಥಿತಿಯಲ್ಲಿದ್ದ 21 ಮಂದಿಯನ್ನು ಖಿರಾಯತ್ ಗವರ್ನರೇಟ್ನ ಅಲ್ಲಾಸ್ಮೊ ಪ್ರದೇಶಕ್ಕೆ ಸ್ಥಳಾಂತರಿಸುವ ಕಾರ್ಯಾಚರಣೆ ನಡೆಸಿದೆ.

## ಮೋದಿ ವಿರುದ ರಾಹುಲ್ ಗಾಂಧಿ ವಿವಾದಾತ್ಮಕ ಹೇಳಿಕೆ

**ನವದೆಹಲಿ :** ಪ್ರಧಾನಿ ಮೋದಿಯವರ ನೀರೊಳಗಿನ ಪೂಜೆಯನ್ನು ಗುರಿಯಾಗಿಸಿಕೊಂಡ ರಾಹುಲ್ ಗಾಂಧಿ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿ ಮತ್ತೊಂದು ವಿವಾದ ಸೃಷ್ಟಿಸಿದ್ದಾರೆ.ಪ್ರಧಾನಿ ಮೋದಿ ಸಮುದ್ರದಲ್ಲಿ ಪೂಜೆ ಸಲ್ಲಿಸುತ್ತಾರೆ, ಅಲ್ಲಿ ದೇವಾಲಯವಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರು ಇತ್ತೀಚೆಗೆ ಶ್ರೀಕೃಷ್ಣನ ದ್ವಾರಕಾ ಸನ್ನಿಧಿಯಲ್ಲಿ ನೀರೊಳಗಿನ ಪೂಜೆ ಸಲ್ಲಿಸಿದ್ದರು. ಈ ವಿಚಾರಕ್ಕೆ ರಾಹುಲ್ ಗಾಂಧಿ ಟೀಕಿಸಿದ್ದಾರೆ. ಹಣದುಬ್ಬರ ಮತ್ತು ನಿರುದ್ಯೋಗದಂತಹ ನಿರ್ಣಾಯಕ ವಿಷಯಗಳನ್ನು ಕಡೆಗಣಿಸಲಾಗುತ್ತಿದೆ ಎಂದು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಆರೋಪಿಸಿದ್ದಾರೆ. 2024 ರ ಲೋಕಸಭಾ ಪ್ರಚಾರದ ಭಾಗವಾಗಿ ಮಹಾರಾಷ್ಟ್ರದ ಭಂಡಾರದಲ್ಲಿ ಸಾರ್ವಜನಿಕ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಫೆಬ್ರವರಿಯಲ್ಲಿ ಪ್ರಧಾನಿ ಮೋದಿಯವರ ನೀರೊಳಗಿನ ಪೂಜೆಯನ್ನು ಗುರಿಯಾಗಿಸಿಕೊಂಡರು. ನೀರಿನಲ್ಲಿ ಮುಳುಗಿರುವ ಪ್ರಾಚೀನ ನಗರ ದ್ವಾರಕಾದಲ್ಲಿ ಪೂಜೆ ಸಲ್ಲಿಸಲು ಪ್ರಧಾನಿ ಮೋದಿ ಗುಜರಾತ್ ಕರಾವಳಿಯ ಅರೇಬಿಯನ್ ಸಮುದ್ರಕ್ಕೆ ಇಳಿದಿದ್ದರು ಎಂದರು.ರಾಹುಲ್ ಗಾಂಧಿ ನಮ್ಮ ನಂಬಿಕೆಗಳನ್ನು ಅಪಹಾಸ್ಯ ಮಾಡುತ್ತಿದ್ದಾರೆ. ಪಪ್ಪು ಹಿಂದೂ ವಿರೋಧಿ ಎಂದು ನೆಟ್ಟಿಗರು ಕಿಡಿಕಾರಿದ್ದಾರೆ.



## ಸಿಂಗಾಪುರ ಪ್ರಧಾನಿ ಹುದ್ದೆಗೆ 'ಲೀ ಸೀನ್ ಲೂಂಗ್' ರಾಜೀನಾಮೆ

ಸಿಂಗಾಪುರದ ಪ್ರಧಾನಿ ಲೀ ಸೀನ್ ಲೂಂಗ್ (72) ಅವರು ಮೇ 15 ರಂದು ತಮ್ಮ ಉತ್ತರಾಧಿಕಾರಿ ಲಾರೆನ್ಸ್ ವಾಂಗ್ ಅವರಿಗೆ ಅಧಿಕಾರವನ್ನ ಹಸ್ತಾಂತರಿಸುವುದಾಗಿ ಸೋಮವಾರ ಘೋಷಿಸಿದ್ದಾರೆ.

51 ವರ್ಷದ ವಾಂಗ್ ಪ್ರಸ್ತುತ ಸಿಂಗಾಪುರದ ಉಪ ಪ್ರಧಾನಿ ಮತ್ತು ಹಣಕಾಸು ಸಚಿವರಾಗಿದ್ದಾರೆ ಮತ್ತು 2022ರಿಂದ ಪ್ರಧಾನಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರಧಾನಿ ಕಚೇರಿಯ ವೆಬ್ಸೈಟ್ನಲ್ಲಿ ಪೋಸ್ಟ್ ಮಾಡಿದ ಹೇಳಿಕೆಯಲ್ಲಿ, ಲೀ ನಾಯಕತ್ವದ ಪರಿವರ್ತನೆಯನ್ನ ಮಹತ್ವದ ಕ್ಷಣ ಎಂದು ಕರೆದಿದ್ದಾರೆ. ನಾನು ಮೇ 15, 2024ರಂದು ಪ್ರಧಾನಿ ಹುದ್ದೆಯನ್ನು ತ್ಯಜಿಸುತ್ತೇನೆ ಮತ್ತು ಉಪ ಪ್ರಧಾನಿ ಲಾರೆನ್ಸ್ ವಾಂಗ್ ಅದೇ ದಿನ ಮುಂದಿನ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಲಾರೆನ್ಸ್ ಮತ್ತು? ಜನರ ವಿಶ್ವಾಸವನ್ನು ಗಳಿಸಲು ತಂಡವು ಶ್ರಮಿಸಿದೆ, ವಿಶೇಷವಾಗಿ ಸಾಂಕ್ರಾಮಿಕ ಸಮಯದಲ್ಲಿ ಎಂದಿದ್ದಾರೆ.

## 800 ಕೋಟಿ ನಗದು ವಶ

**ಜೈಪುರ:** ಲೋಕಸಭೆ ಚುನಾವಣೆಗೆ ಮುನ್ನ ರಾಜಸ್ಥಾನದಲ್ಲಿ ರೂ. 800 ಕೋಟಿಗೂ ಹೆಚ್ಚು ನಗದು, ಮದ್ಯ, ಬೆಲೆಬಾಳುವ ಚಿನ್ನಾಭರಣ ಮತ್ತಿತರ ವಸ್ತುಗಳನ್ನು ವಿವಿಧ ತನಿಖಾ ಸಂಸ್ಥೆಗಳು ವಶಪಡಿಸಿಕೊಂಡಿವೆ. ಚುನಾವಣಾ ಆಯೋಗವು ಬಿಡುಗಡೆ ಮಾಡಿದ ಅಂಕಿಅಂಶಗಳ ಪ್ರಕಾರ, ಅಕ್ರಮವಾಗಿ ಮತದಾರರಿಗೆ ಹಂಚಲು ಸಂಗ್ರಹಿಸಲಾಗಿದ್ದ ವಸ್ತುಗಳ ಜಪ್ತಿಯಲ್ಲಿ ರಾಜಸ್ಥಾನವು ದೇಶದಲ್ಲಿ ಮೊದಲ ಸ್ಥಾನದಲ್ಲಿದೆ. ಮಾರ್ಚ್ 1ರಿಂದ ಇಲ್ಲಿಯವರೆಗೆ ದಾಖಲೆಯ 812.77 ಕೋಟಿ ರೂ. ಸಂಗ್ರಹಿಸಲಾಗಿದೆ. ಇದರಲ್ಲಿ 36.79 ಕೋಟಿ ರೂಪಾಯಿ ನಗದು, 41.71 ಕೋಟಿ ರೂಪಾಯಿ ಮೌಲ್ಯದ ಮದ್ಯ, 121.79 ಕೋಟಿ ರೂಪಾಯಿ ಮೌಲ್ಯದ ಡ್ರಗ್ಸ್, 49.21 ಕೋಟಿ ರೂಪಾಯಿ ಮೌಲ್ಯದ ಚಿನ್ನಾಭರಣ, 563 ಕೋಟಿ ರೂ. ಗೂ ಹೆಚ್ಚು ಮೌಲ್ಯದ ಉಚಿತ ಕೊಡುಗೆಗಳು ಸೇರಿವೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಪ್ರವೀಣ್ ಗುಪ್ತಾ ಹೇಳಿದ್ದಾರೆ. ರಾಜ್ಯದ 20 ಜಿಲ್ಲೆಗಳಲ್ಲಿ ತಲಾ 20 ಕೋಟಿ ರೂ.ಗೂ ಹೆಚ್ಚು ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ. ಲೋಕಸಭೆ ಸಾರ್ವತ್ರಿಕ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಾದ ಮಾರ್ಚ್ 16 ರಿಂದ ವಶಪಡಿಸಿಕೊಂಡ ಸರಕು ಮತ್ತು ನಗದು ಮೌಲ್ಯ 712 ಕೋಟಿ ರೂ.ಗೂ ಹೆಚ್ಚಿದೆ ಎಂದು ಗುಪ್ತಾ ಹೇಳಿದ್ದಾರೆ.

# ಪ್ರತಿಯೊಬ್ಬರೂ ವಿಷಾದಿಸುತ್ತಾರೆ’: ಚುನಾವಣಾ ಬಾಂಡ್ ಯೋಜನೆ ರದ್ದತಿ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಟೀಕೆ

**ನವದೆಹಲಿ:** ಚುನಾವಣಾ ಬಾಂಡ್ ಯೋಜನೆಗಳ ಬಗ್ಗೆ ಪ್ರತಿಪಕ್ಷಗಳು ಸುಳ್ಳನ್ನು ಹಬ್ಬಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ. ಈ ವಿಷಯದಲ್ಲಿ ಪ್ರಾಮಾಣಿಕ ಅಭಿಪ್ರಾಯ ವ್ಯಕ್ತವಾದಾಗ ಎಲ್ಲರಿಗೂ ವಿಷಾದ ಉಂಟಾಗಲಿದೆ ಎಂದು ಮೋದಿ ಹೇಳಿದ್ದಾರೆ.

ಎಎನ್ಐ ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಪ್ರಧಾನಿ ನರೇಂದ್ರ ಮೋದಿ, ಚುನಾವಣೆಗಳಲ್ಲಿ ಕಪ್ಪು ಹಣಕ್ಕೆ ಕಡಿವಾಣ ಹಾಕುವ ದೃಷ್ಟಿಯಿಂದ ಚುನಾವಣಾ ಬಾಂಡ್ ಗಳನ್ನು ಪರಿಚಯಿಸಲಾಗಿತ್ತು. ಆದರೆ ವಿಪಕ್ಷಗಳು ಆರೋಪಗಳನ್ನು ಮಾಡಿದ ಬಳಿಕ ಪಲಾಯನ ಮಾಡಲು ಬಯಸುತ್ತಿವೆ ಎಂದು ಮೋದಿ ಆರೋಪಿಸಿದ್ದಾರೆ.

ಚುನಾವಣಾ ಬಾಂಡ್‌ಗಳ ಯೋಜನೆಗೆ ತಮ್ಮ ಮೊದಲ ವಿವರವಾದ ಪ್ರತಿಕ್ರಿಯೆ ನೀಡಿರುವ ಪ್ರಧಾನಿ ಮೋದಿ, ಈ ಯೋಜನೆಯನ್ನು ಯಶಸ್ಸಿನ ಕಥೆ ಎಂದು ಪರಿಗಣಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಏಕೆಂದರೆ ಈ ಯೋಜನೆ ಯಾರು ಕೊಡುಗೆ ನೀಡಿದ್ದರು ಎಂಬುದನ್ನು ತಿಳಿಯಲು ಅವಕಾಶ ಮಾಡಿಕೊಟ್ಟಿದೆ. ಈ ಯೋಜನೆಯನ್ನು ಸುಧಾರಿಸುವುದಕ್ಕೆ ಹಲವು



ಅವಕಾಶಗಳಿವೆ ಎಂದೂ ಮೋದಿ ಹೇಳಿದ್ದಾರೆ. ಸಂಬಂಧಿತ ಮಸೂದೆಯನ್ನು ಅಂಗೀಕರಿಸಿದಾಗ ಚುನಾವಣಾ ಬಾಂಡ್ ಗಳ ಯೋಜನೆ ಕುರಿತು ಸಂಸತ್ತಿನಲ್ಲಿ ಚರ್ಚೆ ನಡೆದಿತ್ತು ಮತ್ತು ಈಗ ಅದರ ಬಗ್ಗೆ ಪ್ರತಿಕ್ರಿಯಿಸುತ್ತಿರುವ ಕೆಲವರು ಅದನ್ನು ಬೆಂಬಲಿಸಿದ್ದಾರೆ ಎಂದು ಮೋದಿ ಹೇಳಿದ್ದಾರೆ. ಯೋಜನೆಯ ಮೂಲಕ ದೇಣಿಗೆ ನೀಡಿದ 3,000 ಕಂಪನಿಗಳ ಪೈಕಿ 26 ಕಂಪನಿಗಳು ಜಾರಿ ನಿರ್ದೇಶನಾಲಯದಂತಹ ತನಿಖಾ ಸಂಸ್ಥೆಗಳಿಂದ ಕ್ರಮವನ್ನು ಎದುರಿಸುತ್ತಿವೆ ಎಂದು ಪ್ರಧಾನಿ ಹೇಳಿದ್ದಾರೆ. ಈ 26 ಕಂಪನಿಗಳಲ್ಲಿ 16 ಮಂದಿ ಚುನಾವಣಾ ಬಾಂಡ್‌ಗಳನ್ನು ತೆಗೆದುಕೊಂಡಿವೆ. ಇವುಗಳಲ್ಲಿ (16 ಕಂಪನಿಗಳು) ಶೇಕಡಾ 37 ರಷ್ಟು ಮೊತ್ತವು ಬಿಜೆಪಿಗೆ ಮತ್ತು ಶೇಕಡಾ 63 ರಷ್ಟು ಬಿಜೆಪಿಯನ್ನು ವಿರೋಧಿಸುವ ವಿರೋಧ ಪಕ್ಷಗಳಿಗೆ ಹೋಗಿವೆ. ಈ ವರ್ಷ ಫೆಬ್ರವರಿಯಲ್ಲಿ ಸುಪ್ರೀಂ ಕೋರ್ಟ್ ಚುನಾವಣಾ ಬಾಂಡ್‌ಗಳ ಯೋಜನೆಯನ್ನು ರದ್ದುಗೊಳಿಸಿತು ಮತ್ತು ಇದು ಅಸಾಂವಿಧಾನಿಕ ಎಂದು ಹೇಳಿದೆ. ವಿಪಕ್ಷಗಳ ಮೈತ್ರಿಕೂಟ ಇಂಡಿಯಾ ಬ್ಲಾಕ್ ಚುನಾವಣಾ ಪ್ರಚಾರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರವನ್ನು ಚುನಾವಣಾ ಬಾಂಡ್‌ಗಳ ಯೋಜನೆಗೆ ಗುರಿಯಾಗಿಸುತ್ತಿವೆ.

## ಕಾಂಗ್ರೆಸ್ ಅಳಿವಿನಂಚಿನಲ್ಲಿದೆ: ರಾಜನಾಥ್ ಸಿಂಗ್

**ಉತ್ತರಾಖಂಡ್:** ಡೈನೋಸರ್ಗಳಂತೆ ಕಾಂಗ್ರೆಸ್ ಪಕ್ಷ ಅಳಿವಿನಂಚಿನತ್ತ ಸಾಗುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಗೌಚರ್ನಲ್ಲಿ ರ್ಯಾಲಿಯನ್ನು ಉದ್ದೇಶಿಸಿ ಹೇಳಿದರು. ಕಾಂಗ್ರೆಸ್ ನಾಯಕರು ಒಬ್ಬರಾದಮೇಲೆ ಒಬ್ಬರು ಪಕ್ಷ ತೊರೆದು ಬಿಜೆಪಿಗೆ ಸೇರ್ಪಡೆಯಾಗುತ್ತಿದ್ದಾರೆ. ಇನ್ನೂ ಕೆಲ ವರ್ಷಗಳಲ್ಲಿ ಕಾಂಗ್ರೆಸ್ ಡೈನೋಸರ್ಗಳಂತೆ ಅಳಿದುಹೋಗುವ ಭೀತಿಯಿದೆ. 2024ರ ನಂತರ ಕಾಂಗ್ರೆಸ್ ಹೆಸರೆತ್ತಿದರೆ ಅದು ಯಾರು ಎಂದು ಮಕ್ಕಳು ಕೇಳಬಹುದು? ಎಂದು ರಾಜನಾಥ್ ಸಿಂಗ್ ಕಾಂಗ್ರೆಸ್ ಕಾಲೆಳೆದಿದ್ದಾರೆ. ಕಾಂಗ್ರೆಸ್ ಒಳಜಗಳವನ್ನು ಉಲ್ಲೇಖಿಸಿದ ಅವರು, ಪ್ರತಿದಿನ ಅವರು ತಮ್ಮಲ್ಲೇ ಜಗಳಾಡಿಕೊಳ್ಳುತ್ತಿದ್ದಾರೆ. ಪಕ್ಷವು ಬಿಗ್ ಬಾಸ್ ಮನೆಯಂತಾಗಿದೆ ಎಂದು ಟೀಕಿಸಿದ್ದಾರೆ ಪ್ರಧಾನಿ ಮೋದಿಯವರ ನೇತೃತ್ವದಲ್ಲಿ ಭಾರತವು ಶಕ್ತಿಶಾಲಿ ರಾಷ್ಟ್ರವಾಗಿ ಹೊರಹೊಮ್ಮಿದೆ. ಅಂತರಾಷ್ಟ್ರೀಯ ವೇದಿಕೆಗಳಲ್ಲಿ ದೇಶದ ಧ್ವನಿಗೆ ಮನ್ನಣೆ ಸಿಗುತ್ತಿದ್ದು, ನಮ್ಮ ಮಾತನ್ನು ಗಂಭಿರವಾಗಿ ಪರಿಗಣಿಸಲಾಗುತ್ತಿದೆ ಎಂದು ಸಿಂಗ್ ಹೇಳಿದರು.



### ನಟ ಸಲ್ಮಾನ್ ಖಾನ್ ನಿವಾಸದ ಹೊರಗೆ ಗುಂಡಿನ ದಾಳಿ

# ಇಬ್ಬರು ಆರೋಪಿಗಳ ಬಂಧನ

**ಮುಂಬೈ:** ವಾಣಿಜ್ಯ ನಗರಿ ಮುಂಬೈಯ ಬಾಂದ್ರಾ ವೆಸ್ಟ್‌ನಲ್ಲಿರುವ ನಟ ಸಲ್ಮಾನ್ ಖಾನ್ ಅವರ ನಿವಾಸದ ಹೊರಗೆ ಕಳೆದ ಭಾನುವಾರ ನಡೆದ ಗುಂಡಿನ ದಾಳಿ ಘಟನೆಗೆ ಸಂಬಂಧಪಟ್ಟಂತೆ ಮುಂಬೈ ಕ್ರೈಂ ಬ್ರಾಂಚ್ ಇಬ್ಬರು ಆರೋಪಿಗಳನ್ನು ಬಂಧಿಸಿದೆ.

ನಟ ಸಲ್ಮಾನ್ ಖಾನ್ ಅವರ ನಿವಾಸದ ಹೊರಗೆ ನಡೆದ ಗುಂಡಿನ ದಾಳಿಗೆ ಸಂಬಂಧಿಸಿದಂತೆ ಕಳೆದ ರಾತ್ರಿ ವಿಕ್ಕಿ ಗುಪ್ತಾ ಮತ್ತು ಸಾಗರ್ ಪಾಲ್ ಎಂಬ ಆರೋಪಿಗಳನ್ನು ಮುಂಬೈ ಅಪರಾಧ ವಿಭಾಗದ ಪೊಲೀಸರು ಗುಜರಾತ್‌ನ ಭುಜ್ ನಲ್ಲಿ ಬಂಧಿಸಿ ರಾತ್ರಿಯೇ ಹೆಚ್ಚಿನ ವಿಚಾರಣೆಗೆ ಮುಂಬೈಗೆ ಕರೆತಂದಿದ್ದಾರೆ.

ನಿನ್ನೆ ಸೋಮವಾರ ತಡರಾತ್ರಿ ಗುಜರಾತ್‌ನ ಭುಜ್‌ನಲ್ಲಿ ಇಬ್ಬರು



ಆರೋಪಿಗಳು ಸಿಕ್ಕಿಬಿದ್ದಿದ್ದಾರೆ ಎಂದು ಮುಂಬೈ ಪೊಲೀಸರು ಮಾಹಿತಿ ನೀಡಿದ್ದಾರೆ. ಗುಂಡಿನ ದಾಳಿ ಬಳಿಕ ಮುಂಬೈನಿಂದ ಪರಾರಿಯಾಗಿದ್ದ ಆರೋಪಿಗಳಿಬ್ಬರನ್ನು ಗುಜರಾತ್‌ನ ಭುಜ್‌ನಲ್ಲಿ ಬಂಧಿಸಲಾಗಿದೆ. ಹೆಚ್ಚಿನ ತನಿಖೆಗಾಗಿ ಅವರನ್ನು ಮುಂಬೈಗೆ ಕರೆತರಲಾಗಿದೆ ಎಂದು ತಿಳಿಸಿದರು. ಮೊನ್ನೆ ಭಾನುವಾರ ಮುಂಜಾನೆ ಸಲ್ಮಾನ್ ಖಾನ್ ವಾಸವಾಗಿರುವ ಗ್ಯಾಲಕ್ಸಿ ಅಪಾರ್ಟ್‌ಮೆಂಟ್‌ನ ಹೊರಗೆ ಶಂಕಿತರು ಹೆಲ್ಮೆಟ್ ಧರಿಸಿಕೊಂಡು ಮೋಟಾರ್ ಬೈಕ್ ನಲ್ಲಿ ಬಂದು ಗಾಳಿಯಲ್ಲಿ ಮೂರ್ನಾಲ್ಕು ಸುತ್ತು ಗುಂಡು ಹಾರಿಸಿ ಪರಾರಿಯಾಗಿದ್ದರು. ಘಟನಾ ಸ್ಥಳಕ್ಕೆ ಬಂದು ತಪಾಸಣೆ ನಡೆಸಿದ ಪೊಲೀಸರು ಇದೊಂದು ಸೂಕ್ಷ್ಮ ಯೋಜಿತ ದಾಳಿ ಎಂದು ಹೇಳಿದ್ದರು.

## ಸ್ಥಳಿಯರಿಗೆ ಉದ್ಯೋಗಾವಕಾಶ ಬೆಂಬಲಿಸುತ್ತೇವೆ: ಮೋದಿ

**ನವದೆಹಲಿ:** ವಿದೇಶಿ ಹೂಡಿಕೆಯನ್ನು ಸ್ವಾಗತಿಸುವ ಭಾರತ, ದೇಶದಲ್ಲಿ ತಯಾರಾದ ಪ್ರತಿ ವಸ್ತುವಿನಲ್ಲಿ ಇಲ್ಲಿನ ಮಣ್ಣಿನ ಸೊಗಡನ್ನು ಕಾಣಲು ಬಯಸುತ್ತದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಂದರ್ಶನವೊಂದರಲ್ಲಿ ಹೇಳಿದ್ದಾರೆ. ಭಾರತದಲ್ಲಿ ವಿದೇಶಿಗರು ಹೂಡಿಕೆ ಮಾಡಬೇಕೆಂದು ನಾನು ಬಯಸುತ್ತೇನೆ. ಆ ಹೂಡಿಕೆದಾರರು ಇಲ್ಲಿನ ಜನರಿಗೆ ಉದ್ಯೋಗ ಕಲ್ಪಸುವಂತಿರಬೇಕು. ಹೀಗಾದರೆ ಭಾರತೀಯ ಯುವಕರಿಗೆ ಉದ್ಯೋಗಾವಕಾಶಗಳು ಲಭಿಸುತ್ತವೆ? ಎಂದು ಪ್ರಧಾನಿ, ಎಲಾನ್ ಮಸ್ಕ ಟೆಸ್ಲಾ ಹಾಗು ಸ್ಟಾರ್ಲಿಂಕ್ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ಹೇಳಿದರು. ಈ ಸಂದರ್ಭದಲ್ಲಿ 2015ರಲ್ಲಿ ಮಸ್ಕ ಫ್ಯಾಕ್ಟರಿಗೆ ಭೇಟಿ ನೀಡಿದ ಸಂದರ್ಭವನ್ನು ನೆನಪಿಸಿಕೊಂಡ ಅವರು, ಅದಕ್ಕಾಗಿ ತಮ್ಮೆಲ್ಲಾ ಕಾರ್ಯಕ್ರಮಗಳನ್ನು ರದ್ದುಗೊಳಿಸಿ ಅವರು ನನ್ನನ್ನು ಭೇಟಿ ಮಾಡಿದರು ಎಂದರು. ಟೆಸ್ಲಾದ ಎಕ್ಸ್ ಪೋಸ್ಟ್ ಪ್ರಕಾರ ಮಸ್ಕ್ ಈ ತಿಂಗಳು ಮೋದಿಯನ್ನು ಭೇಟಿಯಾಗಲಿದ್ದು, ಭಾರತದಲ್ಲಿ ಅತಿ ದೊಡ್ಡ ಹೂಡಿಯನ್ನು ಘೋಷಿಸುತ್ತಾರೆ ಎಂದು ನಿರೀಕ್ಷಿಸಲಾಗಿದೆ. ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ಭಾರತ ಅನ್ಯ ದೇಶಗಳಂತೆ ವಿದ್ಯುತ್ ಚಾಲಿತ ವಾಹನಗಳನ್ನು ಹೊಂದುವುದು ಅಗತ್ಯ ಎಂದ ಮಸ್ಕ್, ಟೆಸ್ಲಾ ಭಾರತಕ್ಕೆ ಕಾಲಿಡುವ ಸೂಚನೆ ನೀಡಿದ್ದರು.



## ಧರ್ಮ ಗುರು ದಲೈ ಲಾಮಾ ಭೇಟಿಯಾದ ನಟಿ ಕಂಗನಾ ರನೌತ್

ಧರ್ಮಶಾಲಾ: ನಟಿ ಮತ್ತು ಮಂಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕಂಗನಾ ರನೌತ್ ಟಿಬೆಟಿಯನ್ ಬೌದ್ಧ ಧರ್ಮಗುರು ದಲೈ ಲಾಮಾ ಅವರನ್ನು ಇಂದು ಭೇಟಿಯಾಗಿದ್ದಾರೆ. ಈ ವೇಳೆ ಹಿಮಾಚಲ ಪ್ರದೇಶದ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿಯ ಹಿರಿಯ ನಾಯಕ ಜೈ ರಾಮ್ ಠಾಕೂರ್ ಕೂಡ ಅವರ ಜೊತೆಗಿದ್ದರು. ’ದಲೈ ಲಾಮಾ ಅವರನ್ನು ಭೇಟಿಯಾಗಿರುವುದು ಒಂದು ಅದ್ಭುತ ಅನುಭವವಾಗಿದೆ.



ಇದು ನನ್ನ ಜೀವನದುದ್ದಕ್ಕೂ ನೆನಪಿನಲ್ಲಿಡುವಂತಹ ಅನುಭವವಾಗಿದೆ’ ಎಂದು ಕಂಗನಾ ಹೇಳಿದ್ದಾರೆ.

ದಲೈ ಲಾಮಾ ಅವರ ಭೇಟಿ ನಂತರ ಚಂಬಾ ಜಿಲ್ಲೆಯ ಭರ್ಮೂರ್ ಪ್ರದೇಶಕ್ಕೆ ಪ್ರಯಾಣ ಬೆಳೆಸಿದ ಕಂಗನಾ ಚುನಾವಣಾ ಪ್ರಚಾರವನ್ನು ಮುಂದುವರಿಸಿದರು. ಹಿಮಾಚಲ ಪ್ರದೇಶದ ಮಂಡಿ ಲೋಕಸಭಾ ಕ್ಷೇತ್ರಕ್ಕೆ ಬಿಜೆಪಿ ಅಭ್ಯರ್ಥಿಯಾಗಿ ಕಂಗನಾ ರನೌತ್ ಅವರನ್ನು ಪಕ್ಷ ಕಣಕ್ಕಿಳಿಸಿದೆ. ಕಾಂಗ್ರೆಸ್ನಿಂದ ವಿಕ್ರಮಾದಿತ್ಯ ಸಿಂಗ್ ಕಣದಲ್ಲಿದ್ದು, ಕಂಗನಾಗೆ ಪೈಪೋಟಿ ನೀಡಲಿದ್ದಾರೆ.



## ನೇಪಾಳಕ್ಕೆ ಆಂಬುಲೆನ್ಸ್, ಶಾಲಾ ಬಸ್ ಗಳನ್ನು ಉಡುಗೊರೆ ನೀಡಿದ ಭಾರತ

ನೇಪಾಳದ ಹಲವು ಸಂಸ್ಥೆಗಳಿಗೆ ಭಾರತವು 35 ಆಂಬುಲೆನ್ಸ್ ಹಾಗೂ 66 ಶಾಲಾ ಬಸ್ಗಳನ್ನು ನೀಡಿದೆ. ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳ ಸೌಕರ್ಯಗಳನ್ನು ಹೆಚ್ಚಿಸಲು ಈ ಉಡುಗೊರೆ ನೀಡಲಾಗಿದೆ. ನೇಪಾಳದ ಭಾರತೀಯ ರಾಯಭಾರಿ ನವೀನ್ ಶ್ರೀವಾಸ್ತವ ಅವರು ವಾಹನಗಳನ್ನು ನೇಪಾಳದ ಅಧಿಕಾರಿಗಳಿಗೆ ಹಸ್ತಾಂತರಿಸಿದರು. 1994ರಿಂದ ಈವರೆಗೆ ಭಾರತ ನೇಪಾಳಕ್ಕೆ ಸುಮಾರು 1,009 ಆಂಬುಲೆನ್ಸ್ಗಳು ಮತ್ತು 300 ಶಾಲಾ ಬಸ್ಗಳನ್ನು ಉಡುಗೊರೆಯಾಗಿ ನೀಡಿದೆ.

## ಸಿಡ್ನಿ ಚರ್ಚ್ ನಲ್ಲಿ ಮತ್ತೆ ಚೂರಿ ಇರಿತ

ಸಿಡ್ನಿ ಚರ್ಚ್ ನಲ್ಲಿ ನಡೆದ ಚೂರಿ ಇರಿತದಲ್ಲಿ ಹಲವಾರು ಜನರು ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಪೊಲೀಸ್ ಅಧಿಕಾರಿಗಳನ್ನು ಉಲ್ಲೇಖಿಸಿ ವರದಿಗಳು ತಿಳಿಸಿದೆ. ಘಟನೆ ಸಂಬಂಧ ಅಧಿಕಾರಿಗಳು



ಒಬ್ಬ ಪುರುಷನನ್ನು ಬಂಧಿಸಿದ್ದು ಆತನನ್ನು ವಿಚಾರಣೆ ಮಾಡಲಾಗುತ್ತಿದೆ ಎಂದು ಪೊಲೀಸ್ ಹೇಳಿಕೆ ತಿಳಿಸಿದೆ. ಚೂರಿ ಇರಿತದಿಂದ ಹಲವರಿಗೆ ಗಾಯಗಳಾಗಿದ್ದು, ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಚರ್ಚ್ ನಲ್ಲಿ ನಡೆದ ಪ್ರಾರ್ಥನೆಯ ಸಮಯದಲ್ಲಿ ಚರ್ಚ್ ನಾಯಕ ಮತ್ತು ಹಲವಾರು ಆರಾಧಕರಿಗೆ ಚೂರಿಯಿಂದ ಇರಿದಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಈ ಘಟನೆಯ ವೀಡಿಯೊಗಳು ಆನ್ ಲೈನ್ ನಲ್ಲಿ ಹರಿದಾಡುತ್ತಿದೆ.ಸಿಡ್ನಿಯ ಬೊಂಡಿ ಪ್ರದೇಶದ ಮಾಲ್ ನಲ್ಲಿ ಶನಿವಾರ ಚಾಕು ಇರಿತದಿಂದ ಆರು ಜನರು ಸಾವನ್ನಪ್ಪಿದ ನಂತರ ಸಿಡ್ನಿಯಲ್ಲಿ ನಡೆದ ಎರಡನೇ ಘಟನೆ ಇದಾಗಿದೆ.

## ಕೇಜ್ರಿವಾಲ್ ರಿಲೀಫ್

**ನವದೆಹಲಿ:** ತಮ್ಮ ಬಂಧನವನ್ನು ಪ್ರಶ್ನಿಸಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆಯನ್ನು ಸುಪ್ರೀಂಕೋರ್ಟ್ ಏ.29ಕ್ಕೆ ಮುಂದೂಡಿದೆ. ಪ್ರಕರಣ ಸಂಬಂಧ ಜಾರಿ ನಿರ್ದೇಶನಾಲಯಕ್ಕೆ ನೋಟಿಸ್ ನೀಡಿದ್ದು ಏಪ್ರಿಲ್ 24 ರೊಳಗೆ ಪ್ರತಿಕ್ರಿಯೆ ನೀಡುವಂತೆ ಸೂಚನೆ ನೀಡಿದೆ. ದೆಹಲಿ ಮದ್ಯ ನೀತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿ ಇಡಿ ಬಂಧಿಸಿದ್ದನ್ನು ಪ್ರಶ್ನಿಸಿ ಹೈಕೋರ್ಟ್ನಲ್ಲಿ ಜಾಮೀನು ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ಇಡಿ ಬಂಧನ ಕಾನೂನು ವ್ಯಾಪ್ತಿಯಲ್ಲಿದೆ. ಪ್ರಕರಣವನ್ನು ರಾಜಕೀಯಗೊಳಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟು ಅರ್ಜಿ ವಜಾ ಮಾಡಿತ್ತು.



## 200 ಕೋಟಿ ಆಸ್ತಿ ದಾನ ಮಾಡಿ ಸನ್ಯಾಸತ್ವ ಸ್ವೀಕರಿಸಿದ ದಂಪತಿ

**ಗಾಂಧಿನಗರ:** ಗುಜರಾತ್ನ ಶ್ರೀಮಂತ ದಂಪತಿ ತಮ್ಮ 200 ಕೋಟಿ ಬೆಲೆ ಬಾಳುವ ಆಸ್ತಿಯನ್ನು ದಾನ ಮಾಡಿ ಅವರು ಸನ್ಯಾಸತ್ವ ಪಡೆದಿದ್ದಾರೆ.ಸಬರ್ಕಾಂತ ಜಿಲ್ಲೆಯ ಹಿಮ್ಮತ್ನಗರದ ಉದ್ಯಮಿ ಭವೇಶ್



ಭಾಯ್ ಭಂಡಾರಿ ಮತ್ತು ಅವರ ಪತ್ನಿ ಜೈನ ಸಮುದಾಯದ ದೀಕ್ಷೆ ಪಡೆದು ಸನ್ಯಾಸತ್ವ ಪಡೆಯಲು ಸಿದ್ಧರಾಗಿದ್ದಾರೆ. ಸನ್ಯಾಸತ್ವ ಹಿನ್ನಲೆ ಫೆಬ್ರವರಿಯಲ್ಲಿ ತಮ್ಮ 200 ಕೋಟಿ ಆಸ್ತಿಯನ್ನು ದತ್ತಿ ಸಂಸ್ಥೆಗೆ ದಾನ ಮಾಡಿದ್ದು ಇದೇ ತಿಂಗಳ ಕೊನೆಯಲ್ಲಿ ನಡೆಯುವ ಸಮಾರಂಭದಲ್ಲಿ ಅಧಿಕೃತವಾಗಿ ಸನ್ಯಾಸತ್ವ ಸ್ವೀಕರಿಸಲಿದ್ದಾರೆ. ವೇಶ್ ದಂಪತಿಯ ಮಕ್ಕಳು ಸಹ 2 ವರ್ಷಗಳ ಹಿಂದೆ ದೀಕ್ಷೆ ಪಡೆದಿದ್ದರು. ಇದೀಗ ಮಕ್ಕಳ ಹೆಜ್ಜೆಯನ್ನೆ ಅನುಸರಿಸಿದ ದಂಪತಿ, ಏಪ್ರಿಲ್ 22 ರಂದು ಪ್ರತಿಜ್ಞೆಯನ್ನು ತೆಗೆದುಕೊಂಡ ನಂತರ, ದಂಪತಿಗಳು ಎಲ್ಲಾ ಕುಟುಂಬ ಸಂಬಂಧಗಳನ್ನು ಕಡಿದುಕೊಳ್ಳಬೇಕಾಗುತ್ತದೆ ಮತ್ತು ಯಾವುದೇ 'ಭೌತಿಕ ವಸ್ತುಗಳನ್ನು' ಇಟ್ಟುಕೊಳ್ಳಲು ಅನುಮತಿಸಲಾಗುವುದಿಲ್ಲ. ನಂತರ ಅವರು ಭಾರತದಾದ್ಯಂತ ಬರಿಗಾಲಿನಲ್ಲಿ ನಡೆಯುತ್ತಾರೆ ಮತ್ತು ಭಿಕ್ಷೆಯಿಂದ ಮಾತ್ರ ಬದುಕುತ್ತಾರೆ.

# 17 ಭಾರತೀಯರ ಬಿಡುಗಡೆಗೆ ಇರಾನ್ನಿಂದ ಸಕಾರಾತ್ಮಕ ಸ್ಪಂದನೆ

ಇರಾನ್ ವಶದಲ್ಲಿರುವ ಸರಕು ಹಡಗಿನಲ್ಲಿದ್ದ 17 ಭಾರತೀಯರನ್ನು ಬಿಡುಗಡೆ ಮಾಡುವ ಸಂಬಂಧ ಆ ದೇಶದ ವಿದೇಶಾಂಗ ಸಚಿವರ ಜತೆ ಮಾತನಾಡಿದ್ದು, ಅವರಿಂದ



ಸಕಾರಾತ್ಮಕ ಪ್ರತಿಕ್ರಿಯೆ ಸಿಕ್ಕಿದೆ ಎಂದು ಭಾರತದ ವಿದೇಶಾಂಗ ಸಚಿವ ಎಸ್. ಜೈ ಶಂಕರ್ ತಿಳಿಸಿದರು. ನಮ್ಮ ಮಾತುಕತೆ ಬಳಿಕ ವಿದೇಶಾಂಗ ಇಲಾಖೆಯ ಅಧಿಕಾರಿಗಳು ಮುಂದಿನ ಪ್ರಕ್ರಿಯೆ ಆರಂಭಿಸಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು. ಭಾರತದ ಆತಂಕ ಅರ್ಥವಾಗುತ್ತದೆ ಎಂದು ಇರಾನ್ ವಿದೇಶಾಂಗ ಸಚಿವರು ನನಗೆ ಹೇಳಿದರು. ಹೀಗಾಗಿ ಬಿಡುಗಡೆ ವಿಶ್ವಾಸವಿದೆ. ಭಾರತದ ಒಳಗೂ, ಹೊರಗೂ ಪ್ರತಿಯೊಬ್ಬ ಭಾರತೀಯನ ರಕ್ಷಣೆ ಮೋದಿಯವರ ಗ್ಯಾರಂಟಿ ಎಂದೂ ಜೈ ಶಂಕರ್ ಹೇಳಿದರು. ಮಧ್ಯ ಪ್ರಾಚ್ಯ ಭಾಗದಲ್ಲಿ 90 ಲಕ್ಷ ಭಾರತೀಯರು ವಾಸವಿದ್ದಾರೆ. ಅವರ ರಕ್ಷಣೆಯೇ ನಮ್ಮ ಬದ್ಧತೆ. ಈ ಹಿನ್ನೆಲೆಯಲ್ಲಿ ಇಸ್ರೇಲ್ ಮತ್ತು ಇರಾನ್ ಎರಡೂ ದೇಶಗಳ ಸಂಪರ್ಕದಲ್ಲಿ ಇದ್ದೇವೆ. ಸಂಘರ್ಷ ಬಿಟ್ಟು ಮಾತುಕತೆಗೆ ಸಲಹೆ ನೀಡಿದ್ದೇವೆ ಎಂದು ಜೈಶಂಕರ್ ತಿಳಿಸಿದರು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಕಾಂತಾರ' ಪ್ರೀಕ್ವೆಲ್ ಸಿನಿಮಾದಲ್ಲಿ ಸಪ್ತಮಿ ಗೌಡಗೆ ಪಾತ್ರವಿಲ್ಲ



ಕಾಂತಾರ ಸಿನಿಮಾದ ಮೂಲಕ ಸ್ಟಾರ್ ನಟಿಯಾಗಿ ಗುರುತಿಸಿಕೊಂಡಿರುವ ಸಪ್ತಮಿ ಗೌಡ ಅವರಿಗೆ ಕಾಂತಾರ ಪ್ರೀಕ್ವೆಲ್ ಸಿನಿಮಾದಲ್ಲಿ ನಟಿಸುತ್ತಿಲ್ಲ. ಕಾರಣ, ಅವರಿಗೆ ಪಾತ್ರವಿಲ್ಲ. ಈ ಕುರಿತು ಮಾತನಾಡಿರುವ ಸಪ್ತಮಿ ಗೌಡ, 'ಸಿನಿಮಾದಲ್ಲಿ ನನ್ನ ಪಾತ್ರವಿಲ್ಲ. ಹಾಗಾಗಿ ಹೇಗೆ ನಟಿಸೋಕೆ ಸಾಧ್ಯ? ನಾನು ಪ್ರೀಕ್ವೆಲ್ ನಲ್ಲಿ ನಟಿಸುತ್ತಿಲ್ಲ ಎಂದಿದ್ದಾರೆ.

ರಿಷಬ್ ಶೆಟ್ಟಿ ನಿರ್ದೇಶಿಸಿ, ನಟಿಸುತ್ತಿರುವ ಕಾಂತಾರ ಪ್ರೀಕ್ವೆಲ್ ಚಿತ್ರದ ಶೂಟಿಂಗ್ ನಡೆಯಲಿದೆ. ಈಗಾಗಲೇ ಶೂಟಿಂಗ್ ಸ್ಥಳದಲ್ಲಿ ಚಿತ್ರತಂಡ ಬೀಡು ಬಿಟ್ಟಿದ್ದು, ಚಿತ್ರೀಕರಣಕ್ಕಾಗಿ ಬಹೃತ್ ಸೆಟ್ ಅನ್ನು ರಿಷಬ್ ಊರಿನಲ್ಲಿ ನಿರ್ಮಾಣವಾಗಿದೆ. ಅಲ್ಲಿಯೇ ಬಹುತೇಕ ಚಿತ್ರೀಕರಣ ನಡೆಯಲಿದೆ.

ಕಾಂತಾರ 1 ಚಿತ್ರದ ಶೂಟಿಂಗ್ ಇನ್ನೂ ಪ್ರಾರಂಭವೇ ಆಗಿಲ್ಲ. ಆಗಲೇ ಒಟಿಟಿಗೆ ಚಿತ್ರವನ್ನು ಮಾರಿಕೊಂಡಿದ್ದಾರೆ ನಿರ್ಮಾಪಕ ವಿಜಯ ಕಿರಗಂದೂರು. ಕಾಂತಾರ ಚಿತ್ರದ ಒಟಿಟಿ ಹಕ್ಕನ್ನು ಪ್ರೈಮ್ ವಿಡಿಯೋ ಖರೀದಿಸಿದ್ದು, ಭಾರೀ ಮೊತ್ತಕ್ಕೆ ಸೇಲ್ ಮಾಡಲಾಗಿದೆ ಎಂದು ಹೇಳಲಾಗುತ್ತಿದೆ. ಅಂದಾಜಿನ ಪ್ರಕಾರ, ಸಿನಿಮಾದ ಬಜೆಟ್ ನ ಅರ್ಧದಷ್ಟು ದುಡ್ಡು ಒಟಿಟಿಯಿಂದಲೇ ಬಂದಿದೆ ಎನ್ನುವುದು ಸಿಕ್ಕಿರುವ ಮಾಹಿತಿ.

ಈ ನಡುವೆ 'ಕಾಂತಾರ' ಸಿನಿಮಾದ ಬಗ್ಗೆ ಸಾಕಷ್ಟು ಸುದ್ದಿಗಳು ಹರಿದಾಡುತ್ತಿವೆ. ಅದರಲ್ಲೂ ರಿಷಬ್ ಸಿನಿಮಾದಲ್ಲಿ ಜ್ಯೂ.ಎನ್‌ಟಿಆರ್ ನಟಿಸುತ್ತಾರೆ ಎಂಬ ಸುದ್ದಿ ದೊಡ್ಡ ಮಟ್ಟದಲ್ಲೇ ವೈರಲ್ ಆಗಿದೆ. ರಿಷಬ್ ಶೆಟ್ಟಿ ಸೈಲೆಂಟಾಗಿದ್ದಾರೆ. ಕಾರಣ ಕರಾವಳಿಯಲ್ಲಿ 'ಕಾಂತಾರ' ಚಿತ್ರೀಕರಣದ ಸಿದ್ಧತೆ ನಡೆಯುತ್ತಿದೆ. ಹಾಗಾಗಿ ಕಾಣಿಸುತ್ತಿಲ್ಲ ಶಿವ. ಆದರೆ ಮೊನ್ನೆ ಅವರು ಜ್ಯೂ.ಎನ್ ಟಿಆರ್ ಜೊತೆ ದಿಢೀರ್ ಎಂದು ಪೋಸ್ ಕೊಟ್ಟರು. ಅಲ್ಲಿಂದ ಆರಂಭ ತಲೆಗೊಂದು ಲೆಕ್ಕಾಚಾರ. ಹಾಗಾಗಿ ರಿಷಬ್ ಜೊತೆ ತಾರಕ್ ನಟಿಸುತ್ತಾರೆ ಎಂಬ ಗುಸು ಗುಸು ಶುರುವಾಗಿದೆ.

ರಿಷಬ್ ಶೆಟ್ಟಿ ಈಗ ಎಲ್ಲೂ ಕಾಣುತ್ತಿಲ್ಲ. ಅದನ್ನು ಅವರೇ ಹೇಳಿದ್ದರು. ಶೂಟಿಂಗ್ ಆರಂಭವಾದ ಮೇಲೆ ನಾಟ್ ರೀಚೆಬಲ್ ಎಂದಿದ್ದರು. ಅದನ್ನು ಮಾಡಿ ತೋರಿಸುತ್ತಿದ್ದಾರೆ. ಈ ನಡುವೆ ಟಾಲಿವುಡ್ ಯಂಗ್ ಟೈಗರ್ ಜ್ಯೂ.ಎನ್‌ಟಿಆರ್ ಜೊತೆ ಪತ್ನಿ ಪ್ರಗತಿ ಸಮೇತ ಕಾಣಿಸಿಕೊಂಡಿದ್ದಾರೆ. ಆಗ ಎಲ್ಲರೂ ಸೇರಿ ಫೋಟೊ ತೆಗೆಸಿಕೊಂಡರು. ಆಗ ಆಕಾಶಕ್ಕೇರಿದ ಗಾಳಿಪಟದ ಹಾರಾಟ ಈಗಲೂ ನಿಂತಿಲ್ಲ. ಇದರ ಪರಿಣಾಮ, ಕಾಂತಾರದಲ್ಲಿ ಜ್ಯೂ.ಎನ್‌ಟಿಆರ್ ಕೂಡ ಬಣ್ಣ ಹಚ್ಚಲಿದ್ದಾರೆ. ಹಿಂದೆಂದೂ ಕಾಣದ ರೀತಿಯಲ್ಲಿ ಕಾಣಿಸಲಿದ್ದಾರೆ. ಇದು ನಿಜವಾ ಸುಳ್ಳಾ? ಗೊತ್ತಿಲ್ಲ. ಈ ಸುದ್ದಿ ಮಾತ್ರ ಈಗ ನೆಟ್ಟಿಗರ ಚರ್ಚೆಗೆ ಗ್ರಾಸವಾಗಿದೆ.



# ಹಂಸಲೇಖ ಸಮ್ಮುಖದಲ್ಲಿ 'ಕಲ್ಜಿಗ' ಚಿತ್ರದ ಟೈಟಲ್-ಪೋಸ್ಟರ್ ಅನಾವರಣ!

ಕರಾವಳಿ ಸೀಮೆಯಿಂದ ಕನ್ನಡ ಚಿತ್ರರಂಗಕ್ಕೆ ಈಗಾಗಲೇ ಅನೇಕರು ಆಗಮಿಸಿದ್ದಾರೆ. ಒಂದಷ್ಟು ಗೆಲುವನ್ನೂ ದಾಖಲಿಸಿದ್ದಾರೆ. ಇದೀಗ 'ಕಲ್ಜಿಗ' ಎಂಬ ಚಿತ್ರದ ಮೂಲಕ ಮತ್ತೊಂದು ತಂಡ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದೆ. ಶೀರ್ಷಿಕೆಯಲ್ಲಿಯೇ ಕೌತುಕ ಬೆರೆತ ಸೆಳೆತವೊಂದನ್ನು ಬಚ್ಚಿಟ್ಟುಕೊಂಡಂತಿರುವ ಈ ಚಿತ್ರದ ಟೈಟಲ್ ಹಾಗೂ ಪೋಸ್ಟರ್ ಇದೀಗ ಅನಾವಣಗೊಂಡಿದೆ. ಚಿತ್ರತಂಡ, ನಾನಾ ಕ್ಷೇತ್ರದ ಗಣ್ಯರು ಮತ್ತು ನಾದಬ್ರಹ್ಮ ಹಂಸಲೇಖ ಸಮ್ಮುಖದಲ್ಲಿ ಕಲ್ಜಿಗದ ಟೈಟಲ್ ಹಾಗೂ ಪೋಸ್ಟರ್ ಬಿಡುಗಡೆಗೊಂಡಿದೆ.

ಹಿಮಾನಿ ಫಿಲಂಸ್ ಬ್ಯಾನರಿನಡಿಯಲ್ಲಿ ನಿರ್ಮಾಣಗೊಂಡಿರುವ ಕಲ್ಜಿಗ ಚಿತ್ರವನ್ನು ಸುಮನ್ ಸುವರ್ಣ ನಿರ್ದೇಶನ ಮಾಡಿದ್ದಾರೆ. ವಿಶೇಷವೆಂದರೆ, ಬಹು ಕಾಲದ ನಂತರ ನಾದಬ್ರಹ್ಮ ಹಂಸಲೇಖ ಈ ಸಿನಿಮಾ ಮೂಲಕ ಸಂಗೀತ ನಿರ್ದೇಶನಕ್ಕೆ ಮರಳಿದ್ದಾರೆ. ಗೀತರಚನೆಯತ್ತಲೂ ಹೊರಳಿಕೊಂಡಿದ್ದಾರೆ. ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಖುದ್ದು ಹಂಸಲೇಖ ಅವರೇ ಹಾಜರಿದ್ದರು. ಈ ಸಂದರ್ಭದಲ್ಲಿ ಚಿತ್ರತಂಡವನ್ನು ಮೆಚ್ಚಿಕೊಳ್ಳುತ್ತಲೇ ಒಂದಷ್ಟು ವಿಚಾರಗಳನ್ನು ಹಂಚಿಕೊಂಡಿದ್ದಾರೆ. ನಲವತ್ತಕ್ಕೂ ಹೆಚ್ಚು ಸಿನಿಮಾಗಳ ಆಫರ್ ಗಳನ್ನು ತಿರಸ್ಕರಿಸಿ, ಕಲ್ಜಿಗ ಚಿತ್ರದತ್ತ ಆಕರ್ಷಿತರಾದುದಕ್ಕೆ ಕಾರಣಗಳನ್ನು ಬಿಚ್ಚಿಟ್ಟರು. ಒಟ್ಟಾರೆಯಾಗಿ, ನಾದಬ್ರಹ್ಮನ ಮಾತುಗಳಲ್ಲಿ ಒಂದಿಡೀ ಚಿತ್ರ ಮೂಡಿ ಬಂದಿರಬಹುದಾದ ರೀತಿಯ ಬಗ್ಗೆ ಮೆಚ್ಚುಗೆ ಹೊಮ್ಮುತ್ತಿತ್ತು.

ಇನ್ನುಳಿದಂತೆ, ಗಿರ್ ಗಿಟ್, ಸರ್ಕಸ್, ಗಮ್ಜಾಲ್ ಮುಂತಾದ ಚಿತ್ರಗಳಲ್ಲಿ ನಿರ್ದೇಶನ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದ ಸುಮನ್ ಸುವರ್ಣ 'ಕಲ್ಜಿಗ'ದ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ. ತುಳು ಚಿತ್ರರಂಗದಲ್ಲಿ ಕಿಂಗ್ ಆಫ್ ಆಕ್ಷನ್ ಎಂಬ ಬಿರುದಾಂಕಿತರಾಗಿರುವ ಅರ್ಜುನ್ ಕಾಪಿಕಾಡ್ ಈ ಚಿತ್ರದ ನಾಯಕನಾಗಿ ನಟಿಸಿದ್ದಾರೆ. ಅಪ್ಪಟ ಕನ್ನಡತಿ ಸುಶ್ಮಿತಾ ಭಟ್ ನಾಯಕಿಯಾಗಿ ಜೊತೆಯಾಗಿದ್ದಾರೆ. ಎಸ್ ಕೆ ಗ್ರೂಪ್ ಎಂಬ ಮಾರ್ಕೆಟಿಂಗ್ ಸಂಸ್ಥೆಯ ಮಾಲೀಕರಾಗಿರುವ ಶರತ್ ಕುಮಾರ್ ಎ.ಕೆ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ.

ಸದ್ಯದ ಮಟ್ಟಿಗೆ ಕಲ್ಜಿಗದ ಆಂತರ್ಯವನ್ನು ಚಿತ್ರತಂಡ ಗೌಪ್ಯವಾಗಿಟ್ಟಿದೆ. ಈಗಾಗಲೇ ಉಡುಪಿ, ಮಂಗಳೂರು ಸುತ್ತಮುತ್ತಲ ಪ್ರದೇಶಗಳಲ್ಲಿ ಚಿತ್ರೀಕರಣ ಮುಕ್ತಾಯವಾಗಿದೆ. ಇದೀಗ ಮುಕ್ಕಾಲು ಭಾಗ ಪೋಸ್ಟ್ ಪ್ರೊಡಕ್ಷನ್ ಕಾರ್ಯವೂ ಸಮಾಪ್ತಿಗೊಂಡಿದೆ. ಮಂಗಳೂರು ಸೀಮೆಯ ಕನ್ನಡ ಭಾಷಾ ಶೈಲಿಯಲ್ಲಿ ತಯಾರಾಗಿರುವ ಈ ಚಿತ್ರವನ್ನು ತುಳುವಿಗೆ ಡಬ್ ಮಾಡಲಾಗಿದೆಯಂತೆ. ಧರ್ಮದ ದಾರಿಯಲ್ಲಿ ಅಧರ್ಮದ ನೆರಳು ಬಿದ್ದ ನಂತರದಲ್ಲಿ ಘಟಿಸುವ ರೋಚಕ ಕಥನ ಕಲ್ಜಿಗದಲ್ಲಿದೆಯಂತೆ. ಈ ಪೋಸ್ಟರ್ ಮತ್ತು ಟೈಟಲ್ ಅನಾವರಣದ ವೇದಿಕೆಯಲ್ಲಿ ಚಿತ್ರತಂಡದ ಕಡೆಯಿಂದ ಇವಿಷ್ಟು ಮಾಹಿತಿಗಳು ಜಾಹೀರಾಗಿವೆ.



ಈ ಸಂದರ್ಭದಲ್ಲಿ ಛಾಯಾಗ್ರಾಹಕ ಸಚಿನ್ ಶೆಟ್ಟಿ, ಕುಲದಲ್ಲಿ ಕೀಳ್ಯಾವುದೋ ಸಿನಿಮಾ ನಿರ್ಮಾಪಕ ಸಂತೋಷ್ ಕುಮಾರ್, ನಿರ್ವತ್ತ ಪೊಲೀಸ್ ಅಧಿಕಾರಿ ಶಿವಪ್ರಕಾಶ್ ಮತ್ತು ಚಿತ್ರತಂಡ ಹಾಜರಿತ್ತು. ಹಂಸಲೇಖ ಸಂಗೀತ, ಸಾಹಿತ್ಯ, ಸಚಿನ್ ಶೆಟ್ಟಿ ಛಾಯಾಗ್ರಹಣ, ಪ್ರಸಾದ್ ಕೆ ಶೆಟ್ಟಿ ಹಿನ್ನೆಲೆ ಸಂಗೀತ, ಯಶ್ವಿನ್ ಕೆ ಶೆಟ್ಟಿಗಾರ್ ಸಂಕಲನ ಈ ಚಿತ್ರಕ್ಕಿದೆ. ಕಾಂತಾರ ಖ್ಯಾತಿಯ ಸನೀಲ್ ಗುರು ಕ್ರಿಯೇಟಿವ್ ಹೆಡ್ ಆಗಿ ಕಾರ್ಯನಿರ್ವಹಿಸಿದ್ದಾರೆ. ಕಾರ್ಯಕಾರಿ ನಿರ್ಮಾಪಕರಾಗಿ ರಾಧಾಕೃಷ್ಣ ಮಾಣಿಲ, ಪ್ರೊಡಕ್ಷನ್ ಮ್ಯಾನೇಜರ್ ಆಗಿ ಸಂದೀಪ್ ಶೆಟ್ಟಿ 'ಕಲ್ಜಿಗ'ಕ್ಕೆ ಕೈ ಜೋಡಿಸಿದ್ದಾರೆ. ಈಗಾಗಲೇ ಕಲ್ಜಿಗ ಸೆಪೆಂಬರ್ ತಿಂಗಳಲ್ಲಿ ತೆರೆಗಾಣೋದು ಖಾತರಿಯಾಗಿದೆ. ಪೋಸ್ಟ್ ಪ್ರೊಡಕ್ಷನ್ ಕಾರ್ಯ ಸಂಪೂರ್ಣಗೊಂಡ ನಂತರದಲ್ಲಿ ಚಿತ್ರತಂಡ ಮತ್ತೊಂದಷ್ಟು ವಿಚಾರಗಳೊಂದಿಗೆ ಪ್ರೇಕ್ಷಕರನ್ನು ತಲುಪಿಕೊಳ್ಳಲಿದೆ.

# ಬೋಲ್ಡ್ ಪಾತ್ರ ಮಾಡೋಕೆ ರೆಡಿ

ಯಶಸ್ವಿನ ಅಲೆಯಲ್ಲಿ ತೇಲುತ್ತಿದ್ದ ಕರಾವಳಿ ಬೆಡಗಿ ಕೃತಿ ಶೆಟ್ಟಿ, ಇದೀಗ ಸಾಲು ಸಾಲು ಸೋಲುಗಳನ್ನು ಕಂಡು ಗಾಬರಿ ಬಿದ್ದಿದ್ದಾರೆ. ಕೈತುಂಬಾ ಅವಕಾಶಗಳನ್ನು ಇಟ್ಟುಕೊಂಡು ತಿರುಗಾಡುತ್ತಿದ್ದವರು, ಈಗ ಅವಕಾಶಕ್ಕಾಗಿ ಕಾಯುತ್ತಿದ್ದಾರಂತೆ. ಈ ಹಿಂದೆ ಬಿಕಿನಿ ತೊಡಲ್ಲ, ಬೋಲ್ಡ್ ಆಗಿ ಕಾಣಿಸಿಕೊಳ್ಳುವುದಿಲ್ಲ ಎನ್ನುತ್ತಿದ್ದವರು. ಈಗ ಅದಕ್ಕೆ ರೆಡಿ ಎಂದು ನಿರ್ಮಾಪಕರಿಗೆ ಆಫರ್ ಕೊಟ್ಟಿದ್ದಾರೆ ಎನ್ನಲಾಗುತ್ತಿದೆ.



10ನೇ ವಯಸ್ಸಿಗೆ ಜಾಹಿರಾತಿನಲ್ಲಿ ಕಾಣಿಸಿಕೊಂಡಿದ್ದ ಕೃತಿ ಶೆಟ್ಟಿ, 17ನೇ ವಯಸ್ಸಿಗೆ ಹೃತಿಕ್ ರೋಷನ್ ನಟನೆಯ 'ಸೂಪರ್ 30' ಚಿತ್ರದಲ್ಲಿ ಚಿಕ್ಕ ಪಾತ್ರದಲ್ಲಿ ನಟಿಸಿದ್ದರು. ಮೊದಲ ಚಿತ್ರ 'ಉಪ್ಪೇನ' ಮತ್ತು 'ಬಂಗಾರ್‌ರಾಜು' ಸಿನಿಮಾ ಗೆಲ್ತಿದ್ದಂತೆ ತಮ್ಮ ಸಂಭಾವನೆಯನ್ನ ಏರಿಸಿದ್ದರು. ಆ ನಂತರ ನಟಿಸಿದ ಕೆಲ ಚಿತ್ರಗಳು ಗಲ್ಲಾಪೆಟ್ಟಿಗೆ ಕಲೆಕ್ಷನ್ ಮಾಡೋದರಲ್ಲಿ ಸೋತಿತ್ತು.

ತಮಿಳಿನ ಸಿನಿಮಾವೊಂದರಲ್ಲಿ ಕೃತಿ ಶೆಟ್ಟಿಗೆ ಬಿಕಿನಿ ತೊಡುವಂತೆ ಸಲಹೆ ನೀಡಿದ್ದಾಗ, ಹೆಚ್ಚಿನ ಸಂಭಾವನೆ ಕೇಳಿದ್ದರಂತೆ. ಕೃತಿ ಶೆಟ್ಟಿ ಈವರೆಗೂ ಬಿಕಿನಿ ತೊಟ್ಟಿಲ್ಲ. ಈ ಕಾರಣಕ್ಕೆ ಕೃತಿ ಬಿಕಿನಿ ತೊಟ್ಟರೆ, ಈ ಸಿನಿಮಾ ಮತ್ತಷ್ಟು ಬೂಸ್ಟ್ ಸಿಗುತ್ತೆ ಎಂದು ಚಿತ್ರತಂಡ ಲೆಕ್ಕಾಚಾರ ಹಾಕಿಕ್ಕೊಂಡಿತ್ತು. ಆದರೆ, ಅವರು ಬಿಕಿನಿ ಧರಿಸೋಕೆ ಭಾರೀ ಮೊತ್ತವನ್ನೇ ಕೇಳಿದ್ದರಂತೆ.

ಬಿಕಿನಿ ಧರಿಸಲು ಓಕೆ ಎನ್ನುತ್ತಲೇ ಬಿಕಿನಿ ಧರಿಸೋಕೆ 5 ಕೋಟಿ ರೂಪಾಯಿ ಡಿಮ್ಯಾಂಡ್ ಮಾಡಿದ್ದರು ಎನ್ನಲಾಗಿತ್ತು. ಚಿತ್ರತಂಡ ಕೂಡ ಕೃತಿ ಮಾತಿಗೆ ಗ್ರೀನ್ ಸಿಗ್ನಲ್ ಕೊಟ್ಟು ಹಣ ನೀಡಿತ್ತು. 2 ಕೋಟಿ ರೂಪಾಯಿ ಸಂಭಾವನೆ ಪಡೆಯುತ್ತಿದ್ದ ನಟಿ, 5 ಕೋಟಿ ರೂಪಾಯಿ ಚಾರ್ಜ್ ಮಾಡಿದ್ದು ಅಚ್ಚರಿ ತಂದಿತ್ತು.

# ಪಾರ್ವತಿ ಪಾತ್ರದಲ್ಲಿ ಅನುಷ್ಕಾ ಶೆಟ್ಟಿ: ಶಿವನ ಪಾತ್ರದಲ್ಲಿ ಶಿವಣ್ಣ

ವಿಷ್ಣು ಮಂಚು ನಟನೆಯ ಕಣ್ಣಪ್ಪ ಸಿನಿಮಾ ಕುರಿತಂತೆ ದಿನಕ್ಕೊಂದು ಸುದ್ದಿ ಹೊರ ಬರುತ್ತಿವೆ. ಈ ಸಿನಿಮಾದಲ್ಲಿ ಹೆಸರಾಂತ ಕಲಾವಿದರೇ ತುಂಬಿದ್ದು, ಆ ಸಾಲಿಗೆ ಅನುಷ್ಕಾ ಶೆಟ್ಟಿ ಸೇರಿಕೊಂಡಿದ್ದಾರೆ. ಈ ಸಿನಿಮಾದಲ್ಲಿ ಅನುಷ್ಕಾ ಅವರು ಪಾರ್ವತಿಯ ಪಾತ್ರ ಮಾಡಲಿದ್ದಾರೆ. ಶಿವನಾಗಿ ಕನ್ನಡದ ನಟ ಶಿವರಾಜ್ ಕುಮಾರ್ ನಟಿಸಲಿದ್ದಾರೆ.



ಅನುಷ್ಕಾ ಶೆಟ್ಟಿ ಮಾತ್ರವಲ್ಲ, ಬಾಲಿವುಡ್ ಹೆಸರಾಂತ ಹೀರೋ ಅಕ್ಷಯ್ ಕುಮಾರ್ ಕೂಡ ವಿಷ್ಣು ಮಂಚು ನಟನೆಯ 'ಕಣ್ಣಪ್ಪ' ಸಿನಿಮಾಗೆ ಸಾಥ್ ನೀಡಲಿದ್ದಾರೆ. ಸಹಜವಾಗಿಯೇ ಅಕ್ಷಯ್ ಅಭಿಮಾನಿಗಳು ಸಂಭ್ರಮದಲ್ಲಿದ್ದಾರೆ.

ಸದ್ಯ ವಿಷ್ಣು ಮಂಚು ನಟನೆಯ ಸಿನಿಮಾ ಕಣ್ಣಪ್ಪ ಚಿತ್ರದಲ್ಲಿ ಪ್ರಭಾಸ್, ಮೋಹನ್ ಲಾಲ್, ಶರತ್ ಕುಮಾರ್ ಈಗಾಗಲೇ ಚಿತ್ರತಂಡವನ್ನು ಸೇರಿದ್ದಾರೆ. ಅಕ್ಷಯ್ ಕುಮಾರ್ ಕೂಡ ಈ ಪ್ರಾಜೆಕ್ಟ್‌ಗಳಲ್ಲಿ ನಟಿಸಲಿದ್ದಾರೆ. ಬಹುಮುಖ್ಯ ಪಾತ್ರಕ್ಕೆ ಜೀವ ತುಂಬಲಿದ್ದಾರೆ. ಪಾತ್ರದ ಕುರಿತು ಮುಂದಿನ ದಿನಗಳಲ್ಲಿ ತಂಡದ ಕಡೆಯಿಂದ ಮಾಹಿತಿ ಸಿಗಲಿದೆ.

ಬಿಗ್ ಬಜೆಟ್‌ನಲ್ಲಿ ಕಣ್ಣಪ್ಪ ಸಿನಿಮಾ ಮೂಡಿ ಬರಲಿದೆ. ಮಲ್ಟಿ ಸ್ಟಾರ್ ಗಳು ಈ ಸಿನಿಮಾದಲ್ಲಿ ನಟಿಸುತ್ತಿರುವ ಕಾರಣ ಚಿತ್ರದ ಮೇಲಿನ ನಿರೀಕ್ಷೆ ಹೆಚ್ಚಾಗಿದೆ.

# ಆರ್‌ಸಿಬಿಗೆ ಕಂಟಕವಾದ ಮಾಜಿ ಆರ್‌ಸಿಬಿ ಆಟಗಾರರು..!

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್‌ರೈಸರ್ಸ್ ಹೈದರಾಬಾದ್ ನಡುವಿನ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಹೈದರಾಬಾದ್ ತಂಡ 20 ಓವರ್ ಗಳಲ್ಲಿ 3 ವಿಕೆಟ್ ಕಳೆದುಕೊಂಡು 288 ರನ್ ಕಲೆಹಾಕಿದೆ.




ಹೈದರಾಬಾದ್ ಪರ ಆರಂಭಿಕರಾಗಿ ಕಣಕ್ಕಿಳಿದಿದ್ದ ಅಭಿಷೇಕ್ ಶರ್ಮಾ ಹಾಗೂ ಟ್ರಾವಿಡ್ ಹೆಡ್ ಸಿಡಿಲಬ್ಬರದ ಬ್ಯಾಟಿಂಗ್ ನಡೆಸಿದರು. ಈ ಇಬ್ಬರು ಮೊದಲ ವಿಕೆಟ್ ಗೆ 108 ರನ್ ಗಳ ಜೊತೆಯಾಟ ನಡೆಸಿದರು. ಅಲ್ಲದೆ ಪವರ್ ಪ್ಲೇನಲ್ಲಿ ಈ ಇಬ್ಬರು 76 ರನ್ ಕಲೆಹಾಕಿದರು.

ಇದೇ ವೇಳೆ ಟ್ರಾವಿಸ್ ಹೆಡ್ ಕೇವಲ 20 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಆ ನಂತರವೂ ತಣ್ಣಗಾಗದ ಹೆಡ್ ಮೈದಾನದಲ್ಲಿ ಬೌಂಡರಿ ಸಿಕ್ಸರ್ ಗಳ ಮಳೆಗರೆದರು. ಇದರ ಫಲವಾಗಿ ಹೆಡ್ ಕೇವಲ 39 ಎಸೆತಗಳಲ್ಲಿ ಶತಕ ಪೂರೈಸಿದರು.

ಇದು ಐಪಿಎಲ್ ಇತಿಹಾಸದಲ್ಲೇ 4ನೇ ಅತಿ ವೇಗದ ಶತಕ ಎನಿಸಿಕೊಂಡಿತು. ಅಲ್ಲದೆ ಈ ಸೀಸನ್ ನಲ್ಲಿ ಸಿಡಿದ ಮೊದಲ ವೇಗದ ಶತಕ ಎಂಬ ದಾಖಲೆಯನ್ನು ಹೆಡ್ ಸೃಷ್ಟಿಸಿದರು. ಅಂತಿಮವಾಗಿ ಹೆಡ್ 41 ಎಸೆತಗಳಲ್ಲಿ 102 ರನ್ ಬಾರಿಸಿ ಪೆವಿಲಿಯನ್ ಸೇರಿಕೊಂಡರು.

ಇವರಲ್ಲದೆ ಹೆನ್ರಿಕ್ ಕ್ಲಾಸೆನ್ ಕೂಡ ಸಿಡಿಲಬ್ಬರದ ಬ್ಯಾಟಿಂಗ್ ನಡೆಸಿ ಕೇವಲ 31 ಎಸೆತಗಳಲ್ಲಿ 2 ಬೌಂಡರಿ ಹಾಗೂ 7 ಸಿಕ್ಸರ್ ಸಹಿತ 67 ರನ್ ಬಾರಿಸಿದರು. ವಾಸ್ತವವಾಗಿ ಆರ್ ಸಿಬಿ ವಿರುದ್ಧ ಸಿಡಿಲಬ್ಬರದ ಬ್ಯಾಟಿಂಗ್ ನಡೆಸಿದ ಈ ಇಬ್ಬರು ಮಾಜಿ ಆರ್ ಸಿಬಿ ಆಟಗಾರರು ಎಂಬುದು ಇಲ್ಲಿ ಗಮನಿಸಬೇಕಾದ ಸಂಗತಿಯಾಗಿದೆ.

ಈ ಇಬ್ಬರ ಜೊತೆಗೆ ಕೊನೆಯಲ್ಲಿ ಸ್ಫೋಟಕ ಇನ್ನಿಂಗ್ಸ್ ಆಡಿದ ಐಡೆನ್ ಮಾರ್ಕ್ರಾಮ್ 17 ಎಸೆತಗಳಲ್ಲಿ 32 ರನ್ ಹಾಗೂ ಅಬ್ದುಲ್ ಸಮದ್ 10 ಎಸೆತಗಳಲ್ಲಿ 37 ರನ್ ಕಲೆಹಾಕಿ ತಂಡ ಐಪಿಎಲ್ ಇತಿಹಾಸದಲ್ಲೇ ಅತಿ ಹೆಚ್ಚು ಮೊತ್ತ ದಾಖಲಿಸಿದ ದಾಖಲೆ ಸೃಷ್ಟಿಸುವಂತೆ ಮಾಡಿದರು.

# ಆರ್ ಸಿಬಿ ಪ್ಲೇಆಫ್ ಕನಸು ಇನ್ನೂ ಜೀವಂತ

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಈ ಬಾರಿ ಅತ್ಯಂತ ಕಳಪೆ ಪ್ರದರ್ಶನ ನೀಡುತ್ತಿದೆ. ಆಡಿದ ಏಳು ಪಂದ್ಯಗಳಲ್ಲಿ ಆರು ಮ್ಯಾಚ್ ಗಳನ್ನು ಸೋಲುವ ಮೂಲಕ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿದೆ. ಪಂಜಾಬ್ ವಿರುದ್ಧ ಗೆಲುವು ಕಂಡು ಎರಡು ಅಂಕ ಪಡೆದಿದೆ. ರನ್ ರೇಟ್ ಕೂಡ ಹೀನಾಯ ಸ್ಥಿತಿಯಲ್ಲಿದ್ದು -1.185 ಇದೆ. ಇನ್ನು ಉಳಿದಿರೋದು ಕೇವಲ ಏಳು ಪಂದ್ಯಗಳು ಮಾತ್ರ. ಅಂಕಿ ಅಂಶಗಳನ್ನು ನೋಡಿದರೆ ಆರ್ ಸಿಬಿ ಪ್ಲೇ ಆಫ್ ಕನಸು ಇನ್ನೂ ಜೀವಂತವಾಗಿದೆ. ಚಮತ್ಕಾರ ನಡೆದರೆ ಮಾತ್ರ ಆರ್ ಸಿಬಿ ಪ್ಲೇಆಫ್ ತಲುಪಬಹುದು.



ಆರ್ ಸಿಬಿಗೆ ಉಳಿದಿರೋದು ಏಳು ಪಂದ್ಯಗಳು ಮಾತ್ರ. ಇದರಲ್ಲಿ ಏಳೂ ಪಂದ್ಯಗಳನ್ನು ಗೆಲ್ಲಬೇಕು. ಜೊತೆಗೆ ಈಗಿರುವ ಮೈನಸ್ ರನ್ ರೇಟ್ ನ ಪ್ಲಸ್ ಗೆ ತಂದುಕೊಳ್ಳಬೇಕು. ಇದರ ಜೊತೆಗೆ ಉಳಿದ ತಂಡಗಳ ಮ್ಯಾಚ್ ರಿಸಲ್ಟ್ ಕೂಡ ಆರ್ ಸಿಬಿ ಪ್ಲೇಆಫ್ ಮೇಲೆ ಪ್ರಭಾವ ಬೀರಲಿದೆ.

ಏಪ್ರಿಲ್ 15ರಂದು ನಡೆದ ಆರ್‌ಸಿಬಿ - ಎಸ್ ಆರ್‌ಎಚ್ ಪಂದ್ಯದಲ್ಲಿ ರನ್ ಗಳ ಮಳೆ ಹರಿದಿದೆ. 20 ಓವರ್ ಗಳಲ್ಲಿ 287 ರನ್ ಗಳನ್ನು ಕಲೆ ಹಾಕಿತ್ತು ಹೈದರಾಬಾದ್ ತಂಡ. ಇದನ್ನು ಬೆನ್ನು ಹತ್ತಿದ ಆರ್ ಸಿಬಿ ತಂಡ 262 ರನ್ ಕಲೆ ಹಾಕಲಷ್ಟೇ ಶಕ್ತವಾಯಿತು. ಈ ಮೂಲಕ 25 ರನ್ ಗಳ ಸೋಲು ಕಂಡಿತು. ಸದ್ಯದ ಪರಿಸ್ಥಿತಿಯಲ್ಲಿ ಆರ್ ಸಿಬಿ ಪ್ಲೇಆಫ್ ಕನಸು ಅಷ್ಟು ಸುಲಭದಲ್ಲಿ ಇಲ್ಲ. ಆರ್ ಸಿಬಿ ಪ್ಲೇಆಫ್ ತಲುಪಬೇಕು ಎನ್ನುವ ಕನಸು ಕನಸಾಗಿಯೇ ಉಳಿಯೋ ಸಾಧ್ಯತೆ ಇದೆ. 'ಈ ವರ್ಷ ಕಪ್ ನಮ್ಮದೇ' ಎನ್ನುವ ಸ್ಲೋಗನ್ ಮತ್ತೆ ಮುಂದುವರಿಸಬೇಕಾದ ಅನಿವಾರ್ಯತೆ ಇದೆ.

# ಹೆಣ್ಣುಮಕ್ಕಳ ಹೇಳಿಕೆ ಬಗ್ಗೆ ವಿಷಾದ ವ್ಯಕ್ತಪಡಿಸಿದ ಕುಮಾರಸ್ವಾಮಿ

**ಬೆಂಗಳೂರು:** ನಾನು ಹೆಣ್ಣುಮಕ್ಕಳನ್ನು ಅವಮಾನಿಸಿಲ್ಲ. ಮಹಿಳೆಯರ ಬದುಕು ಸರಿಪಡಿಸಬೇಕು ಅಂತ ಹೇಳಿದ್ದೇನೆ. ಗ್ಯಾರಂಟಿ ಕೊಟ್ಟು ಮಹಿಳೆಯರಿಗೆ ಅನ್ಯಾಯ ಮಾಡಿದ್ದಾರೆ ಅನ್ನೋದನ್ನ ಹೇಳಿದ್ದೇನೆ. ಆದ್ರೆ ಕಾಂಗ್ರೆಸ್ ನಾಯಕರು ಅವರಿಗೆ ಬೇಕಾದಂತೆ ನನ್ನ ಹೇಳಿಕೆಯನ್ನ ಬಳಸಿಕೊಂಡಿದ್ದಾರೆ. ನನ್ನ ಹೇಳಿಕೆಯಿಂದ ಮಹಿಳೆಯರಿಗೆ ದುಃಖ ಆಗಿದ್ದರೆ ಈಗಲೂ ವಿಷಾದ ವ್ಯಕ್ತಪಡಿಸುತ್ತೇನೆ ಎಂದು ನುಡಿದಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಇತ್ತೀಚೆಗೆ ನಾನು ತುಮಕೂರಿನಲ್ಲಿ ಚುನಾವಣೆ ಪ್ರಚಾರದಲ್ಲಿ ಭಾಗವಹಿಸಿದ್ದೆ. ಆ ಸಭೆಯಲ್ಲಿ ಹಲವಾರು ವಿಷಯಗಳನ್ನ ಪ್ರಸ್ತಾಪ ಮಾಡಿದ್ದೆ. ಮಹಿಳಾ ತಾಯಂದಿರ ಬಗ್ಗೆ ಕ್ಷಮೆ ಕೇಳಲು ಆಗದ ರೀತಿ ಅಪಮಾನ ಮಾಡಿದ್ದೇನೆ ಅಂತ ಕಾಂಗ್ರೆಸ್ ಅಧ್ಯಕ್ಷರು, ಶಾಸಕರು ತರಾತುರಿಯಲ್ಲಿ ಝೂಮ್ ಮೀಟಿಂಗ್ ಮಾಡಿದ್ದಾರೆ. ಇಂದಿರಾಗಾಂಧಿ ಹತ್ಯೆಯಾದ ಸಮಯದಲ್ಲಿ ದುಃಖಪಟ್ಟಿದ್ದು ಬಿಟ್ಟು ಈಗಲೇ ದುಃಖಪಟ್ಟೆ ಅಂತ ಅಧ್ಯಕ್ಷರು, ಮಹಿಳೆಯರ ಪರ ಕಂಬನಿ ಮಿಡಿದಿದ್ದಾರೆ. ಡಿಕೆ ಶಿವಕುಮಾರ್‌ಗೆ ಕೇಳ್ತೀನಿ, ಕೆಲವು ಹೆಣ್ಣುಮಕ್ಕಳನ್ನ ಕಿಡ್ನಾಪ್ ಮಾಡಿ ಜಮೀನು ಬರೆಸಿಕೊಂಡಾಗ ಇವರಿಗೆ ದುಃಖ ಬಂದಿಲ್ಲ ಪಾಪ. ದೆಲ್ಲವನ್ನು ನಾನು ಕಂಡಿದ್ದೇನೆ ಎಂದು ಲೇವಡಿ ಮಾಡಿದ್ದಾರೆ.

**ಕಾಂಗ್ರೆಸ್‌ದು ಪಿಕ್‌ಪಾಕೆಟ್ ಗ್ಯಾರಂಟಿ:** ಕಾಂಗ್ರೆಸ್ ನೀಡಿರುವ 5 ಗ್ಯಾರಂಟಿ ಪಿಕ್ ಪ್ಯಾಕೆಟ್ ಗ್ಯಾರಂಟಿ. ಕಾಂಗ್ರೆಸ್ ಸಚಿವರು, ನಾಯಕರು, ಮಹಿಳಾ ಘಟಕದವರು ಮಂಡ್ಯದಲ್ಲಿ 'ಗೋ ಬ್ಯಾಕ್ ಕುಮಾರಸ್ವಾಮಿ' ಅಂತ ಮಾಡಿದ್ದಾರೆ. ಅಲ್ಲಿಗೆ ಬಂದು ಹೆಣ್ಣುಮಕ್ಕಳನ್ನ ಕೇಳಿದ್ರೆ ಯಾಕೆ ಬಂದಿದ್ದೇವೆ ಗೊತ್ತಿಲ್ಲ ಅಂತ ಹೇಳ್ತಾರೆ. ಮಿಸ್ಟರ್ ಶಿವಕುಮಾರ್ ನಿಮ್ಮ ಉಸ್ತುವಾರಿ ಇದ್ದಾರೆ ಅಲ್ಲವಾ? ಆ ಮನುಷ್ಯ ಏನ್ ಹೇಳಿಕೊಟ್ರು? ಹೇಮಮಾಲಿನಿ ವಿರುದ್ಧ ಸುರ್ಜೇವಾಲಾ ಅವರು ಏನ್ ಹೇಳಿದ್ದರು? ಅದನ್ನ ಕನ್ನಡದಲ್ಲಿ ಓದೋಕೆ ಆಗಲ್ಲ. ಅದೆಲ್ಲ ಮಹಿಳೆಯರಿಗೆ ಗೌರವ ಕೊಡುವ ಹೇಳಿಕೆಗಳಾ? ಎಂದು ಪ್ರಶ್ನಿಸಿದ್ದಾರೆ.



**ಸಾವಿರಾರು ಕೋಟಿ ಆಫರ್ ಬಂದಿತ್ತು:** ನನ್ನ ಹೇಳಿಕೆ ನನ್ನ ಸಂಸ್ಕೃತಿ ತೋರಿಸುತ್ತೆ ಅಂತ ಹೇಳ್ತಾರೆ, 2 ಸಾವಿರ ಇವರು ಕೊಟ್ಟು ನಿಮ್ಮ ಯಜಮಾನರ ಜೇಬಿಂದ 5 ಸಾವಿರ ಕೀಳುತ್ತಿದ್ದಾರೆ. ಇದರಿಂದ ಎಚ್ಚರವಾಗಿರಿ ಅಂತ ನಾನು ಹೇಳಿದ್ದೇನೆ. ಆರ್ಥಿಕ ಶಕ್ತಿ ಬರಬೇಕು ಅಂತ ಭಾಷಣ ಮಾಡಿದ್ದೇನೆ. 2006-07 ಸಾರಾಯಿ ನಿಷೇಧ ಮಾಡಿದ್ದು ನಾನು, ಆವತ್ತು ನನಗೆ ಸಾವಿರಾರು ಕೋಟಿ ರೂ. ಆಫರ್ ಮಾಡಿದ್ರು. ಆದ್ರೆ ನಾನು ಮಹಿಳೆಯರಿಗಾಗಿ ಆ ಕೆಲಸ ಮಾಡಿದೆ. ಕಾಂಗ್ರೆಸ್ ಅವರಿಗೆ ನನ್ನ ಬಗ್ಗೆ ಮಾತಾಡೋಕೆ ವಿಷಯ ಇಲ್ಲ. ಅದಕ್ಕೆ ನನ್ನ ಮೇಲೆ ಮಾತಾಡ್ತಾರೆ ಅಂತಾ ತಿರುಗೇಟು ನೀಡಿದ್ದಾರೆ.

**ರೇಟ್ ಫಿಕ್ಸ್ ಮಾಡಿದ್ದು ಕಾಂಗ್ರೆಸ್:** ಕಂಗನಾ ರಣಾವತ್ ಬಗ್ಗೆ ಏನ್ ಮಾತಾಡಿದ್ರಿ? ಕಾಂಗ್ರೆಸ್ ನವರೇ ರೇಟ್ ಫಿಕ್ಸ್ ಮಾಡಿದ್ರು. ಅಷ್ಟೇ ಅಲ್ಲ, ರಮೇಶ್ ಕುಮಾರ್ ವಿಧಾನಸಭೆ ಕಲಾಪದಲ್ಲಿ ಏನ್ ಹೇಳಿದ್ರು ಮರೆತಿದ್ದೀರಾ? ಮದ್ದೂರಿನಲ್ಲಿ ನನ್ನ ಮಾಜಿ ಶಾಸಕರ ಬಗ್ಗೆ ಮಾತಾಡಿದ್ರು, ಶಾಮನೂರು ಶಿವಶಂಕರಪ್ಪ, ಮಹಿಳೆಯರು ಅಡುಗೆ ಮನೆಯಲ್ಲಿ ಇರೋಕೆ ಲಾಯಕ್ಕು ಅಂತಾರೆ. ಅದಕ್ಕೆ ನೀವೆ ಕ್ಷಮೆ ಕೇಳಿದ್ರಿ, ಶಿವಕುಮಾರ್ ಉತ್ತರ ಕೊಡಪ್ಪ, ನಿಮ್ಮ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಏನ್ ಹೇಳ್ತಾರೆ? ಅಂತ ಕುಟುಕಿದ್ದಾರೆ.

ಈ ವಿಷಯ ಇಟ್ಟುಕೊಂಡು ಚುನಾವಣೆಗೆ ಬಂದರೆ ಜನತೆ ಮನಸು ಪರಿವರ್ತನೆ ಮಾಡೋಕೆ ಆಗೊಲ್ಲ. ಎಷ್ಟು ಕುಟುಂಬಗಳನ್ನ ನಿಮ್ಮ ಆಸ್ತಿ ದುರಾಸೆಗೆ ಏನ್ ಮಾಡಿಕೊಂಡು ಬಂದಿದ್ದೀರಾ ಗೊತ್ತಿದೆ ನನಗೆ ಎಂದು ವಾಗ್ದಾಳಿ ನಡೆಸಿದ್ದಾರೆ.

# ಕರ್ನಾಟಕದಲ್ಲಿ ಮುಂದಿನ 3 ದಿನ ಒಣಹವೆ

**ಬೆಂಗಳೂರು:** ಕರ್ನಾಟಕದಲ್ಲಿ ಮುಂದಿನ ಮೂರು ದಿನಗಳ ಕಾಲ ಒಣಹವೆ ಇರಲಿದ್ದು, ಏ.18 ರಿಂದ ವಿವಿಧ ಜಿಲ್ಲೆಗಳಲ್ಲಿ ಮಳೆಯಾಗಲಿದೆ (ಖಚಿಟಿ) ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುಂದಿನ ಮೂರು ದಿನ ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಏ.18ರ ಬಳಿಕ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಬಾಗಲಕೋಟೆ, ಬೀದರ್, ಗದಗ, ಕೊಪ್ಪಳ, ಕಲಬುರಗಿ, ರಾಯಚೂರು, ವಿಜಯಪುರ, ಬಳ್ಳಾರಿ, ಕೋಲಾರ, ಬೆಂಗಳೂರು ಗ್ರಾಮಾಂತರ,



ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ಶಿವಮೊಗ್ಗ, ರಾಮನಗರ, ತುಮಕೂರು, ವಿಜಯಪುರದಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಆಗುಂಬೆ, ಧರ್ಮಸ್ಥಳ, ಎನ್‌ಆರ್‌ಪುರ, ಧಾರವಾಡ, ಬೇವೂರು, ಮುದಗಲ್, ಇಂಡಿ, ಶಿವಮೊಗ್ಗ, ಲಿಂಗನಮಕ್ಕಿ, ಆನವಟ್ಟಿ, ಔರಾದ್, ದೇವರಹಿಪ್ಪರಗಿ, ಯಡ್ರಾಮಿ, ಕಲಘಟಗಿ, ತ್ಯಾಗರ್ತಿ, ಕಳಸ, ಹರಪನಹಳ್ಳಿ, ಕುಡತಿನಿ, ಕೊಪ್ಪ, ತರೀಕೆರೆ, ಶೃಂಗೇರಿ, ಸಿದ್ದಾಪುರ, ಸಿಂಧನೂರು, ಹಿರೆಕೆರೂರು, ಲಕ್ಷ್ಮೇಶ್ವರ, ಅಣ್ಣಿಗೆರೆ, ಕಮ್ಮರಡಿ, ಸವಣೂರು, ತಾಳಗುಪ್ಪ, ಹುಂಚದಕಟ್ಟೆಯಲ್ಲಿ ಮಳೆಯಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com